₹ 4 ಪುಟ: 4 ಸಂಪುಟ: 4 ಸಂಚಿಕೆ 59 newsbelagavi@gmail.com 9900332089 9900332089



# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ

BELAGAVI VARADI KANNADA DAILY

Volume : 4 Issue: 59 Tuesday, 18, APRIL, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24



## ಹುಬ್ಬಳ್ಳಿಗೆ ಆಗಮಿಸಿದ ಶೆಟ್ಟರ್‌ಗೆ ಕಾಂಗ್ರೆಸ್ ಕಾರ್ಯಕರ್ತರಿಂದ ಭರ್ಜರಿ ಸ್ವಾಗತ

ಹುಬ್ಬಳ್ಳಿ: ಮಾಜಿ ಮುಖ್ಯಮಂತ್ರಿ, ಕಾಂಗ್ರೆಸ್ ಪಕ್ಷಕ್ಕೆ ಇಂದಷ್ಟೇ ಸೇರ್ಪಡೆಯಾದ ಜಗದೀಶ ಶೆಟ್ಟರ ಅವರು ನಗರಕ್ಕೆ ಆಗಮಿಸಿದಾಗ ಅವರನ್ನು ಕಾಂಗ್ರೆಸ್ ಪಕ್ಷದ ಧುರೀಣರು ಮತ್ತು ಕಾರ್ಯಕರ್ತರು ಇಲ್ಲಿನ ವಿಮಾನ ನಿಲ್ದಾಣದಲ್ಲಿ ಭವ್ಯವಾಗಿ ಸ್ವಾಗತಿಸಿದರು.

ಶೆಟ್ಟರ ಅವರು ಶ್ಯಾಮನೂರ ಶಿವಶಂಕರಪ್ಪ ಅವರಿಗೆ ಸೇರಿದ ಹೆಲಿಕಾಪ್ಟರ್ ಮೂಲಕ ಬೆಂಗಳೂರಿನಿಂದ ದಾವಣಗೆರೆಗೆ ಆಗಮಿಸಿ, ನಂತರ ಅಲ್ಲಿಂದ ನಗರಕ್ಕೆ ಅದೇ ಹೆಲಿಕಾಪ್ಟರ್ ನಲ್ಲಿ ಮಧ್ಯಾಹ್ನ 1:20 ಗಂಟೆ ಸುಮಾರಿಗೆ ಆಗಮಿಸಿದರು. ಅವರನ್ನು ನಿಲ್ದಾಣದಲ್ಲಿ ಅನಿಲಕುಮಾರ ಪಾಟೀಲ, ಅಲ್ತಾಫ ಹಳ್ಳೂರ, ರಜತ್ ಉಳ್ಳಾಗಡ್ಡಿಮಠ, ಗಿರೀಶ ಗದಿಗೆಪ್ಪಗೌಡರ ಪಕ್ಷದ ಶಾಲು ಹೊದಿಸಿ, ಹೂಗುಚ್ಛ ನೀಡಿ ಬರಮಾಡಿಕೊಂಡರು. ಅವರ ಸ್ವಾಗತಕ್ಕಾಗಿ ಬೆಳಗ್ಗೆ 11 ಗಂಟೆಯಿಂದಲೇ ಕಾಯುತ್ತಿದ್ದ ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರು.ಶೆಟ್ಟರ ಶೆಟ್ಟರ ಜಗದೀಶ ಶೆಟ್ಟರ, ಕಾಂಗ್ರೆಸ್ ಪಕ್ಷಕ್ಕೆ ಜಯವಾಗಲಿ ಎಂಬ ಘೋಷಣೆಗಳನ್ನು ಕೂಗಿದರು.

# ಬಿಜೆಪಿ-ಆರ್‌ಎಸ್‌ಎಸ್‌ನಿಂದ ಪ್ರಜಾಪ್ರಭುತ್ವದ ಮೇಲೆ ದಾಳಿ: ರಾಹುಲ್ ಗಾಂಧಿ

ಬೀದರ್: ಬಿಜೆಪಿ ಮತ್ತು ಆರ್‌ಎಸ್‌ಎಸ್ ಪ್ರಜಾಪ್ರಭುತ್ವದ ಮೇಲೆ ದಾಳಿ ನಡೆಸುತ್ತಿದ್ದು, ದೇಶದಲ್ಲಿ ದ್ವೇಷ ಮತ್ತು ಹಿಂಸಾಚಾರವನ್ನು ಹರಡುತ್ತಿವೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಕಿಡಿಕಾರಿದರು.

ಬಾಲ್ಕಿಯಲ್ಲಿ ಸೋಮವಾರ ಹಮ್ಮಿಕೊಳ್ಳಲಾಗಿರುವ ಕಾಂಗ್ರೆಸ್ ಜನಕ್ರಾಂತಿ ರ್ಯಾಲಿಯಲ್ಲಿ ಮಾತನಾಡಿದ ಅವರು, ಬೀದರ್ ಬಸವಣ್ಣನವರ ಕರ್ಮಭೂಮಿ. ಮೊದಲು ಪ್ರಜಾಪ್ರಭುತ್ವದ ಹಾದಿ ತೋರಿಸಿದ್ದೇ ಬಸವಣ್ಣನವರು. ಇಂದು ದೇಶದಾದ್ಯಂತ ಆರ್‌ಎಸ್‌ಎಸ್ ಮತ್ತು ಬಿಜೆಪಿಯವರು ಪ್ರಜಾಪ್ರಭುತ್ವದ ಮೇಲೆ ದಾಳಿ ನಡೆಸುತ್ತಿರುವುದು ಬೇಸರದ ಸಂಗತಿ. ದೇಶದಲ್ಲಿ ಪ್ರಜಾಪ್ರಭುತ್ವನ್ನು ಕಾಪಾಡಿಕೊಳ್ಳಬೇಕೆಂದರೆ ನಾವೆಲ್ಲರೂ ಒಗ್ಗಟ್ಟಾಗಿ ಮುನ್ನಡೆಯಬೇಕು ಎಂದರು.

ಬಿಜೆಪಿ ಹಾಗೂ ಆರ್‌ಎಸ್‌ಎಸ್ ಹಿಂದೂಸ್ಥಾನದಲ್ಲಿ ದ್ವೇಷ ಮತ್ತು ಹಿಂಸಾಚಾರವನ್ನು ಹರಡುತ್ತಿದೆ. ಅಲ್ಲದೇ ಬಡ ಮತ್ತು ದುರ್ಬಲ ವರ್ಗದ ಜನರ ಹಣವನ್ನು ಕಿತ್ತುಕೊಂಡು ಶ್ರೀಮಂತರಿಗೆ ನೀಡುತ್ತಿದೆ.

ಪ್ರತೀ ಬ್ಯಾಂಕ್ ಖಾತೆಗೆ 15 ಲಕ್ಷ ರೂ. ಹಣವನ್ನು ಠೇವಣಿ ಇಡುವುದು, ಕಪ್ಪು ಹಣದ ವಿರುದ್ಧ ಸಮರ ಸಾರುವುದು ಎಲ್ಲಾ ಪ್ರಧಾನಿ ನರೇಂದ್ರ ಮೋದಿಯವರ ಭರವಸೆಗಳು ಸುಳ್ಳಾಗಿದೆ.



ಕಾಂಗ್ರೆಸ್ ಈ ರೀತಿಯಾದ ಸುಳ್ಳು ಭರವಸೆಗಳನ್ನು ಜನರಿಗೆ ನೀಡುವುದಿಲ್ಲ.

ಕಾಂಗ್ರೆಸ್ ಅಧಿಕಾರಕ್ಕೆ ಬಂದ ತಕ್ಷಣ ಕೊಟ್ಟಿರುವ ಭರವಸೆಗಳನ್ನು ಈಡೇರಿಸಲಿದೆ ಎಂದರು.

ಕರ್ನಾಟಕದಲ್ಲಿ ಮೇ 10ರಂದು ನಡೆಯಲಿರುವ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಕನಿಷ್ಠ 150 ಸ್ಥಾನಗಳನ್ನು ಗೆದ್ದು ಪೂರ್ಣ ಬಹುಮತದೊಂದಿಗೆ ಅಧಿಕಾರಕ್ಕೆ ಬರಬೇಕು.

ಇದಕ್ಕೆ ಜನರು ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು ಎಂದು ಮನವಿ ಮಾಡಿದರು.

ಇದನ್ನೂ ಓದಿ: ಈ ಬಾರಿ ಚನ್ನಪಟ್ಟಣದ ಬೊಂಬೆ ಆಡಿಸುವವರ್ಯಾರು?

ಕಾಂಗ್ರೆಸ್ ಪಕ್ಷ ಜನರಿಗೆ ಗೃಹಜ್ಯೋತಿ, ಗೃಹಲಕ್ಷ್ಮಿ, ಅನ್ನಭಾಗ್ಯ ಹಾಗೂ ಯುವನಿಧಿ ಎಂಬ ನಾಲ್ಕು ಗ್ಯಾರಂಟಿಗಳನ್ನು ಘೋಷಿಸಿದೆ. ಕಾಂಗ್ರೆಸ್ ಆಡಳಿತಕ್ಕೆ ಬಂದ ನಂತರ ಸರ್ಕಾರದ ಮೊದಲ ಕ್ಯಾಬಿನೆಟ್ ಸಭೆಯಲ್ಲಿ ಚುನಾವಣಾ ಸಮಯದಲ್ಲಿ ನೀಡಿದಂತಹ ಗ್ಯಾರಂಟಿಗಳನ್ನು ಅನುಷ್ಠಾನಗೊಳಿಸುವ ಬಗ್ಗೆ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ.

ಕಾಂಗ್ರೆಸ್‌ನಿಂದ ಕರ್ನಾಟಕದ ಮುಖ್ಯಮಂತ್ರಿ ಯಾರೇ ಆಗಲಿ, ಅಧಿಕಾರಕ್ಕೆ ಬಂದ ಮೊದಲ ದಿನವೇ ಇದು ಜಾರಿಯಾಗಲಿದೆ ಎಂದು ಭರವಸೆ ನೀಡಿದರು.

ಸಮಾನತೆ ಮರೆಯಾಗುತ್ತಿದೆ. ಇಂದು ದೇಶದಲ್ಲಿ ದ್ವೇಷ ಹೆಚ್ಚುತ್ತಿದೆ, ಶಾಂತಿ ಮರೆಯಾಗುತ್ತಿದ್ದು, ಬಡವರ ಹಣ ಕಿತ್ತುಕೊಂಡು ಶ್ರೀಮಂತರಿಗೆ ನೀಡುವ ಕೆಲಸವಾಗುತ್ತಿದೆ.

ಈ ಮೂಲಕ ದೇಶದಲ್ಲಿ ಪ್ರಜಾಪ್ರಭುತ್ವ ಮಾರ್ಗ ತೋರಿದ ಬಸವಣ್ಣನವರ ಎಲ್ಲರಿಗೂ ಸಮಬಾಳು, ಎಲ್ಲರಿಗೂ ಸಮಪಾಲು ವಿಚಾರಧಾರೆಗಳ ಮೇಲೆ ದೌರ್ಜನ್ಯಗಳಾಗುತ್ತಿದೆ ಎಂದು ರಾಹುಲ್ ಆರೋಪಿಸಿದರು.

ಈ ವೇಳೆ ಕಾಂಗ್ರೆಸ್ ರಾಜ್ಯ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ, ಎಐಸಿಸಿ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ, ರಾಜು ಘಟಕದ ಅಧ್ಯಕ್ಷ ಪುಷ್ಪಾ ಅಮರನಾಥ್, ಭಾಲ್ಕಿ ವಿಧಾನ ಸಭಾ ಕ್ಷೇತ್ರದ ಅಭ್ಯರ್ಥಿ ಈಶ್ವರ ಖಂಡ್ರೆ ಬೀದರ್ ಶಾಸಕ ರಹೀಂ ಖಾನ್ ಮತ್ತಿತರ ಮುಖಂಡರು ರ್ಯಾಲಿಯಲ್ಲಿ ಪಾಲ್ಗೊಂಡಿದ್ದರು.

## ಶೆಟ್ಟರ್ ಗೆ ಟಿಕೆಟ್ ತಪ್ಪಿಸುವ ಕೆಲಸ ಮಾಡುತ್ತಿಲ್ಲ: ಬೊಮ್ಮಾಯಿ



ಹುಬ್ಬಳ್ಳಿ: 'ಮಾಜಿ ಸಿಎಂ ಕೊಡಿಸಲು ಸರ್ವ ಪ್ರಯತ್ನ ಮಾಡುತ್ತಿದ್ದೇವೆ. ಅವರ ಬೆಂಬಲಿಗರು ಮಾಡುತ್ತಿರುವ ಆರೋಪದಲ್ಲಿ ಹುರುಳಿಲ್ಲ' ಎಂದು ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಹೇಳಿದರು.

ಶನಿವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, 'ರಾಜಕಾರಣಕ್ಕೆ ಬರುವುದಕ್ಕಿಂತ ಮೊದಲೇ ಶೆಟ್ಟರ್ ಮತ್ತು ನಾವು ಸ್ನೇಹಿತರು. ಅವರಿಗೆ ಟಿಕೆಟ್ ತಪ್ಪಿಸುವ ಕೆಲಸ ಮಾಡುತ್ತಿಲ್ಲ. ಅವರಿಗೆ ಟಿಕೆಟ್ ಕೊಡಿಸಬೇಕೆಂದು ಪಕ್ಷದ ವರಿಷ್ಠರೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇವೆ' ಎಂದರು.

'ಜಗದೀಶ ಶೆಟ್ಟರ್ ಬಿಜೆಪಿಯ ನಿಷ್ಠಾವಂತ ನಾಯಕರಾಗಿದ್ದು, ಅವರದ್ದು ಜನಸಂಘ ಕಾಲದ ಮನೆತನ. ಉತ್ತರ ಕರ್ನಾಟಕ ಭಾಗಕ್ಕೆ ಅವರು ಅಗತ್ಯವಾಗಿದ್ದು, ಸಕ್ರಿಯ ರಾಜಕಾರಣದಲ್ಲಿ ಉಳಿಸಿಕೊಳ್ಳಬೇಕೆಂದು ವರಿಷ್ಠರಿಗೆ ಹೇಳಿದ್ದೇವೆ. ಜೆ.ಪಿ. ನಡ್ಡಾ ಅವರ ಜೊತೆಯೂ ಚರ್ಚಿಸಿದ್ದೇನೆ' ಎಂದು ಹೇಳಿದರು.

'ನೀರಾವರಿ ಯೋಜನೆಯಲ್ಲಿ ಬೊಮ್ಮಾಯಿ ಸಾವಿರಾರು ಕೋಟಿ ಭ್ರಷ್ಟಾಚಾರ ನಡೆಸಿದ್ದಾರೆ' ಎಂದು ನೆಹರು ಓಲೇಕಾರ ಮಾಡಿರುವ ಆರೋಪಕ್ಕೆ ಪ್ರತಿಕ್ರಿಯಿಸಿದ ಅವರು, 'ಭ್ರಷ್ಟಾಚಾರ ಆರೋಪಕ್ಕೆ ದಾಖಲೆಗಳಿದ್ದರೆ ಬಹಿರಂಗಪಡಿಸಲಿ. ನೀರಾವರಿ ಯೋಜನೆಯಲ್ಲಿ ನಡೆದ ಹಗರಣದಲ್ಲಿ ನೆಹರು ಓಲೇಕಾರ ಅವರಿಗೆ ಶಿಕ್ಷೆ ಆಗಿದೆ. ಅದನ್ನ ನೆನಪಿಸಿಕೊಳ್ಳಲಿ' ಎಂದು ತಿರುಗೇಟು ನೀಡಿದರು.

'ಟಿಕೆಟ್ ಹಂಚಿಕೆ ವಿಷಯದಲ್ಲಿ ಬಿಜೆಪಿಗೆ ಯಾವುದೇ ಗೊಂದಲವಿಲ್ಲ. ಆಕಾಂಕ್ಷಿಗಳ ನಡುವೆ ಪೈಪೋಟಿಯಿದ್ದು, ಎರಡು-ಮೂರು ದಿನಗಳಲ್ಲಿ ಎಲ್ಲವೂ ತಿಳಿಯಾಗುತ್ತದೆ. ಚುನಾವಣೆ ಎಂದರೆ ಸವಾಲು. ಅದನ್ನ ಸಮರ್ಥವಾಗಿ ಎದುರಿಸುತ್ತೇವೆ. ನಾನು ಮೊದಲು ಚುನಾವಣೆಯಲ್ಲಿ ಸ್ಪರ್ಧಿಸಿದಾಗ ಸೋಲುತ್ತೇನೆ ಎಂದು ವಿಶ್ಲೇಷಿಸಿದ್ದರು. ಅವೆಲ್ಲವೂ ಸುಳ್ಳಾಗಿ ಗೆದ್ದು ಬಂದಿದ್ದೇನೆ' ಎಂದರು.

'ಇಂದು ಒಳ್ಳೆ ಮುಹೂರ್ತ ಇರುವುದರಿಂದ ನಾಮಪತ್ರ ಸಲ್ಲಿಸಲು ಶಿಗ್ಗಾವಿಗೆ ತೆರಳುತ್ತಿದ್ದೇನೆ. ಏಪ್ರಿಲ್ 19 ರಂದು ಕಾರ್ಯಕರ್ತರು, ಬೆಂಬಲಿಗರೊಂದಿಗೆ ಮತ್ತೊಮ್ಮೆ ನಾಮಪತ್ರ ಸಲ್ಲಿಸುತ್ತೇನೆ' ಎಂದು ಹೇಳಿದರು. ನಂತರ ಬೊಮ್ಮಾಯಿ ಅವರು ಸಿದ್ಧಾರೂಢಮಠಕ್ಕೆ ತೆರಳಿ ಸಿದ್ಧಾರೂಢರ ಗದ್ದುಗೆ ದರ್ಶನ ಪಡೆದು, ಪೂಜೆ ಸಲ್ಲಿಸಿದರು.

## ವಿಜಯ ದಂಡಯಾತ್ರೆಯ ಮೊದಲ ಹೆಜ್ಜೆ ಇಟ್ಟ ನಾಗೇಶ ಮನ್ನೋಳ್ಕರ




ಬೆಳಗಾವಿ: ಸೋಮವಾರ ನಗರದ ಕಾಲೇಜ್ ರಸ್ತೆಯಲ್ಲಿ ಜನ ಜಾತ್ರೆಯೇ ಸಾಗರದಂತೆ ನೆರೆದಿತ್ತು, ಅದಕ್ಕೆ ಕಾರಣ ಬೆಳಗಾವಿ ಗ್ರಾಮೀಣ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ನಾಗೇಶ ಮನ್ನೋಳ್ಕರ ಅವರ ನಾಮಪತ್ರ ಸಲ್ಲಿಸುವ ಕಾರ್ಯಕ್ರಮ ಹೌದು, ಬೆಳಗಾವಿಯ ಗ್ರಾಮೀಣ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ನಾಗೇಶ ಮನ್ನೋಲ್ಕರ ಅವರು ತಮ್ಮ ಚುನಾವಣಾ ನಾಮಪತ್ರ ಸಲ್ಲಿಸುವ ವೇಳೆ, ಸಾವಿರಾರು ಜನರ ಜನಸಾಗರವನ್ನೇ ಸೇರಿಸಿದ್ದರು, ಸೇರಿರುವ ಪ್ರತಿ ಜನರು ನಗೇಶನ್ನ ಜೈ, ಬಿಜೆಪಿ ಜೈ, ಮೋದಿಜಿ ಜೈ, ಎನ್ನುವ ಘೋಷಣೆ ಕೂಗುತ್ತಾ, ತಮ್ಮ ಅಭ್ಯರ್ಥಿಯನ್ನು ಬೆಂಬಲಿಸುತ್ತಾ ಮುನ್ನಡೆದಿದ್ದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ಜಿಲ್ಲಾ ಅಧ್ಯಕ್ಷ ಹಾಗೂ ಮಾಜಿ ಶಾಸಕ ಸಂಜಯ ಪಾಟೀಲ ಅವರು ಬಿಜೆಪಿ ಅನ್ನೋದು ನಿಜವಾದ ಭಾರತೀಯನ ರಕ್ತ ಕಣ ಕಣದಲ್ಲಿದೆ, ನಿನ್ನೆ ನಾನು ಮಾಡಿದ್ದು ಅದು ಭಾಷಣ ಅಲ್ಲಾ, ಭಾರತೀಯನ ಭಾವನೆ, ಗ್ರಾಮೀಣ ಕ್ಷೇತ್ರದಲ್ಲಿ ನೂರಕ್ಕೆ ನೂರರಷ್ಟು, ಬಹು ಅಂತರದಲ್ಲಿ ಬಿಜೆಪಿ ಗೆಲುವು ಸಾಧಿಸುತ್ತದೆ ಎಂದರು.

ಕ್ಷೇತ್ರದ ಪದಾಧಿಕಾರಿ ಕಾರ್ಯಕರ್ತರಲ್ಲಿ ಯಾವುದೇ ಗೊಂದಲ ಇಲ್ಲ, ಎಲ್ಲರೂ ಒಕ್ಕಟ್ಟಾಗಿ ಬಿಜೆಪಿಯನ್ನು ಗೆಲ್ಲಿಸುತ್ತೇವೆ ಎಂದರು.

ಇನ್ನು ಗ್ರಾಮೀಣ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ನಾಗೇಶ ಮನ್ನೋಲ್ಕರ ಮಾತನಾಡಿ, ನನ್ನ ಮೇಲೆ ನಂಬಿಕೆ ಇಟ್ಟು, ದೊಡ್ಡ ಜವಾಬ್ದಾರಿ ನೀಡಿದ ಎಲ್ಲಾ ವರಿಷ್ಠರಿಗೆ, ನನ್ನ ಪಕ್ಷದ ಮುಖಂಡರಿಗೆ ಕೃತಜ್ಞತೆ ಸಲ್ಲಿಸುವೆ ಎಂದರು. ಕ್ಷೇತ್ರದ ಜನರು ನನಗೆ ಆಶೀರ್ವಾದ ಮಾಡುವರು ಎಂಬ ನಂಬಿಕೆ ಇದೆ, ಅವರ ಮನೆಯ ಮಗನಾಗಿ ಸೇವೆ ಮಾಡುವೆ ಎಂದರು.ಈ ವೇಳೆ ಮಾಜಿ ಶಾಸಕ ಸಂಜಯ ಪಾಟೀಲ ಅವರು, ಕಿರಣ ಜಾಧವ ಅವರು, ತಾಲೂಕು ಘಟಕದ ಪದಾಧಿಕಾರಿಗಳು, ಸಾವಿರಾರು ಕಾರ್ಯಕರ್ತರು, ಬೆಂಬಲಿಗರು ಉಪಸ್ಥಿತರಿದ್ದರು.

## ಪಕ್ಷದ ವರಿಷ್ಠರ, ಮುಖಂಡರ, ಜನತಾ ಜನಾರ್ಧನರ ಆಶೀರ್ವಾದದೊಂದಿಗೆ ನಾಮಪತ್ರ ಸಲ್ಲಿಸಿರುವೆ: ಡಾ ರವಿ ಪಾಟೀಲ್

ಬೆಳಗಾವಿ: ಸೋಮವಾರ ನಗರದ ಪಾಲಿಕೆಯ ಆವರಣದಲ್ಲಿ ಇರುವ ಚುನಾವಣಾ ಅಧಿಕಾರಿಯಕಾರಿಯ ಕಚೇರಿಯಲ್ಲಿ ಅಧಿಕೃತವಾಗಿ ಬೆಳಗಾವಿಯ ಉತ್ತರ ಮತಕ್ಷೇತ್ರದ ಅಭ್ಯರ್ಥಿಯಾಗಿ ಡಾ ರವಿ ಪಾಟೀಲ್ ಅವರು ತಮ್ಮ ನಾಮಪತ್ರ ಸಲ್ಲಿಸಿದರು.

ಮಾನ್ಯ ಪ್ರಧಾನಿಯವರು, ಪಕ್ಷದ ಹಿರಿಯ ವರಿಷ್ಠರು, ರಾಜ್ಯ ನಾಯಕರು, ಸ್ಥಳೀಯ ನಾಯಕರು, ಎಲ್ಲರೂ ಸೇರಿ ನನಗೆ ಈ ಅವಕಾಶ ಮಾಡಿ ಕೊಟ್ಟಿದ್ದಾರೆ, ಅವರೆಲ್ಲರಿಗೂ ನಾನು ಸದಾ ಚಿರಋಣಿ ಎಂದರು.

ಅದೇ ರೀತಿಯಲ್ಲಿ ಕ್ಷೇತ್ರದ ಜನತೆ ಕೂಡಾ ನನ್ನ ಮೇಲೆ ತುಂಬಾ ನಿರೀಕ್ಷೆ ಇಟ್ಟು ನನಗೆ ಸಹರಿಸುತ್ತ ಇದ್ದಾರೆ, ನಾನು ಇವತ್ತು ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಲು ಅವರ ಆಶೀರ್ವಾದವೂ ಒಂದು ಕಾರಣ ಎಂದರು.

ಬೇನಕೆ ಅವರು ನಮ್ಮ ಜೊತೆಯಲ್ಲೇ ಇರುತ್ತಾರೆ, ಪಕ್ಷದ ಪರವಾಗಿಯೇ ಕೆಲಸ ಮಾಡುತ್ತಾರೆ, ನಮ್ಮಲ್ಲಿ ಯಾವುದೇ ಮನಸ್ತಾಪ ಇಲ್ಲ ಎಂದರು..

ನನಗೆ ಎಲ್ಲಾ ಭಾಷೆ, ಜಾತಿ, ಧರ್ಮ, ಸಂಸ್ಕೃತಿಯ ಜನರೂ ಬೇಕು, ಏಕೆಂದರೆ ನಾನು ಎಲ್ಲರೊಂದಿಗೂ



ಕೂಡಿ ಬೆಳೆದವನು, ಬೆಳಗಾವಿಯಲ್ಲಿ ಎಲ್ಲರೂ ಕೂಡಿ ಇರುವ ಒಳ್ಳೆಯ ವಾತಾವರಣ ಇದ್ದು, ಎಲ್ಲರೂ ಒಂದಾಗಿ ಇದ್ದುಕೊಂಡೇ ಅಭಿವೃದ್ಧಿಯತ್ತ ಸಾಗೋಣ ಎಂದರು.

ಇನ್ನು ಕ್ಷೇತ್ರದಲ್ಲಿ ಶಿಕ್ಷಣ, ಆರೋಗ್ಯ, ಕುಡಿಯುವ ನೀರು, ಸ್ವಚ್ಛತೆ, ಹೀಗೆ ಹಲವು ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಬೇಕು ಎಂಬ ವಿಚಾರಗಳು ಇವೆ ಎಂದು ತಮ್ಮ ಅನಿಸಿಕೆ ವ್ಯಕ್ತಪಡಿಸಿದರು.

ಮುಂದಿನ ದಿನಗಳಲ್ಲಿ ಬೆಳಗಾವಿಯ ಜನರು, ಹೊಸ ಅಭಿವೃದ್ಧಿಪರವಾದ ಬೆಳಗಾವಿಯನ್ನು ನೋಡುತ್ತಾರೆ, ಆ ರೀತಿಯ ಕೆಲಸ ಮಾಡಿ ತೋರಿಸುತ್ತೇನೆ ಎಂದು ವಿಶ್ವಾಸದಿಂದ ನುಡಿದರು.

## ಮಂಗಳವಾರ ಅಪಾರ ಬೆಂಬಲಿಗರೊಂದಿಗೆ ನಾಮಪತ್ರ ಸಲ್ಲಿಕೆ



ಬೆಳಗಾವಿ: ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಮಂಗಳವಾರ ನಾಮಪತ್ರ ಸಲ್ಲಿಸಲಿರುವ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್, ಸೋಮವಾರ ಚಿಕ್ಕಹಟ್ಟಿಹೊಳಿ ಮನೆಯ ಆರಾಧ್ಯದೈವ ಶ್ರೀ ವೀರಭದ್ರ ದೇವರ ಸನ್ನಿಧಿಗೆ ತೆರಳಿ ದೇವರಿಗೆ ಪೂಜೆ ಸಲ್ಲಿಸಿದರು.

ಸಹೋದರ, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹಾಗೂ ಕುಟುಂಬದ ಇತರ ಸದಸ್ಯರೊಂದಿಗೆ ತೆರಳಿದ ಅವರು, ನಾಮಪತ್ರಕ್ಕೆ ಸಂಬಂಧಿಸಿದ ಕಾಗದಪತ್ರಗಳಿಗೂ ಪೂಜೆ ಮಾಡಿಸಿ, ದೇವರ ಎದುರು ಹಸ್ತಾಕ್ಷರ ಹಾಕಿದರು.

ಯಾವುದೇ ಒಳ್ಳೆಯ ಕೆಲಸ ಮಾಡುವ ಮುನ್ನ ನಾವು ಮನೆ ದೇವರಿಗೆ ಪೂಜೆ ಸಲ್ಲಿಸಿ ಆಶೀರ್ವಾದ ಪಡೆಯುವುದು ವಾಡಿಕೆ. ಹಾಗಾಗಿ ಇಂದು ಮನೆಯ ಆರಾಧ್ಯದೈವ ಶ್ರೀ ವೀರಭದ್ರ ದೇವರ ಸನ್ನಿಧಿಗೆ ತೆರಳಿ ದೇವರಿಗೆ ಪೂಜೆ ಸಲ್ಲಿಸಿದ್ದೇನೆ. ದೇವರ ಆಶೀರ್ವಾದ ಪಡೆದಿದ್ದೇನೆ. ಮಂಗಳವಾರ ಬೆಂಬಲಿಗರ ಸಾಕ್ಷಿಯಾಗಿ ನಾಮಪತ್ರ ಸಲ್ಲಿಸಲಿದ್ದೇನೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಈ ಸಂದರ್ಭದಲ್ಲಿ ತಿಳಿಸಿದರು.

ಮಂಗಳವಾರ ಬೆಳಗ್ಗೆ ಹಿಂಡಲಗಾ ಗಣಪತಿ ಹಾಗೂ ಸುಳೇಬಾವಿಯ ಮಹಾಲಕ್ಷ್ಮಿ ಸನ್ನಿಧಿಯಲ್ಲಿ ಪೂಜೆ ಸಲ್ಲಿಸಿದ ಬಳಿಕ ಅಪಾರ ಪ್ರಮಾಣದ ಬೆಂಬಲಿಗರೊಂದಿಗೆ ತೆರಳಿ ಲಕ್ಷ್ಮೀ ಹೆಬ್ಬಾಳಕರ್ ಅವರು ತಮ್ಮ ನಾಮಪತ್ರ ಸಲ್ಲಿಸಲಿದ್ದಾರೆ.

## ರೈಸ್ ಪುಲ್ಲಿಂಗ್ ದಂಧೆ: ನಿವೃತ್ತ ಕಾನ್ಸ್‌ಟೇಬಲ್ ಸಹಿತ ಮೂವರ ಬಂಧನ



ಬೆಂಗಳೂರು: ರೈಸ್ ಪುಲ್ಲಿಂಗ್ ಹೆಸರಲ್ಲಿ ಕೋಟ್ಯಂತರ ರೂ. ಹಣ ಪಡೆದು ಜನರನ್ನು ವಂಚಿಸುತ್ತಿದ್ದ ಮಾಜಿ ಪೊಲೀಸ್ ಕಾನ್ಸ್‌ಟೇಬಲ್ ಸೇರಿದಂತೆ ಮೂವರು ಆರೋಪಿಗಳನ್ನು ಸಿಸಿಬಿ ಪೊಲೀಸ್ ಬಂಧಿಸಿದ್ದಾರೆ.

ನಿವೃತ್ತ ಕಾನ್ಸ್‌ಟೇಬಲ್ ನಟೇಶ್, ವೆಂಕಟೇಶ್ ಮತ್ತು ಸೋಮಶೇಖರ್ ಬಂಧಿತ ಆರೋಪಿಗಳು. ಇವರು ಬೆಂಗಳೂರು ಹಾಗೂ ರಾಜ್ಯದ ವಿವಿಧೆಡೆ ರೈಸ್ ಪುಲ್ಲಿಂಗ್ ದಂಧೆ ನಡೆಸುತ್ತಿದ್ದರು. ರೈಸ್ ಪುಲ್ಲಿಂಗ್ ಮಿಷನ್ ನೀಡುವುದಾಗಿ ಜನರಿಂದ ಹಣ ಪಡೆದು ವಂಚಿಸುತ್ತಿದ್ದ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

ಆರೋಪಿ ನಟೇಶ್ 2007ರಲ್ಲಿ ಸಿಎಆರ್‌ನಲ್ಲಿ ಪೊಲೀಸ್ ಕಾನ್ಸ್‌ಟೇಬಲ್ ಆಗಿದ್ದ. ಬಳಿಕ ರೈಸ್ ಪುಲ್ಲಿಂಗ್ ದಂಧೆಗೆ ಸಿಲುಕಿ ಹಣ ಕಳೆದುಕೊಂಡಿದ್ದ. ಹಣ ಲಾಸ್ ಆದ ಬಳಿಕ ಪೊಲೀಸ್ ಕೆಲಸ ಬಿಟ್ಟು ರಿಯಲ್ ಎಸ್ಟೇಟ್ ವ್ಯವಹಾರದಲ್ಲಿ ಭಾಗಿಯಾಗಿದ್ದ. ನಂತರ ಇನ್ನಿಬ್ಬರು ಆರೋಪಿಗಳ ಜೊತೆಗೂಡಿ ತಾನೂ ರೈಸ್ ಪುಲ್ಲಿಂಗ್ ದಂಧೆಗೆ ಇಳಿದಿದ್ದ. ಬಂಧಿತ ಆರೋಪಿಗಳಿಂದ ರೈಸ್ ಪುಲ್ಲಿಂಗ್ ಯಂತ್ರ, 28 ಲಕ್ಷ ರೂ. ನಗದು ಹಾಗೂ 3 ಐಷಾರಾಮಿ ಕಾರುಗಳನ್ನು ವಶಪಡಿಸಿಕೊಳ್ಳಲಾಗಿದೆ. ಈ ಕುರಿತು ಹಲಸೂರು ಗೇಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮತ್ತೊಮ್ಮೆ ಲಿಂಗಾಯತರೇ ಮುಂದಿನ ಸಿಎಂ: ಭವಿಷ್ಯ ನುಡಿದ ಯತ್ನಾಳ್



ಧಾರವಾಡ: ಪ್ರಲ್ಹಾದ ಜೋಶಿ, ಬಿ.ಎಲ್. ಸಂತೋಷ್ ಯಾರೂ ಸಿಎಂ ಆಗುವುದಿಲ್ಲ. ಮತ್ತೊಮ್ಮೆ ಲಿಂಗಾಯತರೇ ಮುಖ್ಯಮಂತ್ರಿ ಆಗುತ್ತಾರೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಭವಿಷ್ಯ ನುಡಿದಿದ್ದಾರೆ.

ಧಾರವಾಡ ಜಿಲ್ಲೆ ನವಲಗುಂದದಲ್ಲಿ ಮಾತನಾಡಿದ ಅವರು, ಬಿಜೆಪಿಯಲ್ಲಿ ಈ ಬಾರಿ ಎರಡನೇ ಸಾಲಿನ ನಾಯಕತ್ವ ಬರಲಿದ್ದು, ಲಿಂಗಾಯತರೇ ಮುಂದಿನ ಸಿಎಂ ಆಗಲಿದ್ದಾರೆ. ಪ್ರಲ್ಹಾದ ಜೋಶಿ ರಾಜ್ಯ ರಾಜಕಾರಣಕ್ಕೆ ಬರುವುದಿಲ್ಲ.

ನಾನು ಸಿಎಂ ರೇಸ್‌ನಲ್ಲಿ ಇರುವೆ ಎಂದು ಹೇಳಲಾರೆ. ಕರ್ನಾಟಕದಲ್ಲಿ ಬಿಜೆಪಿಯದ್ದೇ ಸಿಎಂ ಆಗುತ್ತಾರೆ. ಜಗದೀಶ್ ಶೆಟ್ಟರ್, ಶಾಮನೂರ ಶಿವಶಂಕರಪ್ಪ, ಎಂ.ಬಿ. ಪಾಟೀಲ್ ಎಲ್ಲರೂ ಬೀಗರು.

ಇವರೆಲ್ಲ ಒಂದೇ ಪಕ್ಷದಲ್ಲಿದ್ದಾರೆ. ಇಷ್ಟು ದಿನ ಬೀಗರು ಬೇರೆ ಬೇರೆ ಪಕ್ಷದಲ್ಲಿದ್ದು, ಹೊಂದಾಣಿಕೆ ಮಾಡಿಕೊಳ್ಳುತ್ತಿದ್ದರು ಎಂದು ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದರು.

## ಗ್ಯಾಂಗ್‌ಸ್ಟರ್ ಅತೀಕ್ ಅಹ್ಮದ್ ತಲೆಗೆ 1, ದೇಹಕ್ಕೆ 8 ಗುಂಡೇಟು



ನವದೆಹಲಿ: ಗ್ಯಾಂಗಸ್ಟರ್, ಪಾತಕಿ ಹಾಗೂ ಮಾಜಿ ಸಂಸದ ಅತೀಕ್ ಅಹ್ಮದ್ ತಲೆಗೆ ಒಂದು ಗುಂಡು ಸೇರಿದಂತೆ ದೇಹವನ್ನು 9 ಗುಂಡುಗಳು ಹೊಕ್ಕಿವೆ ಎಂದು ಮರಣೋತ್ತರ ಪರೀಕ್ಷೆ ವರದಿ ತಿಳಿಸಿದೆ.

ಮರಣೋತ್ತರ ಪರೀಕ್ಷೆಯ ಸಮಯದಲ್ಲಿ ಗ್ಯಾಂಗ್‌ಸ್ಟರ್ ದೇಹದಲ್ಲಿ ಕನಿಷ್ಠ 9 ಬುಲೆಟ್ ಹೊಕ್ಕಿದ್ದವು. ಆತನ ಸಹೋದರ ಅಶ್ರಫ್ ಅಹ್ಮದ್ ದೇಹದಿಂದ 5 ಗುಂಡುಗಳನ್ನು ಹೊರತೆಗೆಯಲಾಗಿದೆ ಎಂದು ವರದಿಯಾಗಿದೆ. ಅತೀಕ್ ಅಹ್ಮದ್ ತಲೆಗೆ ಒಂದು, ಎದೆ ಹಾಗೂ ಬೆನ್ನಿನ ಭಾಗಕ್ಕೆ ಎಂಟು ಬಾರಿ ಗುಂಡು ಹಾರಿಸಿರುವುದು ಶವಪರೀಕ್ಷೆಯಲ್ಲಿ ಪತ್ತೆಯಾಗಿದೆ. ಮೂವರು ಶೂಟರ್‌ಗಳನ್ನು ಪೊಲೀಸರು ಬಂಧಿಸಿದ್ದಾರೆ. ಐವರು ವೈದ್ಯರಿದ್ದ ತಂಡ ಮರಣೋತ್ತರ ಪರೀಕ್ಷೆ ನಡೆಸಿದೆ.

ಉಮೇಶ್ ಪಾಲ್ ಹತ್ಯೆ ಆರೋಪ ಪ್ರಕರಣದಲ್ಲಿ ಅತೀಕ್ ಅಹ್ಮದ್‌ನನ್ನು ಬಂಧಿಸಲಾಗಿತ್ತು. ಪ್ರಯಾಗ್‌ರಾಜ್‌ನ ಆಸ್ಪತ್ರೆಯಲ್ಲಿ ವೈದ್ಯಕೀಯ ಪರೀಕ್ಷೆಗೆ ಪೊಲೀಸರು ಕರೆತಂದಿದ್ದ ವೇಳೆ ದುಷ್ಕರ್ಮಿಗಳು ಗುಂಡಿಕ್ಕಿ ಹತ್ಯೆ ಮಾಡಿದ್ದರು. ಪತ್ರಕರ್ತರ ಸೋಗಿನಲ್ಲಿ ಬಂದಿದ್ದ ದುಷ್ಕರ್ಮಿಗಳು ಅತೀಕ್ ಅಹ್ಮದ್‌ಗೆ ಮೊದಲು ತಲೆಗೆ ಗುರಿಯಿಟ್ಟು ಗುಂಡು ಹೊಡೆದರು. ನಂತರ ಆತನ ಸಹೋದರನಿಗೂ ಗುಂಡು ಹಾರಿಸಿದರು. ಇದರಿಂದ ಸ್ಥಳದಲ್ಲಿ ಕೆಲಕಾಲ ಆತಂಕದ ವಾತಾವರಣ ಸೃಷ್ಟಿಯಾಗಿತ್ತು. ತಕ್ಷಣ ಎಚ್ಚೆತ್ತ ಪೊಲೀಸರು ದುಷ್ಕರ್ಮಿಗಳನ್ನು ವಶಕ್ಕೆ ಪಡೆದರು. ಅಷ್ಟರಲ್ಲಾಗಲೇ ಪಾತಕಿ ಅಹ್ಮದ್ ಮೇಲೆ ಹಲವು ಸುತ್ತಿನ ಗುಂಡು ಹಾರಿಸಲಾಗಿತ್ತು. ಅಹ್ಮದ್ ಮತ್ತು ಆತನ ಸಹೋದರ ಅಶ್ರಫ್ ರಕ್ತದ ಮಡುವಿನಲ್ಲಿ ಸ್ಥಳದಲ್ಲೇ ಮೃತಪಟ್ಟಿದ್ದರು.

## ಬಿಸಿಲಿನ ತಾಪಕ್ಕೆ 11 ಜನ ಸಾವು



ಮುಂಬೈ: ಮಹಾರಾಷ್ಟ್ರ ಭೂಷಣ್ ಪ್ರಶಸ್ತಿ ಸಮಾರಂಭಕ್ಕೆ ಬಂದಿದ್ದ 11 ಮಂದಿ ಬಿಸಿಲಿನ ತಾಪಮಾನಕ್ಕೆ ಸಾವನ್ನಪ್ಪಿದ ಘಟನೆ ನಡೆದಿದೆ.

ನವಿ ಮುಂಬೈನಲ್ಲಿ ಸರ್ಕಾರದಿಂದ ಸಾಮಾಜಿಕ ಕಾರ್ಯಕರ್ತ ಅಪ್ಪಾಸಾಹೇಬ್ ಧರ್ಮಾಧಿಕಾರಿ ಅವರಿಗೆ ಮಹಾರಾಷ್ಟ್ರ ಭೂಷಣ್ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ನಡೆದಿತ್ತು.

ಈ ಹಿನ್ನೆಲೆಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ, ಮಹಾರಾಷ್ಟ್ರ ಸಿಎಂ ಏಕನಾಥ್ ಶಿಂಧೆ ಹಾಗೂ ಮಹಾರಾಷ್ಟ್ರ ಡಿಸಿಎಂ ದೇವೇಂದ್ರ ಫಡ್ನವಿಸ್ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು.

ಪ್ರಶಸ್ತಿ ಪ್ರದಾನ ಸಮಾರಂಭವನ್ನು ವೀಕ್ಷಿಸಲು ಸಾವಿರಾರು ಜನರು ಭಾಗಿಯಾಗಿದ್ದರು.

ಈ ಹಿನ್ನೆಲೆಯಲ್ಲಿ ಮೈದಾನದಲ್ಲಿ ಜನರಿಗೆ ಕಾರ್ಯಕ್ರಮ ವೀಕ್ಷಿಸಲು ಆಡಿಯೋ ಹಾಗೂ ವೀಡಿಯೋ ವ್ಯವಸ್ಥೆಯನ್ನು ಮಾಡಲಾಗಿತ್ತು. ಆದರೆ ಪ್ರೇಕ್ಷಕರಿಗೆ ಯಾವುದೇ ರೀತಿಯ ಆಸನ ವ್ಯವಸ್ಥೆಯಾಗಲಿ ಹಾಗೂ ಶೆಡ್ಗಳ ವ್ಯವಸ್ಥೆಯೂ ಇರಲಿಲ್ಲ. ಇವೆಲ್ಲದರ ಮಧ್ಯೆ ದಿನದ ತಾಪಮಾನ ಗರಿಷ್ಠ 38 ಡಿಗ್ರಿ ಸೆಲ್ಸಿಯಸ್ ದಾಖಲಾಗಿತ್ತು.

ಈ ಬಿಸಿಲಿನ ಝಳ ತಾಳಲಾರದೇ ಕಾರ್ಯಕ್ರಮದಲ್ಲಿ ನೆರೆದಿದ್ದ 11 ಮಂದಿ ಸಾವನ್ನಪ್ಪಿದ್ದು, 50 ಮಂದಿ ವಿವಿಧ ಆರೋಗ್ಯ ಸಮಸ್ಯೆಗಳಿಂದ ಆಸ್ಪತ್ರೆಗೆ ದಾಖಲಾಗಿದ್ದಾರೆ.

ಘಟನೆಗೆ ಸಂಬಂಧಿಸಿ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರು ಆಸ್ಪತ್ರೆಗೆ ತೆರಳಿದ್ದು, ರೋಗಿಗಳಿಗೆ ಧೈರ್ಯ ತುಂಬಿದ್ದಾರೆ. ಈ ಬಗ್ಗೆ ಮಾತನಾಡಿ, ಘಟನೆಯು ದುರದೃಷ್ಟಕರವಾಗಿದ್ದು, ಮೃತರ ಕುಟುಂಬಗಳಿಗೆ 5 ಲಕ್ಷ ರೂ. ಪರಿಹಾರವನ್ನು ಘೋಷಿಸಿದರು.

## ಕಾಂಗ್ರೆಸ್ ಬಸವಣ್ಣನವರ ತತ್ವಾದರ್ಶ ಅನುಸರಿಸುವ ಜಾತ್ಯತೀತ ಪಕ್ಷ: ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ



ಬೆಳಗಾವಿ: ಬಿಜೆಪಿಯ ಭ್ರಷ್ಟಚಾರ ಮತ್ತು ಸರ್ವಾಧಿಕಾರದ ಆಡಳಿತದಿಂದ ಹಲವು ನಾಯಕರು ಕಾಂಗ್ರೆಸ್ ಸೇರುತ್ತಿದ್ದು, ಇನ್ನೂ ಕೆಲವು ನಾಯಕರು ಕಾಂಗ್ರೆಸ್ ಸೇಢರ್ಪಡೆ ಯಾಗಲಿದ್ದಾರೆ. ಕಾಂಗ್ರೆಸ್ ಬಸವಣ್ಣನವರ ತತ್ವಾಧಾರಿತ ಜಾತ್ಯತೀತ ಪಕ್ಷ. ಜಗದೀಶ್ ಶೆಟ್ಟರ್ ಕಾಂಗ್ರೆಸ್ ಸೇರ್ಪಡೆಯಾಗಿದ್ದು, ನಾನು ಅವರನ್ನು ಸಂತೋಷದಿಂದ ಸ್ವಾಗತಿಸುತ್ತೇನೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಹೇಳಿದರು.

ಕಾಂಗ್ರೆಸ್ ಭವನದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಲಿಂಗಾಯತ ಸಮಾಜ, ಲಿಂಗಾಯತ ಸಮಾಜ ಕಳೆದ 20 ವರ್ಷಗಳಿಂದ ಬಿಜೆಪಿಯ ಮೂಲವಾಗಿದೆ. ಆದರೆ ಈಗ ಬಿಜೆಪಿ ತಮ್ಮನ್ನು ತುಳಿಯುತ್ತಿದೆ ಎಂಬ ಭಾವನೆ ಅವರಲ್ಲಿ ಮೂಡಿದೆ.

ಬಿಜೆಪಿಯಲ್ಲೇ ಉಳಿದರೆ ಸಂಕಷ್ಟಕ್ಕೆ ಸಿಲುಕುತ್ತೇವೆ ಎಂದು ಯೋಚಿಸುತ್ತಿದ್ದಾರೆ. ಹೀಗಾಗಿ ಅವರು ಕಾಂಗ್ರೆಸ್‌ನತ್ತ ಮುಖ ಮಾಡಿದ್ದಾರೆ. ಕಾಂಗ್ರೆಸ್ ಬಸವಣ್ಣನವರ ತತ್ವಾದರ್ಶಗಳನ್ನು ಅನುಸರಿಸುವ ಜಾತ್ಯತೀತ ಪಕ್ಷವಾಗಿದೆ. ಹೀಗಾಗಿ ಬಿಜೆಪಿ ತೊರೆದು ಲಿಂಗಾಯತ ನಾಯಕರು ಕಾಂಗ್ರೆಸ್‌ನತ್ತ ಆಗಮಿಸುತ್ತಿದಾರೆ ಎಂದು ತಿಳಿಸಿದರು.

## ಅಸಮಾಧಾನ ಮರೆತು ಚುನಾವಣೆಯನ್ನು ಒಗ್ಗಟ್ಟಾಗಿ ಎದುರಿಸಿ: ಕಾರ್ಯಕರ್ತರಿಗೆ ಬಿ.ಎಲ್ ಸಂತೋಷ್ ಕರೆ

ಮಂಗಳೂರು: ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಉತ್ತಮ ಪ್ರದರ್ಶನ ನೀಡಲಿದೆ ಎಂದು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿಎಲ್ ಸಂತೋಷ್ ಭಾನುವಾರ ಭವಿಷ್ಯ ನುಡಿದಿದ್ದಾರೆ.

ಸಂತೋಷ್ ಮಂಗಳೂರು ಉತ್ತರ ಕ್ಷೇತ್ರದ ಚುನಾವಣಾ ಕಚೇರಿಯನ್ನು ಉದ್ಘಾಟಿಸಿದರು. ಆದರೆ, ರಾಜ್ಯ ರಾಜಕೀಯದ ಬೆಳವಣಿಗೆಗಳ ಬಗ್ಗೆ ಪ್ರತಿಕ್ರಿಯಿಸಲು ನಿರಾಕರಿಸಿದರು.

ಬಿಜೆಪಿಯಲ್ಲಿನ ಇತ್ತೀಚಿನ ಬೆಳವಣಿಗೆಗಳ ಕುರಿತು ಮಾಧ್ಯಮದವರ ಪ್ರಶ್ನೆಗೆ, ಉತ್ತರಿಸಿದ ಅವರು, ಈ ಬಾರಿ ಚುನಾವಣೆಯಲ್ಲಿ ನಾವು ಉತ್ತಮ ಪ್ರದರ್ಶನ ತೋರುತ್ತೇವೆ



ಎಂದು ಸಂತೋಷ್ ಭರವಸೆ ವ್ಯಕ್ತ ಪಡಿಸಿದ್ದಾರೆ. ಬಿಜೆಪಿಯ ಹಿರಿಯ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ರಾಜೀನಾಮೆ ಕುರಿತು ಪ್ರತಿಕ್ರಿಯಿಸಲು ಅವರು ನಿರಾಕರಿಸಿದರು.

ಬಿಜೆಪಿ ಕಾರ್ಯಕರ್ತರು ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಬೇಕು ಎಂದು ಸಂತೋಷ್ ಕರೆ ನೀಡಿದರು. ಭರವಸೆಗಳನ್ನು ಈಡೇರಿಸಲು ಹಣ ಹೇಗೆ ಸಿಗುತ್ತದೆ ಎಂದು ಕಾಂಗ್ರೆಸ್ ನಾಯಕರನ್ನು ಪ್ರಶ್ನಿಸಬೇಕು. ನಮ್ಮ ಅವಧಿಯಲ್ಲಿ ರಾಜ್ಯ ಅಭಿವೃದ್ಧಿ ಕಂಡಿದೆ, ಅಭಿವೃದ್ಧಿ ಕಾರ್ಯಗಳ ಕುರಿತು ಜನರ ಬಳಿಗೆ ತೆರಳಿ ಮತ ಕೇಳಲು ಹಿಂಜರಿಕೆ ಇಲ್ಲ ಎಂದಿದ್ದಾರೆ.

ಅಭ್ಯರ್ಥಿ ಗಳ ಬದಲಾವಣೆ ಯಿಂದ ಒಂದೆರಡು ಕ್ಷೇತ್ರದಲ್ಲಿ ಕೆಲವರಿಗೆ ಅಸಮಾಧಾನ ಆಗಿರಬಹುದು. ಅದನ್ನು ಚುನಾವಣೆಯ ಮುಖ್ಯ ವಿಷಯವನ್ನಾಗಿಸದೆ ಆದಷ್ಟು ಬೇಗ ಪೂರ್ಣ ಪ್ರಮಾಣದಲ್ಲಿ ಚುನಾವಣೆಗೆ ಧುಮುಕಿ 2018ರ ಮಾದರಿಯಲ್ಲೇ ಈ ಬಾರಿಯೂ ಎಲ್ಲ ಕ್ಷೇತ್ರಗಳಲ್ಲಿ ಗೆಲುವಿಗೆ ಶ್ರಮಿಸಬೇಕು ಎಂಬ ನಿರ್ದೇಶನ ನೀಡಿದ್ದಾರೆ ಎಂದು ತಿಳಿದು ಬಂದಿದೆ.

## ನಗರ ಕ್ಷೇತ್ರಕ್ಕೆ ಸ್ವತಂತ್ರ ಅಭ್ಯರ್ಥಿಯಾಗಿ ಕಣಕ್ಕಿಳಿಯಲು ಹನುಮಕಿಶೋರ್‌ಗೆ ಆಪ್ತರ ಒತ್ತಾಯ



ಬಳ್ಳಾರಿ: ಬಳ್ಳಾರಿ ನಗರ ಕ್ಷೇತ್ರಕ್ಕೆ ಕಾಂಗ್ರೆಸ್‌ನಿಂದ ಮಾಜಿ ಸಚಿವ ದಿವಾಕರ್ ಬಾಬು ಅವ–ರಿಗೆ ಟಿಕೆಟ್ ಕೈ ತಪ್ಪಿದೆ ಎಂದು ದಿವಾಕರ್‌ಬಾಬು ಆಪ್ತರು ಮತ್ತು ಅವರ ಮಗ ಹನುಮಕಿಶೋರ್ ಆಪ್ತರು ರೊಚ್ಚಿಗೆದ್ದು ನೀವು ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧೆ ಮಾಡಲೇಬೇಕು ಎಂದು ಮುಂಡ್ಲೂರು ಹನುಮ ಕಿಶೋರ್ ಅವರಿಗೆ ಒತ್ತಾಯ ಮಾಡುತ್ತಿದ್ದಾರೆ ಎಂದು ಹನುಮಕಿಶೋರ್ ಅವರು ನಮ್ಮ ಪತ್ರಿಕಾ ಪ್ರತಿನಿಧಿಯೊಂದಿಗೆ ತಿಳಿಸಿದ್ದಾರೆ.

ಅವರು ಮಾತನಾಡುತ್ತಾ ಕಾರ್ಯಕರ್ತರ ಒತ್ತಡ ನನಗೆ ತುಂಬಾ ಇದೆ ಆದ ಕಾರಣ ನಾನು ಈ ಬಗ್ಗೆ ನಮ್ಮ ತಂದೆಯವರ ಹತ್ತಿರ ಕುಲಂಕುಷವಾಗಿ ಚರ್ಚಿಸಿ ನಿರ್ಧರಿಸುವುದಾಗಿ ತಿಳಿಸಿದ್ದಾರೆ. ಇನ್ನು ಎರೆಡು ಮೂರು ದಿನಗಳ ಕಾಲ ಇದೆ ಅಷ್ಟರಲ್ಲಿ ಒಳ್ಳೆಯ ನಿರ್ಧಾರವನ್ನು ತೆಗೆದುಕೊಳ್ಳುತ್ತೇನೆ ಎಂದಿದ್ದಾರೆ.

## ಸದ್ದು ಗದ್ದಲವಿಲ್ಲದೆ ಕಾಂಗ್ರೆಸ್ ಅಭ್ಯರ್ಥಿ ಬಿ.ನಾಗೇಂದ್ರ ನಾಮಪತ್ರ ಸಲ್ಲಿಕೆ



ಬಳ್ಳಾರಿ: ಬಳ್ಳಾರಿ ಗ್ರಾಮೀಣ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಬಿ.ನಾಗೇಂದ್ರ ಅವರು ಸೋಮವಾರದಂದು ಸಹಾಯಕ ಆಯುಕ್ತ ಹೇಮಂತ್ ಅವರಿಗೆ ಮಧ್ಯಾಹ್ನ ನಾಮಪತ್ರ ಸಲ್ಲಿಸಿದರು.ಕೂಡ್ಲಿಗಿಯಿಂದ 2008, 2013 ಎರಡು ಬಾರಿ ಮತ್ತು ಗ್ರಾಮೀಣದಿಂದ 2018 ಒಂದು ಬಾರಿ ಶಾಸಕರಾಗಿದ್ದ.

ಹಾಲಿ ಶಾಸಕರಾಗಿರುವ ನಾಗೇಂದ್ರ ಅವರು ಸದ್ದು ಗದ್ದಲವಿಲ್ಲದೆ ನಾಮಪತ್ರ ಸಲ್ಲಿಸಿದ್ದಾರೆಂದು ತಿಳಿದು ಬಂದಿದೆ.ದಿನ ಚೆನ್ನಾಗಿದೆಂದು ಈ ದಿನ ನಾಮಪತ್ರ ಸಲ್ಲಿಸಿದರು ಎಂದು ಅವರ ಬೆಂಬಲಿಗರು ಹೇಳಿದ್ದಾರೆ. ನಾಡಿದ್ದು ಮತ್ತೆ ಕಾರ್ಯಕರ್ತರೊಡನೆ ಮೆರವಣಿಗೆ ಮೂಲಕ ಬಂದು ನಾಮ ಪತ್ರ ಸಲ್ಲಿಸಲಾಗುತ್ತದೆ ಎಂದು ಹೇಳಲಾಗಿದೆ.

## ಇಂದು ಕಾಂಗ್ರೆಸ್ ಬಳ್ಳಾರಿ ನಗರ ಅಭ್ಯರ್ಥಿ ನಾರಾ ಭರತ್‌ರೆಡ್ಡಿ ನಾಮಪತ್ರ ಸಲ್ಲಿಕೆ



ಬಳ್ಳಾರಿ: ಬಳ್ಳಾರಿ ನಗರ–94 ವಿಧಾನಸಭಾ ಕ್ಷೇತ್ರದ ಬಳ್ಳಾರಿ ನಗರ ಅಧಿಕೃತ ಕಾಂಗ್ರೆಸ್ ಅಭ್ಯರ್ಥಿ ನಾರಾ ಭರತ್ ರೆಡ್ಡಿ ಅವರು ಬಳ್ಳಾರಿ ಮಹಾನಗರ ಪಾಲಿಕೆ ಕಚೇರಿಯಲ್ಲಿ ನಾಮಪತ್ರವನ್ನು ಇಂದು (ಏ.18) ಸಲ್ಲಿಸಲಿದ್ದಾರೆ.

ಬೆಳಗ್ಗೆ 10ಗಂಟೆಗೆ ಶ್ರೀಕನಕ ದುರುಗಮ್ಮ ದೇವಸ್ಥಾನದಿಂದ, ಪಾದಯಾತ್ರೆಯ ಮುಖಾಂತರ ಅಪಾರ ಜನ ಸಂಖ್ಯೆಯೊಂದಿಗೆ, ಬಳ್ಳಾರಿ ಮಹಾನಗರ ಪಾಲಿಕೆ ಕಚೇರಿಗೆ ಆಗಮಿಸಿ ನಾಮ ಪತ್ರವನ್ನು ಸಲ್ಲಿಸಲಿದ್ದಾರೆ.ಈ ಪಾದಯಾತ್ರೆಯಲ್ಲಿ ಕಾಂಗ್ರೆಸ್ ಪಕ್ಷದ ಹಿರಿಯ ನಾಯಕರು, ಹಿರಿಯ ಮುಖಂಡರು, ಕಾರ್ಯಕರ್ತರು, ಮಹಿಳಾ ಕಾರ್ಯಕರ್ತರು ಹಾಗೂ ಯುವ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಬಳ್ಳಾರಿ ಜಿಲ್ಲಾ ನಗರ ಕಾಂಗ್ರೆಸ್ ಸಮಿ ಅಧ್ಯಕ್ಷ ಜಿ.ಎಸ್.ಮಹಮ್ಮದ್ ರಫೀಕ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



## ಪಾರದರ್ಶಕವಾಗಿ ಕಾರ್ಯನಿರ್ವಹಿಸಲು ಮತಗಟ್ಟೆ ಅಧಿಕಾರಿಗಳಿಗೆ ಸಲಹೆ

ಕೊಪ್ಪಳ: ಕೊಪ್ಪಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮತಗಟ್ಟೆ ಅಧ್ಯಕ್ಷಾಧಿಕಾರಿಗಳು ಹಾಗೂ ಸಹಾಯಕ ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ ನಡೆಯಿತು.

ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆದ ತರಬೇತಿಯನ್ನು ಜಿಲ್ಲಾ ಚುನಾವಣಾಧಿಕಾ–ರಿಗಳಾದ ಜಿಲ್ಲಾಧಿಕಾರಿಗಳಾದ ಎಂ.ಸುಂದರೇಶಬಾಬು ಅವರು ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, ಚುನಾವಣಾ ಕರ್ತವ್ಯಕ್ಕೆ ನೇಮಕವಾದ ಅಧಿಕಾರಿಗಳು ಮತ್ತು ಸಿಬ್ಬಂದಿಯು ಪಕ್ಷಾತೀತವಾಗಿ, ಧರ್ಮಾತೀತವಾಗಿ ಮತ್ತು ಕಾನೂನುನಾತ್ಮಕವಾಗಿ ಕಾರ್ಯ ನಿರ್ವಹಿಸಿ ಚುನಾವಣೆಯು ಮುಕ್ತ ಹಾಗೂ ಪಾರದರ್ಶಕ ಮತ್ತು ನ್ಯಾಯಸಮ್ಮತವಾಗಿ ನಡೆಸಲು ಸಹಕಾರ ನೀಡಬೇಕು ಎಂದು ತಿಳಿಸಿದರು.

ಚುನಾವಣಾ ಕಾರ್ಯಕ್ಕೆ ನಿಯೋಜನೆಗೊಂಡ ಅಧಿಕಾರಿಗಳು ಮತ್ತು ಸಿಬ್ಬಂದಿಯು ತಂಡವಾಗಿ ಕಾರ್ಯನಿರ್ವಹಿಸಬೇಕು. ಆಯೋಗದ ಮಾರ್ಗಸೂಚಿಯನುಸಾರ ಕಾರ್ಯನಿರ್ವಹಿಸಬೇಕು. ಮತದಾನ ದಿನದಂದು ಮತಗಟ್ಟೆಗಳಲ್ಲಿ ಕಾರ್ಯನಿರ್ವಹಿಸುವ ಮತಗಟ್ಟೆ ಅಧಿಕಾರಿಗಳು ಮತ್ತು ಸಹಾಯಕ ಮತಗಟ್ಟೆ ಅಧಿಕಾರಿಗಳು ಸೇ–ರಿದಂತೆ ಮತಗಟ್ಟೆಗಳಲ್ಲಿ ಕಾರ್ಯನಿರ್ವಹಿಸುವ ಇನ್ನಿತರ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿಯು ತಮಗೆ ವಹಿಸಿದ ಕಾರ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು. ಮತಗಟ್ಟೆ ಅಧ್ಯಕ್ಷಾಧಿಕಾರಿ, ಸಹಾಯಕ ಮತಗಟ್ಟೆ ಅಧಿಕಾರಿ, ಮತಗಟ್ಟೆ ಅದಿಕಾರಿ 1 ಮತ್ತು ಮತಗಟ್ಟೆ ಅಧಿಕಾರಿ–2 ಎಲ್ಲರೂ ಎಲೆಕ್ಟ್ರೋನಿಕ್ ಓಟಿಂಗ್ ಮಷೀನ್ (ಇವಿಎಂ)ನ ಕಾರ್ಯವಿಧಾನಗಳ ಬಗ್ಗೆ ಸಂಪೂರ್ಣವಾಗಿ ತಿಳಿದುಕೊಳ್ಳಬೇಕು. ಮತಯಂತ್ರಗಳ ಕಾರ್ಯದ ಎಲ್ಲಾ ವಿಧಿ ವಿಧಾನಗಳನ್ನು ಸ್ಪಷ್ಟವಾಗಿ ತಿಳಿದುಕೊಳ್ಳಬೇಕು. ತಂಡದ ಎಲ್ಲ ಸದಸ್ಯರು ತಾವು ನಿರ್ವಹಿಸಬೇಕಾದ ಕಾರ್ಯಗಳ ಬಗ್ಗೆ ಚರ್ಚಿಸಿ ಗೊಂದಲವಿಲ್ಲದ ಹಾಗೆ ಕಾರ್ಯನಿರ್ವಹಿಸಬೇಕು. ಏನಾದರು ಅನುಮಾನಗಳಿದ್ದಲ್ಲಿ ಲಭ್ಯವಿರುವ ತರಬೇತಿ ವಿಭಾಗದಲ್ಲಿ ವಿಧಾನಸಭಾ ಮಟ್ಟದ ತರಬೇತಿದಾರರಿಂದ ಬಗೆಹರಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು.

ಬಳಿಕ ಚುನಾವಣಾ ಮಾಸ್ಟರ್ ಟ್ರೇನರ್‌ಗಳಿಂದ ಪಿಆರ್‌ಓ ಹಾಗೂ ಎಪಿಆರ್‌ಓ ಮತ್ತು ಇನ್ನಿತರ ಅಧಿಕಾರಿ ಮತ್ತು ಸಿಬ್ಬಂದಿಗೆ ವಿವಿಧ ವಿಷಯಗಳ ಬಗ್ಗೆ ಸಮಗ್ರ ತರಬೇತಿ ನೀಡಲಾಯಿತು.

# ಕೆಆರ್‌ಪಿಪಿ ಸೇರಿದ ಘಟಾನುಘಟಿಗಳು: ನಗರಸಭೆ ಸದಸ್ಯರಿಂದ ಭಾರೀ ಬೆಂಬಲ

ಗಂಗಾವತಿ: ಕಲ್ಯಾಣ ರಾಜ್ಯ ಪ್ರಗತಿ ಪಕ್ಷ ಸ್ಥಾಪನೆ ಮಾಡುವ ಮೂಲಕ ಭಾರಿ ಸಂಚಲನ ಮೂಡಿಸಿದ್ದ ಮಾಜಿ ಸಚಿವ ಗಾಲಿ ಜನಾರ್ಧನ ರೆಡ್ಡಿಯವರು ಪಕ್ಷಕ್ಕೆ ಇಂದು ಗಂಗಾವತಿ ನಗರಸಭೆಯ ಹದಿಮೂರು ಸದಸ್ಯರು ಸೇ–ರಿಸಿಕೊಳ್ಳುವ ಮೂಲಕ ತಮ್ಮ ಶಕ್ತಿಯನ್ನು ಇಮ್ಮಡಿ ಗೊಳಿಸಿದರು.

ನಗರದ ಆರಾಧ್ಯ ದೈವ ಚನ್ನಬಸವ ತಾತನ ನುಡಿಯಂತೆ ಗಂಗಾವತಿ ಅತಿ ಶೀಘ್ರದಲ್ಲಿ ಚೋಟಾ ಮುಂಬಯಿ ಚನ್ನಬಸವ ತಾತನ ಆಸೆಯಂತೆ ಗಂಗಾವತಿ ಕ್ಷೇತ್ರವು ಅಭಿವೃದ್ಧಿ ಮಾಡುವ ಮೂಲಕ ಚೋಟಾ ಮುಂಬಯಿ ಅಗುವ ದಿನಗಳು ದೂರವಿಲ್ಲ ಎಂದು ಸಂಸ್ಥಾಪಕರಾದ ಗಾಲಿ ಜನಾರ್ಧನ ರೆಡ್ಡಿಯವರ ತಿಳಿಸಿ, ನನ್ನ ಪಕ್ಷದ ಸಿದ್ಧಾಂತಗಳನ್ನು ಒಪ್ಪಿಕೊಂಡು ನನಗೆ ಬೆಂಬಲ ಸೂಚಿಸಿ ಪಕ್ಷ ಸೇರ್ಪಡೆಗೊಂಡ ಎಲ್ಲಾ ನಗರಸಭೆ ಸದಸ್ಯರು ಪ್ರತಿನಿಧಿಸುವ ಎಲ್ಲಾ ವಾರ್ಡಗಳಿಗೂ ಅವಶ್ಯಕತೆ ಗಳ ನಿರೀಕ್ಷೆ ಮೀರಿ ನಾನು ಅಭಿವೃದ್ಧಿ ಪಡಿಸುವೇ ಎಂದು ತಿಳಿಸಿದರು. ಈ ಸಮಯದಲ್ಲಿ ಕ್ಷೇತ್ರದ ಹಲವಾರು ಪಂಚಾಯತಿಯ ಹಾಲಿ ಸದಸ್ಯರು ಮತ್ತು ಸಾವಿರಾರು ಅಭಿಮಾನಿಗಳು ಪಕ್ಷ ಸೇರ್ಪಡೆಯಾದರು.

2023 ರ ವಿಧಾನಸಭೆ ಚುನಾವಣೆಯು ರಾಜ್ಯ ರಾಜ–



ಕಾರಣದಲ್ಲಿ ಗಾಲಿ ಜನಾರ್ಧನ ರೆಡ್ಡಿಯವರು ನೂತನ ಪಕ್ಷ ಹುಟ್ಟು ಹಾಕಿದ್ದು ರಾಷ್ಟ್ರೀಯ ಪಕ್ಷಗಳಿಗೆ ನುಂಗಲಾರದ ತುತ್ತಾಗಿದೆ. ಇಂದು ಮುಂಜಾನೆ ನಗರದ ಕೆಆರ್‌ಪಿಪಿ ಕೇಂದ್ರ ಕಚೇರಿಯ ವೇದಿಕೆ ಮೇಲೆ ನಡೆದ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಗಂಗಾವತಿ ನಗರಸಭೆಯ ಕಾಂಗ್ರೆಸ್ ನ ಆರು, ಬಿಜೆಪಿ ನಾಲ್ಕು, ಜೆಡಿ–ಎಸ್ ನ ಇಬ್ಬರು ಹಾಗೂ ಪಕ್ಷೇತರ ಒಬ್ಬರು ಸೇರಿ ಒಟ್ಟು 13 ಸದಸ್ಯರು ಕಲ್ಯಾಣ ರಾಜ್ಯ ಪ್ರಗತಿ ಪಕ್ಷ ಸೇ–ರಿದ ಘಟಾನುಘಟಿಗಳು. ಈ ಒಂದು ನಗರಸಭೆ ಸದಸ್ಯರು ಸೇರ್ಪಡೆಯಮದ ಪಕ್ಷಕ್ಕೆ ಭಾರೀ ಬೆಂಬಲ ಸಿಕ್ಕಂತಾಗಿದೆ. ಮುಂಬರುವ ದಿನಗಳಲ್ಲಿ ಇನೂ ಹಲವಾರು ವಿವಿಧ ಪಕ್ಷಗಳಿಂದ ಕೆಆರ್ಪಿ ಪಕ್ಷಕ್ಕೆ ಅಧಿಕೃತವಾಗಿ ಸೇರಲಿದ್ದಾರೆ. ಎಂದು ಪಕ್ಷದ ಜಿಲ್ಲಾಧ್ಯಕ್ಷರಾದ ಮನೋಹರ್ ಗೌಡ ಮಾಹಿತಿ ನೀಡಿದರು.

**ಪಕ್ಷ ಸೇರ್ಪಡೆ ಗೊಂಡ ನಗರಸಭೆ ಸದಸ್ಯರ ಪಟ್ಟಿ**

ಕಾಂಗ್ರೆಸ್ ನ ಜರೀನಾ ಬೇಗಂ ಗಂಡ ರಾಜ್ ಮಹಮ್ಮದ್, ಅಫ್ಷಾನ ಬೇಗಂ, ಮುಸ್ತಾಕ್ ಅಲಿ, ಭೀಮಮ್ಮ ಗಂ ರಂಗಪ್ಪ, ಮೌಲಸಾಬ್, ಜರೀನಾ ಬೇಗಂ ಗಂಡ ಎಂ ಡಿ ಇಸ್ಮಾಯಿಲ್. ಬಿಜೆಪಿ ಯಿಂದ ರಮೇಶ್ ಚೌಡ್ಕಿ, ಅಜಯ್ ಬಿಚ್ಚಾಲಿ, ಅನಿತಾ ಗಂಡ ಶಿವಶಂಕರ್ ಪಕ್ಷೇತರ ರಾದ ವೆಂಕಟರಮಣ, ಜೆಡಿಎಸ್ ನಿಂದ ಅಬ್ದುಲ್ ಜಬ್ಬಾರ್ ಬಿಚ್ಚುಕತ್ತಿ, ಮಹಮ್ಮದ್ ಉಸ್ಮಾನ್ ಬಿಚ್ಚುಕತ್ತಿ.

ಈ ಸಂದರ್ಭದಲ್ಲಿ ನಗರ ಪ್ರಚಾರ ಸಮಿತಿ ಅಧ್ಯಕ್ಷ ಅಮರಜ್ಯೋತಿ ನರಸಪ್ಪ, ಜಿಲ್ಲಾ ಘಟಕದ ಪ್ರಧಾನ ಕಾರ್ಯದರ್ಶಿ ಯಮನೂರು ಚೌಡ್ಕಿ ಈ ನಗರ,ಗ್ರಾಮೀಣ ಘಟಕದ ಅಧ್ಯಕ್ಷ ವಿರೇಶ್ ಬಲ್ಕುಂದಿ, ದುರುಗಪ್ಪ ಆಗೋಲಿ, ಬೆಟದಪ್ಪ ಚಿಕ್ಕಬೆಣಕಲ್, ಗ್ರಾಮೀಣ ಘಟಕದ ಉಪಾಧ್ಯಕ್ಷ ಆನಂದ ಗೌಡ, ಹಿರಿಯ ಮುಖಂಡರಾದ ಈ ರಾಮಕೃಷ್ಣ, ಯುವ ಘಟಕದ ಜಿಲ್ಲಾಧ್ಯಕ್ಷ ಚಂದ್ರಶೇಖರ ಹಿರೂರು, ರಾಮ ನಾಯ್ಕ್, ಮಾಜಿ ನಗರಸಭೆ ಸದಸ್ಯ ಬಿ ನಾಗರಾಜ್, ಟಿಜಿ ಬಾಬು, ನಾಗರಾಜ್ ಚಳಗೇರ,ಶಿವು ಆದೋನಿ ಪಕ್ಷದ ಇನ್ನೂ ಮುಂತಾದ ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತಿಯಿದ್ದರು.

## ಡಬಲ್ ಎಂಜೀನ್ ಸರ್ಕಾರದಿಂದ ರೈತರ ಕಲ್ಯಾಣ: ನಾಯಿಕ

ಹುಕ್ಕೇರಿ: ರೈತರ ಕಲ್ಯಾಣಕ್ಕೆ ಡಬಲ್ ಎಂಜೀನ್ ಸರ್ಕಾರ ಹಲವು ಮಹತ್ವದ ಯೋಜನೆಗಳನ್ನು ಜಾ–ರಿಗೊಳಿಸಿದ್ದು ಈ ಚುನಾವಣೆಯಲ್ಲಿ ಅನುಕೂಲವಾಗಲಿದೆ ಎಂದು ಬಿಜೆಪಿ ರೈತ ಮೋರ್ಚಾ ಜಿಲ್ಲಾ ಅಧ್ಯಕ್ಷ ಸತ್ಯಪ್ಪಾ ನಾಯಿಕ ಹೇಳಿದರು.

ಪಟ್ಟಣದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಮತ್ತು ರಾಜ್ಯ ಬಿಜೆಪಿ ಸರ್ಕಾರಗಳಿಂದ ರೈತರ ಸರ್ವತೋಮುಖ ಬೆಳವಣಿಗೆಗೆ ಸಾಕಷ್ಟು ಕೊಡುಗೆ ನೀಡಲಾಗಿದೆ ಎಂದರು.

ಪಿಎಂ ಕಿಸಾನ್ ಕರ್ನಾಟಕ, ಕೃಷಿ ಬಜೆಟ್, ರೈತ ಸಿರಿ, ಪ್ರಧಾನಮಂತ್ರಿ ಕಿಸಾನ್ ಸಮೃದ್ಧಿ ಕೇಂದ್ರಗಳು, ಮಣ್ಣಿನ ಆರೋಗ್ಯ ಕಾರ್ಡ್, ಕಬ್ಬು



ಬೆಳೆಗಾರರಿಗೆ ಬೆಂಬಲ ಹೀಗೆ ಅನೇಕ ಯೋಜನೆಗಳನ್ನು ಜಾ–ರಿಗೊಳಿಸಲಾಗಿದೆ. ಭದ್ರಾ ಮೇಲ್ದಂಡೆ, ಕಳಸಾ ಬಂಡೂರಿ, ಕೃಷ್ಣ ಮೇಲ್ದಂಡೆ ನೀರಾವರಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲಾಗಿದೆ ಎಂದು ಅವರು ಹೇಳಿದರು.

ಕೋವಿಡ್ ವೇಳೆ ಕೃಷಿಗೆ ವಿಶೇಷ ಪ್ಯಾಕೇಜ್, ನಿರಾಶ್ರಿತ ಮಕ್ಕಳ ರಕ್ಷಣೆಗೆ ಕ್ರಮ, ಯಶಸ್ವಿನಿ ಯೋಜನೆ, ರೈತ ವಿದ್ಯಾನಿಧಿ, ಸೌಭಾಗ್ಯ ಯೋಜನೆಯಡಿ ವಿದ್ಯುತ್ ಸಂಪರ್ಕ ಕಲ್ಪಿಸುವುದು, ಉಜ್ವಲ ಯೋಜನೆಯಡಿ ಸಿಲಿಂಡರ್ ಮತ್ತು ಬಲ್ಬ್‌ಗಳ ವಿತರಣೆ, ಎಸ್ಸಿಎಸ್ಟಿ ಮನೆಗಳಿಗೆ 75 ಯುನಿಟ್ ಉಚಿತ ವಿದ್ಯುತ್ ಪೂರೈಸಲಾಗಿದೆ ಎಂದು ಅವರು ಹೇಳಿದರು.

ಕೇಂದ್ರ ಮತ್ತು ರಾಜ್ಯ ಬಿಜೆಪಿ ಡಬಲ್ ಎಂಜೀನ್ ಸರ್ಕಾರಗಳು ರೈತರ, ಜನೋಪಯೋಗಿ ಸರ್ವ ಸಮುದಾಯಗಳ ಅಭಿವೃದ್ಧಿಗೆ ಶ್ರಮಿಸುತ್ತಿವೆ. ಆದರೆ, ಕಾಂಗ್ರೆಸ್ ಪಕ್ಷದ ನಾಯಕರು ಚುನಾವಣೆಯಲ್ಲಿ ಸೋಲಿನ ಭೀತಿಯಿಂದ ಬಿಜೆಪಿ ವಿರುದ್ಧ ಇಲ್ಲಸಲ್ಲದ ಅಪಪ್ರಚಾರ ಮಾಡುತ್ತಿದ್ದಾರೆ. ರೈತರು ಯಾವುದೇ ಊಹಾಪೋಹಗಳಿಗೆ ಕಿಡಿಗೊಡದೆ ಬಿಜೆಪಿಯನ್ನು ಬೆಂಬಲಿಸಬೇಕು. ಈ ಮೂಲಕ ಉಜ್ವಲ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಬಿಜೆಪಿ ಬ್ಲಾಕ್ ಅಧ್ಯಕ್ಷ ರಾಚಯ್ಯ ಹಿರೇಮಠ, ಹಿರಣ್ಯಕೇಶಿ ಸಕ್ಕರೆ ಕಾರ್ಖಾನೆ ನಿರ್ದೇಶಕರಾದ ಬಸವರಾಜ ಮರಡಿ, ಸುರೇಶ ದೊಡಲಿಂಗನವರ, ಮುಖಂಡರಾದ ಮಹೇಶ ಮೋಹಿತೆ, ಅರ್ಜುನ ಯಲ್ಲನಾಯಕ, ಶಿವನಗೌಡ ಪಾಟೀಲ, ಆನಂದ ಲಕ್ಕುಂಡಿ ಮತ್ತಿತರರು ಉಪಸ್ಥಿತರಿದ್ದರು.

## ವೀರಾಂಜನೇಯ ಕ್ಯಾಂಪ್ನಲ್ಲಿ ಟಿ.ಹೆಚ್.ಸುರೇಶ್‌ಬಾಬು ಭರ್ಜರಿ ಪ್ರಚಾರ



ಬಳ್ಳಾರಿ: ಬಳ್ಳಾರಿ ಜಿಲ್ಲೆಯ ಕಂಪ್ಲಿ ತಾಲೂಕಿನ 2023 ರ ಸಾರ್ವತ್ರಿಕ ಚುನಾವಣೆಯ ಬಿಜೆಪಿ ಪಕ್ಷದ ಅಭ್ಯರ್ಥಿಯಾದ ಟಿ ಹೆಚ್ ಸುರೇಶ್ ಬಾಬು ರವರು ವೀರಾಂಜನೇಯ ಕ್ಯಾಂಪ್ ಗ್ರಾಮದ ಮನೆಮನೆಗೂ ತೆರಳಿ ತಮ್ಮ ಕಳೆದ ಹತ್ತು ವರ್ಷದ ಅವಧಿಯಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಕ್ರಮಗಳು ಕೇಂದ್ರ ಮತ್ತು ರಾಜ್ಯ ಸರ್ಕಾರದ ಜನಪರ ಯೋಜನೆಗಳ ಕುರಿತು, ಮಾಹಿತಿ ನೀಡಿ, ಮತ್ತೊಮ್ಮೆ ಕಂಪ್ಲಿ ಕ್ಷೇತ್ರದ ಅಭಿವೃದ್ಧಿಗಾಗಿ ಬಿಜೆಪಿ ಪಕ್ಷವನ್ನು ಬೆಂಬಲಿಸಿ ಪ್ರಚಂಡ ಬಹುಮತದೊಂದಿಗೆ ಗೆಲ್ಲಿಸುವಂತೆ ಮನವಿ ಮಾಡಿದರು.

ಈ ಕಾರ್ಯಕ್ರಮದಲ್ಲಿ ಪಕ್ಷದ ಪದಾಧಿಕಾರಿಗಳು, ಗ್ರಾಮದ ಅನೇಕ ಹಿರಿಯ ಕಾರ್ಯಕರ್ತರು, ಗ್ರಾಮಸ್ಥರು ಅಭಿಮಾನಿಗಳು ಜೊತೆಯಲ್ಲಿದ್ದರು.

# ಬಿಜೆಪಿಯವರು ನನ್ನನ್ನು ಫುಟ್‌ಬಾಲ್ ನಂತೆ ಉಪಯೋಗಿಸಿಕೊಂಡಿದ್ದಾರೆ: ಬಿಜೆಪಿಯಲ್ಲಿ ನೊಂದು ಬೆಂದ ದಿವಾಕರ್

ಬಳ್ಳಾರಿ: ಬಳ್ಳಾರಿ ಜಿಲ್ಲೆಯ ಸಂಡೂರು ಪಕ್ಷ ಸಂಘಟನೆಯಾಗಲಿ, ಪಕ್ಷಕ್ಕೆ ದುಡಿದವರಾಗಲಿ ಬಿಜೆಪಿ ಪಕ್ಷಕ್ಕೆ ಬೇಕಾಗಿಲ್ಲ, ಪಕ್ಷದ ಟಿಕೆಟ್ ಬೇಕಾಗಿಲ್ಲದವರಿಗೆ ಟಿಕೆಟ್ ಕೊಟ್ಟಿರುವುದು ವ್ಯವಸ್ಥಿತವಾದ ಒಳ ಒಪ್ಪಂದವಾಗಿದೆ ಎಂದು ಬಿಜೆಪಿ ಪಕ್ಷದ ರೆಬಲ್ ಅಭ್ಯರ್ಥಿ ಕೆ.ಎಸ್. ದಿವಾಕರ್ ನೋವಿನಿಂದ ತಿಳಿಸಿದ್ದಾರೆ. ಅವರು ಪಕ್ಷದ ತಾಲೂಕಿನ ಎಲ್ಲಾ ಕಾರ್ಯಕರ್ತರ ಸಭೆಯಲ್ಲಿ ಬಿಜೆಪಿ ಪಕ್ಷ ನಡೆದುಕೊಂಡ ರೀತಿಯನ್ನು ಎಳೆ ಎಳೆಯಾಗಿ ಬಿಚ್ಚಿಟ್ಟರು, ಹೈಕಮಾಂಡ್ ಮಾಡಿದ ದ್ರೋಹ ಎಷ್ಟು ಎಂದರೆ ಫುಟ್‌ಬಾಲ್ ರೀತಿಯಲ್ಲಿ ಉಪಯೋಗಿಸಿಕೊಂಡಿದೆ, ಬಡವನಾಗಿ ಹುಟ್ಟಿ ಪಕ್ಷಕ್ಕಾಗಿ ಶ್ರಮಿಸಿದ್ದೇನೆ, ಏಕಾ ಏಕಿ ಟಿಕೇಟ್ ಕೇಳಿಲ್ಲ, ಕಳೆದ 15 ವರ್ಷಗಳಿಂದ ಶ್ರಮಿಸಿದ್ದೇನೆ, ಇಂದು ಜನತೆಯ ತೀರ್ಮಾನದ ಮೂಲಕವೇ ನಾನು ಜನಾರ್ಧನ್ ರಡ್ಡಿಯವರ ಕೆ.ಅರ್.ಪಿ.ಪಿ ಪಕ್ಷಕ್ಕೆ ಸೇರುತ್ತಿದ್ದೇನೆ ಎಂದರೆ ನೋವಾಗುತ್ತಿದೆ, ಕಾರಣ ಹಗಲಿರಳು ಪಕ್ಷಕ್ಕೆ ದುಡಿದವರಿಗೆ ಬೆಲೆ ಇಲ್ಲವಾಗಿದೆ, ಸಹೋದರರು, ನನ್ನ ತಾಯಿ ರಾಜಕೀಯ ಸಾಕು ಮೋಸ ಮಾಡಿದ್ದಾರೆ ಎಂದು ತಿಳಿಸಿದರು.

ಅದರೆ ಕಾರ್ಯಕರ್ತರ ಒತ್ತಡದಿಂದ ಅವರ ಮಗನಾಗಿ, ತಮ್ಮನಾಗಿ, ಸಹೋದರನಾಗಿ ರಾಜಕೀಯಕ್ಕೆ ಬರುತ್ತಿದ್ದೇನೆ ಎಂದು ವೇದಿಕೆಯಲ್ಲಿಯೇ ದು:ಖಿ–ತರಾದರು. ನಿಮ್ಮ ಮನೆಯ ಮಗನಾಗಿ ಕಾರ್ಯನಿರ್ವಹಿಸುತ್ತೇನೆ, ಉಡಿತುಂಬುವ ಕಾರ್ಯದಿಂದ



ತಾಯಂದಿರು ಅಶೀರ್ವದಿಸಿದ್ದಾರೆ, ಯುವಕರು ಕ್ರೀಡೆಗಳಲ್ಲಿ ಭಾಗವಹಿಸಿ ಅಶೀರ್ವದಿಸಿದ್ದಾರೆ, ಹಿರಿಯರು ಮಾರ್ಗದರ್ಶನದಿಮದ ಬೆಂಬಲಿಸಿದ್ದಾರೆ, ಕೆಲಸ ಮಾಡಿದ್ದೇನೆ, ಕೂಲಿ ಕೇಳಿದೆ, ಕಾಂಗ್ರೆಸ್ ಹಾಗೂ ಕೆಲ ಮುಖಂಡರ ಹೊಂದಾಣಿಕೆ ರಾಜಕಾರಣದಿಂದ ಜನತೆ ಬೇಸತ್ತಿದ್ದಾರೆ, ಶ್ರೀ ಕುಮಾರಸ್ವಾಮಿಯ ಆಶೀರ್ವಾದಿಂದ ನಿಮ್ಮ ಮುಂದೆ ಬಂದಿದ್ದೇನೆ, ಕಾಂಗ್ರೆಸ್ ಪಕ್ಷವನ್ನು ಸೋಲಿಸುವ ಗುರಿಯಿಂದ ನಾನು ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿದ್ದೇನೆ, ಎಲ್ಲಾ ಕಾರ್ಯಕರ್ತರು ಜನಾರ್ಧನ ರಡ್ಡಿ ಪಕ್ಷದಿಂದ ಸ್ಪರ್ಧಿಸಿ ಎನ್ನುವ ಮೂಲಕ ಜನತೆಯ ಅಭಿಪ್ರಾಯವೇ ನನ್ನ ಅಭಿಪ್ರಾಯವಾಗಿದೆ, ಬಹಳಷ್ಟು ನಾಯಕರು ಬಹು ಕೀಳಾಗಿ ಮಾತನಾಡಿದ್ದಾರೆ, ಒಬ್ಬ ಕಾರ್ಯಕರ್ತನ ಹಿಂದೆ ನೂರಾರು ಬೆಂಬಲಿಗಲಿದ್ದಾರೆ.

ನಿಮ್ಮ ಪ್ರೀತಿ, ಋಣದಿಂದ ನಾನು ಸ್ಪರ್ಧೆಗೆ ಇಳಿಯುತ್ತಿದ್ದೇನೆ ಮಂಗಳವಾರ ನಾಮಪತ್ರ ಸಲ್ಲಿಸುವ ಮೂಲಕ ನಿಮ್ಮಲ್ಲಿ ಮತ ಯಾಚಿಸುತ್ತೇನೆ ಎಂದರು. ಬಿಜೆಪಿ ಪಕ್ಷ ಪ್ರಮುಖ ನಾಯಕರನ್ನೇ ಹಾಗೂ ಗೆಲ್ಲುವವರನ್ನೇ ಗುರಿ ಮಾಡಿಕೊಂಡು ಟಿಕೆಟ್ ತಪ್ಪಿಸಿರುವುದನ್ನು ಕಂಡಾಗ ಒಳ ಒಪ್ಪಂದವೇ ಸರಿ,

ಸಂಡೂರಿನ ಪ್ರಮುಖ ನಾಯಕರು ಕಾಂಗ್ರೆಸ್ ನಾಯಕರೊಂದಿಗೆ ಒಳ ಒಪ್ಪಂದ ಮಾಡಿಕೊಂಡು ಇಂದು ಬಿಜೆಪಿ ಟಿಕೆಟ್ ತಪ್ಪಿಸಿದ್ದಾರೆ, ಶ್ರೀ ರಾಮುಲು ಅವರೂ ಸಹ ಪೂರ್ಣಪ್ರಮಾಣದಲ್ಲಿ ಟಿಕೇಟ್ ಕೊಡಿಸುವ ಪ್ರಯತ್ನ ಮಾಡಿದ್ದಾರೋ, ಇಲ್ಲವೋ ಗೊತ್ತಿಲ್ಲ ಎಂದಿದ್ದಾರೆ. ಇದೇ ಸಂದರ್ಭದಲ್ಲಿ ಪ್ರತಿಯೊಬ್ಬ ಕಾರ್ಯಕರ್ತರ ಒಪ್ಪಿಗೆಯನ್ನು ಬಹಿರಂಗವಾಗಿಯೇ ಕೈ ಎತ್ತುವ ಮೂಲಕ ಕೇಳಿದರು 5 ಸಾವಿರಕ್ಕೂ ಹೆಚ್ಚು ಕಾರ್ಯಕರ್ತರು ಹರ್ಷದಿಂದ ಕೈಎತ್ತಿ ಕೇಕೆ ಹಾಕಿ ಒಪ್ಪಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಮುಖಂಡರಾದ ಕೊಂಚಿಗೇರಿ ನಾಗರಾಜ ಮಾತನಾಡಿದರು. ಮುಖಂಡರಾದ ಅಂಬರೀಶ್, ಶಿವಾನಂದಪ್ಪ, ಚೋರನೂರು ಗುರುರಾಜ, ಭಾಗದ ಕೆ.ಎಸ್.ಕ.ಕುಮಾರಸ್ವಾಮಿ, ನಾಗರಾಜ, ಕುಮಾರಸ್ವಾಮಿ, ಶಾಂತಕುಮಾರ, ಸಂಪತ್ತ, ಮಂಜಣ್ಣ ಸಾವಿರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

## ಪ್ರೇಕ್ಷಕರ ಮನಸೂರೆಗೊಂಡ ಅಮ್ಮಾ ನಾನ್ನಕು ಪೆನ್ಷನ್ ವಚ್ಚಿಂದಿ ನಾಟಕ

ಬಳ್ಳಾರಿ: ಬಳ್ಳಾರಿ ನಗರದ ರಾಘವ ಕಲಾಮಂದಿರದಲ್ಲಿ, ರಾಘವ ಮೆಮೋರಿಯಲ್ ಅಸೋಸಿಯೇಷನ್, ವತಿಯಿಂದ 16–4–2023 ರಂದು ಸಂಜೆ 6ಕ್ಕೆ ಹಮ್ಮಿಕೊಂಡಿದ್ದ ಬಳ್ಳಾರಿ ರಾಘವರ 77ನೇ ವಾರ್ಷಿಕ ಪುಣ್ಯ ತಿಥಿ ಕಾರ್ಯಕ್ರಮವನ್ನು ಸಂಸ್ಥೆಯ ಪದಾಧಿಕಾರಿಗಳು ಜ್ಯೋತಿ ಬೆಳಗಿಸಿ, ಪುಷ್ಪಾಂಜಲಿ ಅರ್ಪಿಸುವ ಮೂಲಕ ಉದ್ಘಾಟಿಸಿದರು.

ಸಂಸ್ಥೆಯ ಕಾರ್ಯಕಾರಿಣಿ ಸದಸ್ಯರು ಹಾಗೂ ಸಾಹಿತಿಗಳಾದ ಎನ್.ಬಸವರಾಜ್ ರವರು ಬಳ್ಳಾರಿ ರಾಘವರ ಸಾಧನೆಗಳ ಬಗ್ಗೆ ಮಾತನಾಡುತ್ತಾ ರಾಘವರು ಬಳ್ಳಾ–ರಿಯ ಮುನ್ಸಿಪಲ್ ಹೈಸ್ಕೂಲ್ ನಲ್ಲಿ ಓದಿ ಮುಂದೆ ಮದ್ರಾಸ್ ನಲ್ಲಿ ಕಾನೂನು ಪದವಿಯನ್ನು ಪಡೆದರು, ಬಳ್ಳಾರಿಯಲ್ಲಿ ವಕೀಲವೃತ್ತಿ ಪ್ರಾರಂಭಿಸಿದರು.



ಬಾಲ್ಯದಿಂದಲೇ ನಾಟಕಗಳಲ್ಲಿ ಅಭಿನಯಿಸುವ ಹವ್ಯಾಸ ಬೆಳೆಸಿಕೊಂಡಿದ್ದ ರಾಘವರು ಪಂಚ ಭಾಷೆಗಳಲ್ಲಿ ಅಭಿನಯಿಸಿದ್ದಾರೆ. ನಾಟಕರಂಗದ ಅಧ್ಯಯನಕ್ಕಾಗಿ ವಿದೇಶ ಪ್ರಯಾಣ ಮಾಡಿದರು. ಅವರ ನಟನೆಯನ್ನು ಮಹಾತ್ಮ ಗಾಂಧೀಜಿ ಮತ್ತು ರವೀಂದ್ರನಾಥ ಟ್ಯಾಗೋರ್ ರವರು ಕೊಂಡಾಡಿದರು. ಇಂತಹ ಮಹಾನಟರು 16/4/1946 ರಂದು ಹಂಪೆಯ ವಿರೂಪಾಕ್ಷ ರಥೋತ್ಸವದಂದು ಇಹಲೋಕ ತ್ಯಜಿಸಿದ್ದಾರೆ.

ಆದರೆ ತಮ್ಮ ನಟನೆಯಿಂದ ಬಳ್ಳಾರಿಯ ಕೀರ್ತಿ ಪತಾಕೆಯನ್ನು ಜಗದೆಲ್ಲೆಡೆ ಪಸರಿಸಿದ ಮಹಾನಟ–ರೆಂಬ ಹೆಗ್ಗಳಿಕೆಗೆ ಪಾತ್ರರಾದರೆಂದರು. ಕಾರ್ಯಕ್ರಮವು ವಲೀಭಾಷಾರವರ ಪ್ರಾರ್ಥನೆಯಿಂದ ಪ್ರಾರಂಭ ವಾಯಿತು.ಅಧ್ಯಕ್ಷರಾದ ಕೆ.ಕೋಟೇಶ್ವರ ರಾವ್ ರವರು ಅಧ್ಯಕ್ಷೀಯ ನುಡಿಗಳಲ್ಲಿ ರಾಘವರು ಮಾಡಿರುವ ಸಾಧನೆಗಳನ್ನು ಕಲಾವಿದರು ಸ್ಮ–ರಿಸಿಕೊಂಡು ಕಲಾವಿದರು ಬೆಳೆಯಬೇಕು ಮತ್ತು ಅವರ ಹೆಸ–ರಿನಲ್ಲಿರುವ ಸಂಸ್ಥೆ ಸ್ಥಾಪನೆಯಾಗಿರುವ ಅಮೃತ ಮಹೋತ್ಸವ ಆಚರಣೆ ಮಾಡುತ್ತಿರುವುದು ಸಂತಸದ ಸುದ್ದಿ ಎಂದು ನುಡಿದರು. .ವಂದನಾ ರ್ಪಣೆಯನ್ನು ಸಹ ಕಾರ್ಯದರ್ಶಿ ಎಂ.ರಾಮಾಂಜನೇಯುಲು ಸಲ್ಲಿಸಿದರು. ಕಾರ್ಯಕ್ರಮ ನಿರ್ವಹಣೆಯನ್ನು ಗೌರವ ಕಾರ್ಯದರ್ಶಿಗಳಾದ ಎನ್.ಪ್ರಕಾಶ್,ರವರು ನಿರ್ವಹಿಸಿದರು.

## ಕೆಆರ್‌ಪಿ ಪಕ್ಷದ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ ಲಕ್ಷ್ಮಿ ಅರುಣ



ಬಳ್ಳಾರಿ: ಬಳ್ಳಾರಿ ನಗರ ಕ್ಷೇತ್ರಕ್ಕೆ ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಅಭ್ಯರ್ಥಿ ಗಾಲಿ ಲಕ್ಷ್ಮೀ ಅರುಣಾ ಅವರು ತಮ್ಮ ಸಾವಿರಾರು ಬೆಂಬಲಿಗರ ಮೂಲಕ ಆಗಮಿಸಿ ಮಗಳು ಬ್ರಹ್ಮಿಣಿ, ಅಳಿಯ ರಾಜೀವ್, ತಂದೆ ಪರಮೇಶ್ವರ ರೆಡ್ಡಿ, ತಾಯಿ ನಾಗಲಕ್ಷ್ಮಿ ಅವರೊಂದಿಗೆ ನಾಮಪತ್ರ ಸಲ್ಲಿಸಿ ಪಕ್ಷದ ಶಕ್ತಿ ಪ್ರದರ್ಶನ ಮಾಡಿದರು.

ನಗರದ ವೀರನಗೌಡ ಕಾಲೋನಿಯಲ್ಲಿನ ತಮ್ಮ ಗ್ಲಾಸ್ ಹೌಸ್ ಕಚೇರಿಯಿಂದ ತೆರೆದ ವಾಹನದಲ್ಲಿ ಪಕ್ಷದ ಮುಖಂಡರೊಂದಿಗೆ ಮೆರವಣಿಗೆ ಮೂಲಕ ನಗರದ ಆರಾಧ್ಯ ದೇವತೆ ಕನಕ ದುರ್ಗಮ್ಮ ದೇವಸ್ಥಾನಕ್ಕೆ ಬಂದು ಪೂಜೆ ಸಲ್ಲಿಸಿ ಬಳಿಕ ಮಹಾನಗರ ಪಾಲಿಕೆ ಕಚೇರಿಗೆ ಆಗಮಿಸಿ ಚುನಾವಣಾ ಆದಿಕಾರಿ ಎಂ.ಎನ್.ರುದ್ರೇಶ್ ಅವರಿಗೆ ನಾಮ ಪತ್ರ ಸಲ್ಲಿಸಿದರು. ನಂತರ ಪಕ್ಷದ ಜಿಲ್ಲಾ ಅಧ್ಯಕ್ಷ ಗೋನಾಳ್ ವಿರೂಪಾಕ್ಷಗೌಡ, ಪಾಲಿಕೆ ಮಾಜಿ ಸದಸ್ಯ ಮಾಜಿ ಮೇಯರ್ ಗುರ್ರಂ ವೆಂಕಟ–ರಮಣ, ಪಾಲಿಕೆ ಮಾಜಿ ಸದಸ್ಯೆ ಪರ್ವಿನ್ ಬಾನು ಅವರೊಂದಿಗೆ ನಾಮಪತ್ರ ಸಲ್ಲಿಸಿದರು.ಇದಕ್ಕೂ ಮುನ್ನ ನಗರದ ವಿವಿಧ ಪ್ರದೇಶಗಳಿಂದ ಜನರು ಪಕ್ಷದ ಬಾವುಟ, ಪಕ್ಷದ ವರಿಷ್ಟ ಜನಾರ್ಧನರೆಡ್ಡಿ ಅವರ ಭಾವಚಿತ್ರ ಹಿಡಿದು ವಾಹನಗಳಲ್ಲಿ ಪಕ್ಷದ ಕಚೇರಿಗೆ ಆಗಮಿಸಿದರು.ಅಲ್ಲಿಂದ ಡೊಳ್ಳು, ಕಹಳೆ, ತಾಷರಾಂ, ತಮಟೆ ಸೇರಿದಂತೆ ವಿವಿಧ ಕಲಾ ತಂಡಗಳೊಂದಿಗೆ ಪಟಾಕಿ ಸಿಡಿಸುತ್ತ, ಕೇಕೆ ಹಾಕುತ್ತಾ ಭರ್ಜರಿ ಮೆರವಣಿಗೆಯೊಂದಿಗೆ ತಮ್ಮ ಅಭ್ಯರ್ಥಿಯನ್ನು ಪಾಲಿಕೆ ಕಚೇರಿಗೆ ಕರೆತಂದರು.

ಒಟ್ಟಾರೆ ಇಂದಿನ ಜನ ಸಮೂಹ ಪಕ್ಷದ ಬಲ ಪ್ರದರ್ಶನದಂತೆ ಇತ್ತು ಎಂದರೆ ತಪ್ಪಾಗಲಾರದು. ಮೆರವಣಿಗೆಗೆ ಬಂದವರಿಗೆ ಮಜ್ಜಿಗೆ ಮತ್ತು ನೀರು ವಿತರಿಸಲಾಯಿತು.ನಾಮಪತ್ರ ಸಲ್ಲಿಸುವ ಮುನ್ನ ಪಕ್ಷದ ಅಧ್ಯಕ್ಷ ದಮ್ಮೂರು ರಾಮಣ್ಣ ಕಂಬಳಿ ಕುರಿ ನೀಡಿ ಜಯಘೋಷ ಮಾಡಿದರು.

# ಕಲಾರಸಿಕರ ಮನಸೂರೆಗೊಂಡ ನೃತ್ಯೋಲ್ಲಾಸ

ಬೆಳಗಾವಿ: ಶಾಂತಲಾ ನಾಟ್ಯಾಲಯ ಇನ್ಸ್ಟಿಟ್ಯೂಟ್ ವತಿಯಿಂದ ಭಾರತ ಸರಕಾರದ ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಇಲ್ಲಿನ ಟಿಳಕ ಚೌಕ್ ಬಳಿಯ ಲೋಕಮಾನ್ಯ ರಂಗಮಂದಿರದಲ್ಲಿ ಕಿಕ್ಕಿರಿದ ಪ್ರೇಕ್ಷಕರ ಉಪಸ್ಥಿತಿಯಲ್ಲಿ 'ನೃತ್ಯೋಲ್ಲಾಸ' ಕಾರ್ಯಕ್ರಮ ಭಾನುವಾರ ಸಂಜೆ ನಡೆಯಿತು.

ಶಾಂತಲಾ ನಾಟ್ಯಾಲಯದ ಗುರು ವಿದೂಷಿ ರೇಖಾ ಹೆಗಡೆ ಅವರ ನಿರ್ದೇಶನದಲ್ಲಿ ನಾಟ್ಯಾಲಯದ ವಿದ್ಯಾರ್ಥಿಗಳು ವೈವಿದ್ಯಮಯ ನೃತ್ಯಗಳನ್ನು ಪ್ರದರ್ಶಿಸಿದರು. ವಿದುಷಿ ಅನುಶ್ರೀ ಖಡಬಡಿ ಹಾಗೂ ವಿದ್ವತ್ ತಂಡದ ಗಣೇಶ ಸ್ತುತಿಯೊಂದಿಗೆ ಕಾರ್ಯಕ್ರಮ ಆರಂಭವಾಯಿತು.

ಸಬ್ ಜೂನಿಯರ್ ತಂಡದ ಶ್ಲೋಕ ಮತ್ತು ರೋಹಿತ್ ಹಾಗೂ ವಿದ್ವತ್ ತಂಡದ ಸಂಪೂರ್ಣ ರಾಮಾಯಣ ಪ್ರೇಕ್ಷಕರಿಂದ ಭಾರೀ ಕರತಾಡನ ಪಡೆಯಿತು. ಮಾ. ನಿನಾದ್ ಅಶೋಕ್ ಹಾಗೂ ಕಿರಿಯರ ತಂಡದ ವಚನ, ವಿದುಷಿ ರೇಖಾ ಅಶೋಕ ಹೆಗಡೆ ಅವರ ದೇವರ ನಾಮ, ಮಾ. ಋತ್ವಿಕ್ ಅಶೋಕ ಹಾಗೂ ಹಿರಿಯರ ತಂಡದ ಪದಂ, ಸಮೀಕ್ಷಾ ಆರ್. ಕಾರಂತ ಹಾಗೂ ಹಿರಿಯರ ತಂಡದ ಏಕತೆ ಮತ್ತು ವೈವಿದ್ಯತೆ ಪ್ರಾಕಾರಗಳು ಎಲ್ಲರ ಮೆಚ್ಚುಗೆಗೆ ಪಾತ್ರವಾದವು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪನಿರ್ದೇಶಕಿ ವಿದ್ಯಾವತಿ ಭಜಂತ್ರಿ, ಬೆಳಗಾವಿ ಕಲಾವಿದರ ಬೀಡಾಗಿದ್ದು, ಇಲ್ಲಿನ ಕಲೆಗಳು ಅತ್ಯಂತ ಸಮೃದ್ಧತೆಯಿಂದ ಕೂಡಿದೆ. ಕಲೆಯನ್ನು ನಾನು ಆಸ್ವಾದಿಸಬಹುದೇ ವಿನಃ ಅವುಗಳನ್ನು ವರ್ಣಿಸುವಷ್ಟು ಶಕ್ತಿ




ನಮಗಿಲ್ಲ. ಶಾಂತಲಾ ನಾಟ್ಯಾಲಯ ಕಳೆದ 35 ವರ್ಷದಲ್ಲಿ ಸಾವಿರಾರು ಮಕ್ಕಳನ್ನು ಬೆಳಕಿಗೆ ತರುವ ಮೂಲಕ ನಿಜವಾದ ಕಲಾಸೇವಗೈಯ್ಯುತ್ತಿದೆ. ಅವರ ಸೇವೆಯನ್ನು ಗಮನಿಸಿದರೆ ಸರಕಾರ ನೀಡುವ ಅನುದಾನ ಅತ್ಯಲ್ಪವಾಗಿದೆ. ಇಂತಹ ಸಂಸ್ಥೆ ನಮ್ಮ ಜಿಲ್ಲೆಯಲ್ಲಿರುವುದು ನಮಗೆ ಹೆಮ್ಮೆಯ ವಿಷಯವಾಗಿದೆ. ಮುಂದಿನ ದಿನಗಳಲ್ಲಿ ಹೆಚ್ಚಿನ ಸಹಕಾರ ನೀಡಲು ಪ್ರಯತ್ನಿಸಲಾಗುವುದು ಎಂದು ಹೇಳಿದರು.

ಕಳೆದ 25 ವರ್ಷದಿಂದ ಹುಬ್ಬಳ್ಳಿ ಮತ್ತು ಶಿರಸಿಯಲ್ಲಿ ನಾಟ್ಯ ಸೇವೆಯಲ್ಲಿ ನಿರತವಾಗಿರುವ ನಾಟ್ಯಾಂಜಲಿ ನೃತ್ಯಕಲಾ ಕೇಂದ್ರದ ನಿರ್ದೇಶಕಿ ಡಾ.ಸಹನಾ ಭಟ್ ಕಾರ್ಯಕ್ರಮ ಉದ್ಘಾಟಿಸಿ, ಒಂದು ನಾಟ್ಯ ಶಾಲೆಯನ್ನು ನಡೆಸುವಾಗ ಅದರ ಹಿಂದಿನ ಶ್ರಮವೇನು ಎನ್ನುವ ಅರಿವು ನನಗಿದೆ. ವಿದೂಷಿ ರೇಖಾ ಭಟ್ ಅವರು ಕಳೆದ 35 ವರ್ಷಗಳಿಂದ ತಪಸ್ಸಿನ ರೀತಿಯಲ್ಲಿ ಸಂಸ್ಥೆಯನ್ನು ನಡೆಸಿಕೊಂಡು ಬಂದಿದ್ದಾರೆ. ಅವರ ಕಲಾ ಸೇವೆಯನ್ನು ಬಹಳ ಹತ್ತಿರದಿಂದ ನಾನು ನೋಡುತ್ತ ಬಂದಿದ್ದೇನೆ. ಮುಂದಿನ ದಿನಗಳಲ್ಲಿ ಇನ್ನೂ ಸಾವಿರಾರು ಮಕ್ಕಳನ್ನು ಬೆಳೆಸುವ ಶಕ್ತಿಯನ್ನು ಭಗವಂತ ನೀಡಲಿ ಎಂದು ಹಾರೈಸಿದರು.

ಗೌರವ ಅತಿಥಿಯಾಗಿ ಆಗಮಿಸಿದ್ದ ಹಿರಿಯ ಪತ್ರಕರ್ತ, ಪ್ರಗತಿವಾಹಿನಿ ಮುಖ್ಯ ಸಂಪಾದಕ ಎಂ.ಕೆ. ಹೆಗಡೆ, ಶ್ರೀಮತಿ ಹೆಗಡೆ ಹಾಗೂ ವಿದೂಷಿ ರೇಖಾ ಹೆಗಡೆ ಹಾಗೂ ಅವರ ತಂಡದವರು, ಮಕ್ಕಳ ಸಂಖ್ಯೆ, ಅದರಿಂದ ಬರುವ ಆದ–ಾಯ ಯಾವುದನ್ನೂ ಯೋಚಿಸದೆ ದೇವರ ಕೆಲಸ ಎನ್ನುವ ರೀತಿಯಲ್ಲಿ ನಿಷ್ಠೆಯಿಂದ ನಾಟ್ಯಾಲಯವನ್ನು ನಡೆಸುತ್ತ ಬಂದಿದ್ದಾರೆ. ಸಹಸ್ರಾರು ಮಕ್ಕಳ ಪ್ರತಿಭೆಯನ್ನು ಹೊರಜಗತ್ತಿಗೆ ಪರಿಚಯಿಸಿದ್ದಾರೆ. 35 ವರ್ಷಗಳಿಂದ ಇಷ್ಟೊಂದು ದೊಡ್ಡ ಮಟ್ಟದಲ್ಲಿ ನಡೆಯುತ್ತಿರುವ ಈ ನಾಟ್ಯ ಶಾಲೆಗೆ ಸರಕಾರದಿಂದ ಸೂಕ್ತ ರೀತಿಯಲ್ಲಿ ಪ್ರೋತ್ಸಾಹ ಸಿಗದಿರುವುದು ಬೇಸರದ ಸಂಗತಿ. ಈ ವರ್ಷವಾದರೂ ಇಂತಹ ಸಂಸ್ಥೆಗೆ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ನೀಡುವ ಮೂಲಕ ಸರಕಾರ ತನ್ನ ಪ್ರಶಸ್ತಿಯ ಗೌರವವನ್ನು ಹೆಚ್ಚಿಸಿಕೊಳ್ಳಬೇಕು ಎಂದು ಆಗ್ರಹಿಸಿದರು.

ಪಂಡಿತ ರವೀಂದ್ರ ಶರ್ಮಾ, ಪ್ರದೀಪ ಭಟ್, ಶ್ರೀಮತಿ ಹೆಗಡೆ, ರತ್ನಮ್ಮ ವೇದಿಕೆಯಲ್ಲಿದ್ದರು. ಸುಬ್ರಹ್ಮಣ್ಯ ಭಟ್ ಮತ್ತು ಆರ್ಯ ಭಂಡಾರಕರ ಅತ್ಯಂತ ಮನೋಜ್ಞವಾಗಿ ಕಾರ್ಯಕ್ರಮ ನಿರೂಪಿಸಿದರು.

## ಎಸ್‌ಎಸ್‌ಎಲ್‌ಸಿ ಪರೀಕ್ಷೆಯ ಮೌಲ್ಯಮಾಪನ ಕೇಂದ್ರಗಳ 100 ಮೀ ಸುತ್ತಲೂ ಸಿಆರ್‌ಪಿಸಿ 1973 ಕಲಂ 144 ಜಾರಿ

ಬೆಳಗಾವಿ: ಮಾರ್ಚ/ಏಪ್ರೀಲ್ 2023 ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಮುಕ್ತಾಯವಾಗಿದ್ದು, ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮೌಲ್ಯ ಮಾಪನವು ಬೆಳಗಾವಿ ನಗರದ ಸೇಂಟ್ ಮೇರಿ ಇಂಗ್ಲೀಷ ಮಿಡಿಯಮ್ ಹೈಸ್ಕೂಲ್, ಸೇಂಟ್ ಪಾಲ್ ಇಂಗ್ಲೀಷ ಮಿಡಿಯಮ್ ಹೈಸ್ಕೂಲ್, ಸೇಂಟ್ ಝೇವಿಯರ್ ಇಂಗ್ಲೀಷ ಮಿಡಿಯಮ್ ಹೈಸ್ಕೂಲ್, ಸೇಂಟ್ ಆಂಥೋನಿ ಇಂಗ್ಲೀಷ ಮಿಡಿಯಮ್ ಹೈಸ್ಕೂಲ್, ಮಹಿಳಾ ವಿದ್ಯಾಲಯ ಮರಾಠಿ ಹೈಸ್ಕೂಲ್, ಉಷಾತಾಯಿ ಗೋಗಟೆ ಗರ್ಲ್ಸ ಹೈಸ್ಕೂಲ್, ಸಿದ್ದರಾಮೇಶ್ವರ ಪಿಯು ಕಾಲೇಜು ಶಿವಬಸವ ನಗರ ಹಾಗೂ ಕನ್ನಡ ಮಾಧ್ಯಮಿಕ ಶಾಲಾ ಹೈಸ್ಕೂಲ್ ಮಹಾಂತೇಶ ನಗರ ಈ 08 ಕೇಂದ್ರಗಳಲ್ಲಿ ಏಪ್ರಿಲ್.17 2023 ಬೆಳಿಗ್ಗೆ 6 ಗಂಟೆಯಿಂದ ಮೇ.5 2023 ರ ಬೆಳಿಗ್ಗೆ 6 ಗಂಟೆಯವರೆಗೆ ಮೌಲ್ಯಮಾಪನ ಸಡೆಯಲಿದ್ದು ಸದರಿ ಕೇಂದ್ರಗಳ ಸುತ್ತಲು ಸಿಆರ್‌ಪಿಸಿ ಕಲಂ 144 ರ ಅಡಿ ನಿಷೇದಾಜ್ಞೆ ಹೊರಡಿಸಿ ಹೆಚ್ಚುವರಿ ಜಿಲ್ಲಾ ದಂಡಾಧಿಕಾರಿಗಳಾದ ಡಾ॥ ಬೋರಲಿಂಗಯ್ಯ ಎಂ ಬಿ ಅವರು ಆದೇಶಿಸಿದ್ದರೆ.

ನಿಷೇಧಾಜ್ಞೆಯ ಅವಧಿಯಲ್ಲಿ ಮೌಲ್ಯಮಾಪನ ಕೇಂದ್ರಗಳ ಸುತ್ತಲು 5 ಕ್ಕಿಂತ ಹೆಚ್ಚು ಜನರು ಗುಂಪು ಸೇರುವುದನ್ನು ನಿಷೇಧಿಸಲಾಗಿದೆ. ಈ ಅವಧಿಯಲ್ಲಿ ಮೌಲ್ಯಮಾಪನ ಕೇಂದ್ರಗಳ ಸುತ್ತಲು ಶಸ್ತ್ರ, ಬಡಿಗೆ, ಬರ್ಚಿ, ಖಡ್ಗ, ಗಧೆ, ಬಂದೂಕು, ಚೂರಿ, ಲಾಠಿ, ಡೊಣ್ಣೆ, ಚಾಕೂ ಅಥವಾ ದೇಹಕ್ಕೆ ಅಪಾಯವನ್ನುಂಟು ಮಾಡಲು ಉಪಯೋಗಿಸಬಹುದಾದ ಯಾವುದೇ ಮಾರಕಾಸ್ತ್ರವನ್ನು ತೆಗೆದುಕೊಂಡು ಹೋಗುವದನ್ನು ಮತ್ತು ತಿರುಗಾಡುವುದನ್ನು ಪ್ರತಿಬಂಧಿಸಲಾಗಿದೆ.

ಮೌಲ್ಯಮಾಪನ ಕೇಂದ್ರಗಳ ಸುತ್ತಲು ಕಲ್ಲುಗಳನ್ನು ಕ್ಷಾರ ಪದಾರ್ಥ ಇಲ್ಲವೇ ಸ್ಫೋಟಕ ವಸ್ತುಗಳು ಯಾವುದೇ ದಹನಕಾರಿ ವಸ್ತುಗಳು ಇತ್ಯಾದಿಗಳನ್ನು ಸದರಿ ಸ್ಥಳಕ್ಕೆ ತೆಗೆದುಕೊಂಡು ಹೋಗುವುದನ್ನು ಮತ್ತು ಶೇಖರಿಸುವುದನ್ನು ನಿಷೇಧಿಸಲಾಗಿದೆ. ಹಾಗೂ ಮೌಲ್ಯಮಾಪನ ಕೇಂದ್ರಗಳ ಸುತ್ತಲು ಯಾವುದೇ ವ್ಯಕ್ತಿ ಸಾರ್ವಜನಿಕರಾಗಲಿ ಮೇಲೆ ವಿವರಿಸಿದ ಮಾರಕಾಸ್ತ್ರಗಳು, ಸ್ಫೋಟಕ ವಸ್ತುಗಳು, ವಿನಾಶಕಾರಿ ವಸ್ತುಗಳು ಹಾಗೂ ಇತರೆ ಆಕ್ಷೇಪಾರ್ಹ ವಸ್ತುಗಳು ಹೊಂದಿದ್ದು ಕಂಡುಬಂದ ಕೂಡಲೇ ಅವುಗಳನ್ನು ವಶಪಡಿಸಿಕೊಳ್ಳಲು ಯಾವುದೇ ಪೊಲೀಸ್ ಅಧಿಕಾರಿಗಳಿಗೆ ಅಧಿಕಾರ ಇರುತ್ತದೆ. ಅಂಥಹ ಮಾರಕಾಸ್ತ್ರಗಳನ್ನು ಸರಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು ಅಲ್ಲದೆ ಸಂಬಂಧಿಸಿದ ವ್ಯಕ್ತಿಗಳ ಮೇಲೆ ಕಾನೂನು ರೀತ್ಯ ಕ್ರಮ ಜರುಗಿಸಲಾಗುವುದು.

ನಿಷೇಧಾಜ್ಞೆಯ ಅವಧಿಯಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಲಿನ ಸ್ಥಳದಲ್ಲಿ ಬಹಿರಂಗವಾಗಿ ಘೋಷಣೆ ಮಾಡುವುದು, ಪದ ಹಾಡುವುದು, ವಾದ್ಯ ಬಾರಿಸುವುದು, ವ್ಯಾಖನ ಕೊಡುವುದು ಸನ್ನೆ ಅಥವಾ ನಕಲಿ ಪ್ರದರ್ಶನವನ್ನು ಹಾಗೂ ಸಾರ್ವಜನಿಕ ಸಭ್ಯತೆ ಅಥವಾ ನೀತಿಯನ್ನು ಆಕ್ರಮಿಸಬಹುದಾದ ಕೃತ್ಯಗಳನ್ನು ಮಾಡುವುದನ್ನು ನಿಷೇಧಿಸಲಾಗಿದೆ.

ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 100 ಮೀಟರ್ ಅಂತರದಲ್ಲಿ ಧ್ವನಿವರ್ಧಕ ಉಪಯೋಗಿಸುವದನ್ನು ನಿಷೇಧಿಸಲಾಗಿದೆ.

ಈ ಆಜ್ಞೆಯು ಅಂತ್ಯಕ್ರೀಯೆ ಮೆರವಣಿಗೆಗಳಿಗೆ ಮತ್ತು ಇನ್ನಿತರ ಕಾರಣಗಳಿಗಾಗಿ ಅನುಮತಿ ಪಡೆದು ತೆಗೆಯಿಸಲಾದ ಮೆರವಣಿಗೆಗಳಿಗೆ ಅನ್ವಯಿಸುವದಿಲ್ಲ. ಸದರಿ ಆಜ್ಞೆಯನ್ನು ಉಲ್ಲಂಘಿಸುವವರ ವಿರುದ್ಧ ಕಲಂ 188 ಭಾರತೀಯ ದಂಡ ಸಂಹಿತೆಯ ಪ್ರಕಾರ ಕ್ರಮವನ್ನು ಜರುಗಿಸಲು ಸಂಬಂಧಪಟ್ಟ ಪಿ.ಐ ರವರಿಗೆ ಅನುಮತಿ ನೀಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರಾಗೃಹದಲ್ಲಿ ಕಾಡುಗಳ್ಳ ವೀರಪ್ಪನ್ ಸಹಚರ ಸಾವು



ಮೈಸೂರು: ಕೇಂದ್ರ ಕಾರಾಗೃಹದಲ್ಲಿದ್ದ ಕಾಡುಗಳ್ಳ ವೀರಪ್ಪನ್ ಸಹಚರ ಮೀಸೆ ಮಾದಯ್ಯ (72) ಸಾವನ್ನಪ್ಪಿದ್ದಾನೆ.

ಸುಮಾರು 29 ವರ್ಷದಿಂದ ಜೈಲಿನಲ್ಲಿದ್ದ ಮಾದಯ್ಯ, ಬಟ್ಟೆ ತೊಳೆಯುವಾಗ ಜಾರಿಬಿದ್ದಿದ್ದನು.

ತಕ್ಷಣ ಕೆ.ಆರ್ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿತ್ತು.

ಆದರೆ ಚಿಕಿತ್ಸೆ ಫಲಕಾರಿಯಾಗದೆ ಆಸ್ಪತ್ರೆಯಲ್ಲೇ ಸಾವನ್ನಪ್ಪಿದ್ದಾನೆ. ಮಂಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಈತನಿಗೆ ಪಾಲಾರ್ ಬಾಂಬ್ ಸ್ಫೋಟ್ ಪ್ರಕರಣಕ್ಕೆ ಸಂಬಂಧಿಸಿದಂತೆ ಜೀವಾವಧಿ ಶಿಕ್ಷೆಯಾಗಿತ್ತು. ವೀರಪ್ಪನ್ ಇನ್ನುಳಿದ ಸಹಚರರಾದ ಸೈಮನ್, ಬಿಲವೇಂದ್ರನ್, ಮೀಸೆ ಮಥಾಯನ್ ಜೈಲಿನಲ್ಲಿರುವಾಗಲೇ ಸಾವನ್ನಪ್ಪಿದ್ದರು. ಮಾದಯ್ಯ ಕೂಡ ಹೀಗೇ ಮೃತಪಟ್ಟಿದ್ದಾನೆ.



## 11 ನೇ ವಾರ್ಡಿನಲ್ಲಿ ಮತಯಾಚನೆ ನಡೆಸಿದ ಶಾಸಕ ಸೋಮಶೇಖರರೆಡ್ಡಿ

ಬಳ್ಳಾರಿ: ಬಳ್ಳಾರಿ ನಗರದ 11 ನೇ ವಾರ್ಡ್‌ನ ಫ್ಲವರ್ ಸ್ಟ್ರೀಟ್, ಬೆಂಗಳೂರು ರಸ್ತೆ, ಕಮ್ಮಿಂಗ್ ರಸ್ತೆ ಮತ್ತಿತರ ಕಡೆಗಳಲ್ಲಿ ಬಳ್ಳಾರಿ ನಗರ ಬಿಜೆಪಿ ಆಕಾಂಕ್ಷಿಯಾದ ಸೋಮಶೇಖರರೆಡ್ಡಿಯವರು ಭರ್ಜರಿ ಚುನಾವಣಾ ಪ್ರಚಾರ ನಡೆಸಿ, ಬಿಜೆಪಿಯ ಜನಪರ ಕಾರ್ಯಗಳನ್ನು ಜನಮನಕ್ಕೆ ಮುಟ್ಟಿಸಿದರು.

ಈ ಸಂದರ್ಭದಲ್ಲಿ ಶ್ರೀನಿವಾಸ್ ಮೋತ್ಕಾರ್,ರಾಜೀವ್ ತೊಗರಿ, ವೀರಶೇಖರರೆಡ್ಡಿ, ಮುಖಂಡರು, ಕಾರ್ಯಕರ್ತರು ಜೊತೆಗಿದ್ದರು.

## ಮತ್ತೆ ಇಬ್ಬರು ಪ್ರಭಾವಿ ಶಾಸಕರಿಗೆ ಬಿಜೆಪಿ ಶಾಕ್




ಬೆಂಗಳೂರು: ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ಅಭ್ಯರ್ಥಿಗಳ 3ನೇ ಪಟ್ಟಿ ಬಿಡುಗಡೆಯಾಗಿದ್ದು 10 ಕ್ಷೇತ್ರಗಳಿಗೆ ಟಿಕೆಟ್ ಘೋಷಣೆ ಮಾಡಲಾಗಿದೆ.

ಹಾಲಿ ಶಾಸಕರಾದ ಎಸ್.ಎ.ರಾಮದಾಸ್ ಹಾಗೂ ಅರವಿಂದ ಲಿಂಬಾವಳಿಗೆ ಟಿಕೆಟ್ ಕೈತಪ್ಪಿದೆ.

ಮೈಸೂರಿನ ಕೃಷ್ಣರಾಜ ಕ್ಷೇತ್ರದ ಹಾಲಿ ಶಾಸಕರಾಗಿರುವ ಎಸ್.ಎ.ರಾಮದಾಸ್ ಅವರಿಗೆ ಈಬಾರಿ ಬಿಜೆಪಿ ಟಿಕೆಟ್ ನೀಡಿಲ್ಲ. ರಾಮದಾಸ್ ಬದಲಿಗೆ ಶ್ರೀವತ್ಸ ಅವರಿಗೆ ಟಿಕೆಟ್ ನೀಡಲಾಗಿದೆ.

ಇನ್ನೋರ್ವ ಶಾಸಕ ಅರವಿಂದ್ ಲಿಂಬಾವಳಿ ಅವರಿಗೂ ಟಿಕಿಕೆಟ್ ಕೈತಪ್ಪಿದೆ. ಮಹದೇವಪುರ ಕ್ಷೇತ್ರದ ಹಾಲಿ ಶಾಸಕ ಅರವಿಂದ್ ಲಿಂಬಾವಳಿ ಅವರಿಗೆ ಬಿಜೆಪಿ ಟಿಕೆಟ್ ನೀಡಿಲ್ಲ, ಅರವಿಂದ್ ಲಿಂಬಾವಳಿ ಬದಲು ಅವರ ಪತ್ನಿ ಮಂಜುಳಾ ಲಿಂಬಾವಳಿ ಅವರನ್ನು ಕಣಕ್ಕಿಳಿಸಲಾಗಿದೆ.

ಇನ್ನು ಗೋವಿಂದರಾಜನಗರ ಟಿಕೆಟ್ ಆಕಾಂಕ್ಷಿಯಾಗಿದ್ದ ಸಚಿವ ವಿ.ಸೋಮಣ್ಣ ಅವರ ಪುತ್ರ ಅರುಣ್ ಸೋಮಣ್ಣ ಅವರಿಗೆ ಬಿಜೆಪಿ ಟಿಕೆಟ್ ಕೈತಪ್ಪಿದ್ದು, ಉಮೇಶ್ ಶೆಟ್ಟಿ ಅವರಿಗೆ ನೀಡಲಾಗಿದೆ.

ನಾಗಠಾಣಾ ಕ್ಷೇತ್ರದ ಟಿಕೆಟ್ ಆಕಾಂಕ್ಷಿಯಾಗಿದ್ದ ಸಚಿವ ಗೋವಿಂದ ಕಾರಜೋಳ ಅವರ ಪುತ್ರನಿಗೂ ಟಿಕೆಟ್ ಮಿಸ್ ಆಗಿದ್ದು, ಸಂಜಯ್ ಐಹೊಳೆ ಅವರನ್ನು ಅಭ್ಯರ್ಥಿಯನ್ನಾಗಿ ಘೋಷಿಸಲಾಗಿದೆ.

## ಜೆಡಿಎಸ್ ಸೇರಿದ ಬೆಳಗಾವಿ ಜಿಲ್ಲೆಯ ಮತ್ತೂ ಇಬ್ಬರು ಟಿಕೆಟ್ ಆಕಾಂಕ್ಷಿಗಳು



ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿ ಪಕ್ಷಾಂತರ ಪರ್ವ ಮುಂದುವರಿದಿದೆ. ಸೋಮವಾರ ಇಬ್ಬರು ಪ್ರಮುಖ ಟಿಕೆಟ್ ಆಕಾಂಕ್ಷಿಗಳು ಜೆಡಿಎಸ್ ಸೇರಿದ್ದಾರೆ.

ಯಮಕನಮರಡಿ ಬಿಜೆಪಿ ಟಿಕೆಟ್ ಆಕಾಂಕ್ಷಿಯಾಗಿದ್ದ ಮಾರುತಿ ಅಷ್ಟಗಿ ಮತ್ತು ಸವದತ್ತಿ ಕಾಂಗ್ರೆಸ್ ಟಿಕೆಟ್ ಆಕಾಂಕ್ಷಿ ಪಂಚನಗೌಡ ದ್ಯಾಮನಗೌಡರ್ ಜೆಡಿಎಸ್ ಸೇರಿದ್ದಾರೆ.

ಸವದತ್ತಿಯಲ್ಲಿ ಜೆಡಿಎಸ್ ನಾಯಕ ಎಚ್.ಡಿ.ಕುಮಾರಸ್ವಾಮಿ ಅವರ ಸಮ್ಮುಖದಲ್ಲಿ ಈ ಇಬ್ಬರು ಪಕ್ಷ ಸೇರಿದರು.

ಮಾರುತಿ ಅಷ್ಟಗಿ ಯಮಕನಮರಡಿ ಕ್ಷೇತ್ರದಿಂದ ಕಣಕ್ಕಿಳಿಯಲಿದ್ದಾರೆ. ಪಂಚನಗೌಡ ದ್ಯಾಮನಗೌಡರ್ ಜೆಡಿಎಸ್ ಅಭ್ಯರ್ಥಿ ಸೌರವ್ ಚೋಪ್ರಾಗೆ ಬೆಂಬಲ ಘೋಷಿಸಿದ್ದಾರೆ.

## ಇಂದು ಶಾಸಕಿ ಡಾಕ್ಟರ್ ಅಂಜಲಿ ನಿಂಬಾಳ್ಕರ್ ಅವರು ತಮ್ಮ ನಾಮಪತ್ರ ಸಲ್ಲಿಕೆ



ಖಾನಾಪೂರ : ವಿಧಾನಸಭಾ ಚುನಾವಣೆ ಹಿನ್ನಲೆಯಲ್ಲಿ ಕಾಂಗ್ರೆಸ್ ಪಕ್ಷ ಅಧಿಕೃತ ಅಭ್ಯರ್ಥಿಯಾಗಿ ಇಂದು ಶಾಸಕಿ ಡಾಕ್ಟರ್ ಅಂಜಲಿ ನಿಂಬಾಳ್ಕರ್ ಅವರು ನಾಮಪತ್ರ ಸಲ್ಲಿಸಲಿದ್ದು ಈ ಕುರಿತು ಶಾಸಕಿ ಡಾಕ್ಟರ್ ಅಂಜಲಿ ನಿಂಬಾಳ್ಕರ್ ಮಾತನಾಡಿ ಕಳೆದ ನಿರಂತರವಾಗಿ ಐದು ವರ್ಷಗಳಿಂದ ನಿಮ್ಮ ಆರ್ಶಿವಾದದಿಂದ ಸೇವೆ,ಸ್ನೇಹ, ಪ್ರೀತಿಯಿಂದ, ಕೆಲಸ ಮಾಡಿತೋರಿಸಿದಿನಿ ಇನ್ನೂ ಮುಂದೆ ಕೂಡಾ ನಿಮ್ಮ ಸೇವೆ ಮಾಡಲು ಅವಕಾಶ ನೀಡಬೇಕು ಇಂದು ಬೆಳಿಗ್ಗೆ ಹತ್ತು ಗಂಟೆಗೆ ಚೌಕಾಶಿ ದೇವಿ ಮಂದಿರದಿಂದ ರ್ಯಾಲಿ ಮೂಲಕ ತಹಶೀಲ್ದಾರ್ ಕಾರ್ಯಾಲಯದವರೆಗೆ ಹೋಗಿ ನಾಮಪತ್ರ ಸಲಿಸೋಣ ಎಂದು ಕರೆ ನೀಡಿದರು.

## 75 ಸಾವಿರಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲ್ಲಲಿದ್ದೇನೆ: ಬೊಮ್ಮನಹಳ್ಳೀ ಶಾಸಕ ಸತೀಶ್ ರೆಡ್ಡಿ

ಬೆಂಗಳೂರು: ಕ್ಷೇತ್ರದಲ್ಲಿ ನಾನು ಮಾಡಿರುವ ಅಭಿವೃದ್ದಿ ಕೆಲಸಗಳು ಕೈ ಹಿಡಿಯಲಿದ್ದು, ಸುಮಾರು 75 ಸಾವಿರಕ್ಕೂ ಹೆಚ್ಚು ಮತಗಳ ಅಂತರದಿಂದ ನಾಲ್ಕನೇ ಬಾರಿಗೆ ಬೊಮ್ಮನಹಳ್ಳಿ ಕ್ಷೇತ್ರದ ಜನರು ನನಗೆ ಆಶೀರ್ವದಿಸಲಿದ್ದಾರೆ ಎಂದು ಬಿಜೆಪಿ ಮುಖ್ಯ ಸಚೇತಕರು ಹಾಗೂ ಬೊಮ್ಮನಹಳ್ಳಿ ಶಾಸಕರಾದ ಸತೀಶ್ ರೆಡ್ಡಿ ಹೇಳೀದರು.



ಸೋಮವಾರ ಬೊಮ್ಮನಹಳ್ಳೀ ವಿಧಾನಸಭಾ ಕ್ಷೇತ್ರದ ಚುನಾವಣೆಗೆ ಬಿಜೆಪಿ ಅಭ್ಯರ್ಥಿಯಾಗಿ ನಾಲ್ಕನೇ ಬಾರಿ ನಾಮಪತ್ರ ಸಲ್ಲಿಸಿ ಮಾತನಾಡಿದರು.

ಕೇಂದ್ರದಲ್ಲಿ ನರೇಂದ್ರ ಮೋದಿಜಿ ಅವರ ನೇತೃತ್ವದ ಸರಕಾರ ರಾಜ್ಯದಲ್ಲಿ ಬಸವರಾಜ ಬೊಮ್ಮಾಯಿ ನೇತೃತ್ವದ ಸರಕಾರಗಳು ಡಬಲ್ ಫೋರ್ಸ್‌ನಲ್ಲಿ ಅಭಿವೃದ್ದಿ ಕಾರ್ಯವನ್ನು ಮಾಡಿವೆ. ಸತತ ಮೂರು ಬಾರಿ ಆಯ್ಕೆಯಾಗುವ ಮೂಲಕ ನನ್ನ ಕ್ಷೇತ್ರದಲ್ಲಿ ಹಲವಾರು ಅಭಿವೃದ್ದಿ ಕಾರ್ಯಗಳನ್ನು ಮಾಡಿದ್ದು ಇವುಗಳ ಆಧಾರದ ಮೇಲೆ ಮತದಾರರು ಹೆಚ್ಚಿನ ಅಂತರದಿಂದ ಗೆಲ್ಲಿಸಲಿದ್ದಾರೆ ಎಂದು ಹೇಳಿದರು. ನಾಮಪತ್ರ ಸಲ್ಲಿಕೆಗೂ ಮುನ್ನ ಬೃಹತ್ ಮೆರವಣಿಗೆಯಲ್ಲಿ ಆಗಮಿಸಿದ ಅವರು ಹೊಂಗಸಂದ್ರದ ಶ್ರೀ ವೀರಾಂಜನೇಯಸ್ವಾಮಿ ದೇವರಿಗೆ ಪೂಜೆ ಸಲ್ಲಿಸಿ, ಬಿಬಿಎಂಪಿ ಮಾಜಿ ಉಪಮೇಯರ್ ರಾಮ್ ಮೋಹನ್ ರಾಜ್ ಹಾಗೂ ಇನ್ನಿತರ ಪ್ರಮುಖ ನಾಯಕರೊಂದಿಗೆ ನಾಮಪತ್ರ ಸಲ್ಲಿಸಿದರು.

## ಕಾಂಗ್ರೆಸ್ ಕಚೇರಿ ಉದ್ಘಾಟಿಸಿದ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ



ಗೋಕಾಕ: ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿಯವರು ಸೋಮವಾರ ನಗರದ ಬಸ್ ನಿಲ್ದಾಣ ಬಳಿ ಗೋಕಾಕ ವಿಧಾನಸಭಾ ಮತಕ್ಷೇತ್ರದ ನೂತನ ಕಾಂಗ್ರೆಸ್ ಕಚೇರಿ ಉದ್ಘಾಟಿಸಿದರು.

ಇದೇ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರುವ ವಾತಾವರಣ ನಿರ್ಮಾಣವಾಗಿದ್ದು, ಎಲ್ಲೆಡೆ ಕಾಂಗ್ರೆಸ್ ಅಲೆ ಬೀಸುತ್ತಿದೆ. ಕಾರಣ ಕಾರ್ಯಕರ್ತರು ಬೂತ್ ಮಟ್ಟದಲ್ಲಿ ಪ್ರಚಾರ ಚುರುಕುಗೊಳಿಸಿ ಅಭ್ಯರ್ಥಿಗಳನ್ನು ಹೆಚ್ಚಿನ ಮತಗಳಿಂದ ಗೆಲ್ಲಿಸಬೇಕೆಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಡಾ. ಮಹಾಂತೇಶ ಕಡಾಡಿ, ಬಂದ್ರಶೇಖರ ಕೊನ್ನುರ್, ಸಿದ್ದಲಿಂಗ್ ದಳವಾಯಿ, ಮಹಾಂತೇಶ ಹೊಳೆಯಾಚಿ, ವಿವೇಕ ಜತ್ತಿ, ಪುಟ್ಟು ಖಾನಾಪುರೆ, ಪ್ರಕಾಶ ಡಾಂಗೆ, ಭಗವಂತ ಹುಳ್ಳಿ ಸೇರೆದಂತೆ ನೂರಾರು ಕಾರ್ಯಕರ್ತರು ಇದ್ದರು.

## ಚಿತ್ರಕಲೆ, ಪಠ್ಯೇತರ ಚಟುವಟಿಕೆಗಳು ಮಕ್ಕಳ ಸಾಧನೆಗೆ ಪೂರಕ: ನಾ.ರೇವನ್

ದಾವಣಗೆರೆ: ಏಪ್ರಿಲ್ ಪಠ್ಯೇತರ ಚಟುವಟಿಕೆಗಳಾದ ಚಿತ್ರಕಲೆ, ಸಂಗೀತ, ವಾದ್ಯ ನುಡಿಸುವುದು ಸೇರಿದಂತೆ ಯಾವುದೇ ರೀತಿಯ ಸೃಜನಶೀಲ ಕಲೆಗೆ ಮಕ್ಕಳು ತೊಡಗಿಕೊಂಡರೆ ಪೋಷಕರು ಸಹಾ ಪ್ರೋತ್ಸಾಹ ನೀಡಬೇಕು. ಇದರಿಂದ ಅವರ ಓದುವಿಕೆ ಇನ್ನಷ್ಟು ಅಭಿವೃದ್ಧಿ ಹೊಂದುತ್ತದೆ ಎಂದು ನಗರದ ಹಿರಿಯ ಕಲಾವಿದ ನಾ. ರೇವನ್ ಅಭಿಪ್ರಾಯ ಪಟ್ಟರು.

ನಗರದ ಶಿವಯೋಗಾಶ್ರಮದ ಆವರಣದಲ್ಲಿ ಭಾನುವಾರ ದಾವಣಗೆರೆಯ ಚಿತ್ರಕಲಾ ಪರಿಷತ್ ವಿದ್ಯಾನಗರದ ಕಲಾ ಪರಿಷತ್, ದಾವಣಗೆರೆ ಜಿಲ್ಲಾ ಚಿತ್ರಕಲಾ ಶಿಕ್ಷಕರ ಸಂಘ, ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ, ಸ್ವಸ್ತಿಕ್ ಆರ್ಟ್ ಗ್ಯಾಲರಿ ಸಹಯೋಗದೊಂದಿಗೆ ಕರ್ನಾಟಕ ಲಲಿತಕಲಾ ಅಕಾಡೆಮಿ ಅಧ್ಯಕ್ಷರಾದ ಕೀರ್ತಿಶೇಷ ಪಿ.ಆರ್. ತಿಪ್ಪೇಸ್ವಾಮಿ ಜನ್ಮ ಶತಾಬ್ದಿ ಪ್ರಯುಕ್ತ ಸಾರ್ವಜನಿಕವಾಗಿ ನಡೆದ ಉಚಿತ ಚಿತ್ರ ಬರೆಯುವ ಸ್ಪರ್ಧೆಯನ್ನು ಉದ್ಘಾಟಿಸಿ ಮಾತನಾಡಿದ ಅವರು ಇಂತಹ ಪಠ್ಯೇತರ ಚಟುವಟಿಕೆಗಳಲ್ಲಿ ಮಕ್ಕಳು ಭಾಗವಹಿಸಿ ತಮ್ಮ ಸೃಜನಶೀಲತೆಯನ್ನು ಅಭಿವೃದ್ಧಿಗೊಳಿಸಬೇಕು. ಇದನ್ನು ಒಂದು ಹವ್ಯಾಸವನ್ನಾಗಿ ಸ್ವೀಕರಿಸುವುದರಿಂದ ಮಕ್ಕಳ ಬಿಡುವಿನ ಸಮಯ ಸಾರ್ಥಕವಾಗುತ್ತದೆ ಎಂದರು.



ಮಕ್ಕಳು ಬರೀ ಓದೋದು, ಶಾಲೆ, ಪಠ್ಯ ಎಂದು ಇದರಲ್ಲಿಯೇ ಕಾಲ ಕಳೆಯುವುದರಿಂದ ಬಹಳ ರೋಸಿ ಹೋಗಿರುತ್ತಾರೆ. ಮಕ್ಕಳು ಪ್ರತೀ ದಿನದಲ್ಲಿ ಒಂದು ಗಂಟೆ ಇಂತಹ ಪಠ್ಯೇತರವಾದ ಬೇರೆ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಓದಿನ ಶಕ್ತಿ ಇನ್ನೂ ಜಾಸ್ತಿಯಾಗುತ್ತದೆ ಎಂದು ಕೆಲವು ತಜ್ಞರು ಅಭಿಪ್ರಾಯಪಟ್ಟಿದ್ದಾರೆ. ಮಕ್ಕಳಿಗೆ ಓದಿನ ಬಾರ ಜಾಸ್ತಿ ಹಾಕದೇ ಕ್ರೀಡೆ, ಯೋಗ, ಚಿತ್ರಕಲೆ, ಸಂಗೀತದಂತಹ ಯಾವುದಾದರೂ ಒಂದು ಚಟುವಟಿಕೆಗಳಲ್ಲಿ ತೊಡಗಿಸಿ, ಅವರನ್ನು ಸರ್ವತೋಮುಕವಾಗಿ ಬೆಳೆಸಬೇಕು ಎಂದು ಪೋಷಕರಿಗೆ ಕರೆ ನೀಡಿದರು.

ದಾವಣಗೆರೆಯ ಚಿತ್ರಕಲಾ ಪರಿಷತ್‌ನ ಅಧ್ಯಕ್ಷರಾದ ಸದಾನಂದ ಹೆಗಡೆ ಮಾತನಾಡಿ, ನೀವುಗಳು ರಚಿಸಿ ನೀಡಿದ ಚಿತ್ರಗಳನ್ನು ನಮ್ಮ ಹಿರಿಯ ಕಲಾವಿದರುಗಳು ತೀರ್ಪುಗಾರರಾಗಿ ಪರಿಶೀಲಿಸಿ ವಿಜೇತ ಮಕ್ಕಳನ್ನು ಆಯ್ಕೆ ಮಾಡುತ್ತಾರೆ. ಇಂದು ಭಾಗವಹಿಸಿದ ಮಕ್ಕಳಿಗೆ ಪ್ರಮಾಣ ಪತ್ರವನ್ನು ನೀಡಲಾಗಿದೆ. ಇದರಲ್ಲಿ ಆಯ್ಕೆಯಾಗಿ ವಿಜೇತರಾದ ಪ್ರಥಮ, ದ್ವಿತೀಯ, ತೃತೀಯ ಬಹುಮಾನ ಪಡೆದ ಮಕ್ಕಳಿಗೆ ನಗದು ಬಹುಮಾನವನ್ನು ಕೀರ್ತಿಶೇಷ ಪಿ.ಆರ್.ತಿಪ್ಪೇಸ್ವಾಮಿ ಜನ್ಮ ಶತಾಬ್ದಿ ಸಮಿತಿಯಿಂದ ನೀಡುತ್ತಾರೆ ಎಂದರು. ಇಂತಹ ಕಾರ್ಯಕ್ರಮಗಳು ನಿಮಗೆ ಸವಿನೆನಪಾಗಿರುತ್ತವೆ ಎಂದು ಹೇಳಿದರು.

ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ ಸಂಸ್ಥಾಪಕ ಸಾಲಿಗ್ರಾಮ ಗಣೇಶ ಶೆಣೈ ಪ್ರಾಸ್ತಾವಿಕವಾಗಿ ಮಾತನಾಡಿ, ಇಂದಿನ ಈ ಸ್ಪರ್ಧೆಯ ವಿಜೇತರಿಗೆ ಏಪ್ರಿಲ್ 18 ರಂದು ದಾವಣಗೆರೆ ವಿದ್ಯಾನಗರದ ರಸ್ತೆಯಲ್ಲಿರುವ ವಿಶ್ವವಿದ್ಯಾನಿಲಯ ದೃಶ್ಯ ಕಲಾ ಮಹಾವಿದ್ಯಾಲಯದಲ್ಲಿ (ಸ್ಕೂಲ್ ಆಫ್ ಆರ್ಟ್ ಕಾಲೇಜ್) ಬಹುಮಾನ ವಿತರಿಸಲಾಗವುದು ಎಂದು ಕಾರ್ಯಕ್ರಮದ ರೂಪುರೇಷೆಯನ್ನು ತಿಳಿಸಿ ಪ್ರಾರಂಭದಲ್ಲಿ ಸ್ವಾಗತ ಮಾಡಿ, ನಿರೂಪಿಸಿ ಕೊನೆಯಲ್ಲಿ ವಂದಿಸಿದರು.

## ಸಿರುಗುಪ್ಪ ಮೂರು ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ








ಸಿರುಗುಪ್ಪ : ನಗರದ ತಾಲೂಕು ಕಛೇರಿಯಲ್ಲಿ ನಾಮಪತ್ರ ಸಲ್ಲಿಕೆಯ ಐದನೇ ದಿನವಾದ ಸೋಮವಾರ ಮೂವರು ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ.

ಕಾಂಗ್ರೇಸ್ ಅಭ್ಯರ್ಥಿಯಾಗಿ ಸಿರುಗುಪ್ಪ ನಿವಾಸಿ ಬಿ.ಎಂ.ನಾಗರಾಜ–ತಂದೆ ಬಿ.ಮಾರೆಪ್ಪ, ಕೆ.ಆರ್.ಎಸ್. ಪಕ್ಷದ ಅಭ್ಯರ್ಥಿಯಾಗಿ ಹಳೆಕೋಟೆ ಗ್ರಾಮದ ನಿವಾಸಿ ದೊಡ್ಡಯಲ್ಲಪ್ಪ ತಂದೆ ವೀರಭದ್ರಪ್ಪ ಹಾಗೂ ಸಿರಿಗೇರಿ ಗ್ರಾಮದ ನಿವಾಸಿಹಳ್ಳೀಮರದ ವೀರೇಶತಂದೆ ಹಳ್ಳೀಮರದ ಹೊನ್ನೂರಪ್ಪ ಅವರು ಬಿ.ಎಸ್.ಪಿ ಪಕ್ಷದ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದಾರೆ.

ಸಿರುಗುಪ್ಪ ವಿಧಾನಸಭಾ ಎಸ್.ಟಿ ಮೀಸಲು ಕ್ಷೇತ್ರವಾಗಿದ್ದು, ನಾಮಪತ್ರ ಸಲ್ಲಿಸಿದ ಮೂವರು ವಾಲ್ಮೀಕಿ ಜನಾಂಗಕ್ಕೆ ಸೇರಿದವರು.

2023 ರಚುನಾವಣೆಯ 92 ವಿಧಾನಸಭೆಎಸ್.ಟಿ. ಕ್ಷೇತ್ರದ ಚುನಾವಣಾಧಿಕಾರಿ ಸತೀಶ್ ಅವರುನಾಮ ಪತ್ರಸ್ವೀಕರಿಸಿದ್ದಾರೆ.

## ಹುಕ್ಕೇರಿ ಕ್ಷೇತ್ರದಲ್ಲಿ ಕತ್ತಿ ಕುಟುಂಬ ರಾಜಕಾರಣ ಅಂತ್ಯ: ಮಲ್ಲಿಕಾರ್ಜುನ ರಾಶಿಂಗೆ

ಹುಕ್ಕೇರಿ: ಈ ಸಲದ ಚುನಾವಣೆಯಲ್ಲಿ ಬದಲಾವಣೆ ಗಾಳಿ ಬೀಸುತ್ತಿದ್ದು ಹುಕ್ಕೇರಿ ಕ್ಷೇತ್ರದ ಜನತೆ ಕತ್ತಿ ಕುಟುಂಬ ರಾಜಕಾರಣಕ್ಕೆ ಅಂತ್ಯ ಹಾಡಲು ನಿರ್ಧರಿಸಿದ್ದಾರೆ ಎಂದು ಚಿಕ್ಕೋಡಿ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ರಾಶಿಂಗೆ ಹೇಳಿದರು.

ತಾಲೂಕಿನ ವಿವಿಧ ಗ್ರಾಮಗಳ ಬಿಜೆಪಿ ಮುಖಂಡರು ಮತ್ತು ಕಾರ್ಯಕರ್ತರು ಪಕ್ಷ ತೊರೆದು ಕಾಂಗ್ರೆಸ್ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕ್ಷೇತ್ರದ ಜನತೆ ಸುಮಾರು ಮೂರು ದಶಕಗಳಿಂದ ಕತ್ತಿ ಕುಟುಂಬ ನಡೆಸುವ ದಬ್ಬಾಳಿಕೆ, ಸರ್ವಾಧಿಕಾರ ಮತ್ತು ಕಿರುಕುಳಕ್ಕೆ ಬೇಸತ್ತು.



ಈ ಸಲ ಶಾಸಕರನ್ನು ಬದಲಾಯಿಸಲು ತೀರ್ಮಾನಿಸಿದ್ದಾರೆ ಎಂದರು.

ಕ್ಷೇತ್ರದ ವಿವಿಧ ಯೋಜನೆಗಳ ಅನುಷ್ಠಾನದಲ್ಲಿ ಯಾವುದೇ ಪ್ರಾತಿನಿಧಿಕ ಸಂಸ್ಥೆ ಮತ್ತು ಸಂವಿಧಾನಬದ್ಧ ಹಕ್ಕು ಇರದ ಕತ್ತಿ ಕುಟುಂಬದ ಸದಸ್ಯರು ಹಸ್ತಕ್ಷೇಪ ಮಾಡಿ ಅಧಿಕಾರ ಚಲಾಯಿಸುತ್ತಾರೆ. ಅಧಿಕಾರಿಗಳ ಸ್ವಜನಪಕ್ಷಪಾತದಿಂದ ಇಲ್ಲಿ ಅಧಿಕಾರ ದುರುಪಯೋಗವಾಗುತ್ತಿದೆ. ಹಿರಣ್ಯಕೇಶಿ ಸಕ್ಕರೆ ಕಾರ್ಖಾನೆ, ವಿವಿಧ ಸಂಘ–ಸಂಸ್ಥೆಗಳಲ್ಲಿ ಹೆಸರಿಗೆ ಮಾತ್ರ ಆಡಳಿತ ಮಂಡಳಿಗಳಿದ್ದು ಅಧಿಕಾರ ಚಲಾವಣೆ ಕತ್ತಿ ಕುಟುಂಬ ನಿರ್ವಹಿಸಿ ಕೋಟ್ಯಂತರ ರೂ, ಗಳನ್ನು ಲೂಟಿ ಮಾಡಿದೆ ಎಂದು ಅವರು ಆರೋಪಿಸಿದರು.

ಬಿಜೆಪಿಯಲ್ಲಿ ಎರಡನೇ ಹಂತದ ನಾಯಕರನ್ನು ಬೆಳೆಯಲು ಬಿಟ್ಟಿಲ್ಲ. ಕಿರುಕುಳಕ್ಕೆ ಬೇಸತ್ತು ಮಾಜಿ ಸಚಿವ ಶಶಿಕಾಂತ ನಾಯಿಕ ತಮ್ಮ ಬೆಂಬಲಿಗರೊಂದಿಗೆ ಬಿಜೆಪಿ ತ್ಯಜಿಸುವಂತಾಯಿತು. ಸುಮಾರು 30ಕ್ಕೂ ಹೆಚ್ಚು ವರ್ಷದಿಂದ ಕ್ಷೇತ್ರ ಪ್ರತಿನಿಧಿಸುತ್ತಿದ್ದರೂ ಸಂಪೂರ್ಣ ನೀರಾವರಿ ಮಾಡಲಾಗಿಲ್ಲ. ಅಭಿವೃದ್ಧಿಯಲ್ಲಿ ಕ್ಷೇತ್ರ ಸಾಕಷ್ಟು ಹಿಂದಿದೆ ಎಂದು ಅವರು ಆರೋಪಿಸಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಜನವಿರೋಧಿ ನೀತಿ, ಅಗತ್ಯ ವಸ್ತುಗಳ ಬೆಲೆ ಏರಿಕೆ, ಬಿಎಸ್‌ಎನ್‌ಎಲ್ ಮತ್ತು ರೈಲ್ವೆ ಇಲಾಖೆ ಖಾಸಗೀಕರಣ, ನಿರುದ್ಯೋಗ ಹೆಚ್ಚಳ, ಕೆಎಂಎಫ್ ನಂದಿನಿ ಸಂಸ್ಥೆ ಮುಚ್ಚುವ ಹುನ್ನಾರ ನಡೆದಿದೆ ಎಂದು ಅವರು ದೂರಿದರು.

ಕಾಂಗ್ರೆಸ್ ಅಭ್ಯರ್ಥಿಯೂ ಆದ ಮಾಜಿ ಸಚಿವ ಎ.ಬಿ.ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಗುಡಸ, ಹಟ್ಟಿಆಲೂರ, ಅವರಗೋಳ, ಹೊಸೂರ, ಹುಕ್ಕೇರಿ, ಯರಗಟ್ಟಿ ಸೇರಿದಂತೆ ಮತ್ತಿತರ ಗ್ರಾಮಗಳ ಬಿಜೆಪಿ, ಜೆಡಿಎಸ್ನ ನೂರಾರು ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಪಕ್ಷ ತೊರೆದು ಕಾಂಗ್ರೆಸ್ಗೆ ಸೇರ್ಪಡೆಯಾಗಿ ಎ.ಬಿ.ಪಾಟೀಲಗೆ ಬೆಂಬಲ ವ್ಯಕ್ತಪಡಿಸಿದರು.

## ದೇಶಮುಖ ವಾಡಯಲ್ಲಿ ಕಾಂಗ್ರೇಸ್ ಪಕ್ಷಕ್ಕೆ ಸೇರ್ಪಡೆಯಾದ ಮುಖಂಡರು

ನಾಲತವಾಡ: ದುಡ್ಡಿನಿಂದ ಮತದಾರರನ್ನು ಕೊಂಡುಕೊಳ್ಳುತ್ತೇನೆ ಎಂಬ ಭ್ರಮೆಯಲ್ಲಿರುವ ರಾಜಕಾರಣಿಗೆ ಈ ಬಾರಿ ಕ್ಷೇತ್ರದ ಜನರು ತಕ್ಕ ಪಾಠ ಕಲಿಸಬೇಕು ಎಂದು ಮಾಜಿ ಸಚಿವ ಸಿ.ಎಸ್.ನಾಡಗೌಡ ಅಪ್ಪಾಜಿ ಹೇಳಿದರು.

ರವಿವಾರ ಪಟ್ಟಣದ ಮಾಜಿ ಸಚಿವ ದಿ.ಜೆ.ಎಸ್.ದೇಶಮುಖ ಅವರ ವಾಡೆಯಲ್ಲಿ ನಡೆದ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಮಾತನಾಡಿ, ದೇಶಮುಖ ಹಾಗೂ ನಾಡಗೌಡ ಮನೆತನದ ಮಧ್ಯ ರಾಜಕೀಯ ಬಿನ್ನಾಭಿಪ್ರಾಯ ಮಾತ್ರ ಇತ್ತು ಆದರೆ ನಮ್ಮ ಮತ್ತು ಅವರ ಸಂಭಂದ ಯಾವತ್ತು ಕೂಡ ಗಟ್ಟಿಯಾಗಿತ್ತು. ಅನಿವಾರ್ಯ ಹಾಗೂ ಕೆಲವರ ಸೆಡ್ಡೆಂತರದಿಂದ ನಾನು ರಾಜಕೀಯಕ್ಕೆ ಬಂದಿದ್ದು, ಚುನಾವಣೆಯಲ್ಲಿ ದೇಶಮುಖ ಅವರ ವಿರುದ್ದ ಗೆದ್ದಾಗ ಅವರ ಆರ್ಶಿವಾದ ಪಡೆಯಲು ವಾಡೆಗೆ ಬಂದರೆ ಅವರು ನನ್ನನ್ನು ಬೆನ್ನು ತಟ್ಟಿ ಬಡವರ ಸೇವೆ ಮಾಡು ಎಂದು ಹರಿಸಿ ಕಳಿಸಿದ್ದರು. ಮುಂದೇ ಬರಬರತಾ ರಾಜಕೀಯ ಭಿನ್ನಾಬಿಪ್ರಾಯದಿಂದ ಎರಡು ಕುಟುಂಬಗಳು ದೂರಾಗಿತ್ತಾ ಹೋದವು, ಸುಮಾರು 30 ವರ್ಷದಿಂದ ನಾನು ಎರಡು ಕುಟುಂಬ ಒಂದಲ್ಲ ಒಂದು ದಿನ ಒಂದಾಗಬೇಕು ಎಂದು ಕನಸು ಕಾಣುತಿದ್ದೆ. ಈಗ ಆ ಸಮಯ ಕೂಡಿ ಬಂದಿದೆ. ಇವತ್ತು ದೇಶಮುಖ ಮತ್ತು ನಾಡಗೌಡ ಕುಟುಂಬಗಳು ಒಂದಾಗಿವೆ ಎಂದರು.

ವ್ಯವಸ್ಥೆಯಲ್ಲಿ ಸುಧಾರಣೆ ತರಬೇಕಾದರೆ ನಾವು ಮೊದಲು ಶುದ್ದರಾಗಿರಬೇಕು, ನಾನು ವೇದಿಕೆ ಮುಖಂತರ ಪ್ರಮಾಣ ಮಾಡಿ ಹೇಳುತ್ತೇನೆ ನಿಮ್ಮಿಂದ ನನಗೆ ಒಂದು ನಯಾ ಪೈಸೆ ಕೂಡ ಅಪೇಕ್ಷೆ ಮಾಡುವದಿಲ್ಲ, ಕ್ಷೇತ್ರದಲ್ಲಿ ನಡೆಯುತ್ತಿರುವ ದೌರ್ಜನ್ಯ ಮತ್ತು ಭ್ರಷ್ಟಾಚಾರ ತೊಲಗಿಸಲು ನಾನು ಪಣ ತೊಟ್ಟಿದ್ದೇನೆ ಅವರ ವಿರುದ್ದ ನಾನು ಸಮರ ಸಾರಿದ್ದೇನೆ ಅದಕ್ಕೆ ದೇಶಮುಖ ಮನೆತನದವರು ನನಗೆ ಬೆಂಬಲವನ್ನು ನೀಡಿದ್ದಾರೆ ಅದರ ಜೋತೆಗೆ ದೇಶಮುಖ ಅಭಿಮಾನಿಗಳ ಬೆಂಬಲ ಕೂಡ ನನಗೆ ದೊರೆತಿದ್ದು ಆನೆ ಬಲ ಬಂದಂತಾಗಿದೆ. ಇದು ನನ್ನ ಕೊನೆಯ ಚುನಾವಣೆಯಾಗಿದೆ. ನನ್ನ ಕೊನೆಯ ಚುನಾವಣೆಯಲ್ಲಿ ನಾನು ಎಲ್ಲಾ ತ್ಯಾಗಕ್ಕು ಸಿದ್ದನಾಗಿದ್ದೇನೆ.



ಕೊನೆಯ ಚುನಾವಣೆಯಲ್ಲಿ ಕ್ಷೇತ್ರ ಬದಲಾವಣೆ ಮಾಡಿ ಹೋಗಿದ್ದಾರೆ ಎಂದು ಜನರು ನನ್ನ ಬಗ್ಗೆ ಮಾತನಾಡಬೇಕು ಆ ಕನಸು ನಾನು ಕಟ್ಟಿಕೊಂಡಿದ್ದೇನೆ. ದೇಶಮುಖ ಅಭಿಮಾನಿಗಳಿಗೂ ನಾನು ನನ್ನ ಅಭಿಮಾನಿಗಳ ರೀತಿ ನಡೆದುಕೊಳ್ಳುತ್ತೇನೆ. ಯಾವದೇ ರೀತಿ ಬೇಧ ಭಾವ ಮಾಡುವದಿಲ್ಲ, ಎಲ್ಲರು ನನ್ನವರು ಎಂಬ ಭಾವನೆಗಳನ್ನು ಇಟ್ಟುಕೊಂಡು ಹೋಗುತ್ತೇನೆ. ದೇಶಮುಖ ಮತ್ತು ನಾಡಗೌಡ ಅಭಿಮಾನಿಗಳಿಗೆ ತೊಂದರೆ ಆದಾಗ ಅವರ ಬೆನ್ನಿಗೆ ನಾನು ಸದಾ ಇರುತ್ತೇನೆ.

ನ್ಯಾಯವನ್ನು ಎತ್ತಿ ಹಿಡಿಯುವ ಮನೆತನ ಅದು ದೇಶಮುಖ ಮನೆತನ, ದೇಶಮುಖ ಅವರು ಸಜ್ಜನ ರಾಜಕಾರಣಿ ಅವರ ಮಾಗದರ್ಶನದಲ್ಲಿಯೇ ನಾನು ಸಾಗುತಿದ್ದೇನೆ, ನಾಲತವಾಡ ಗ್ರಾಮವನ್ನು ಇಡಿ ರಾಜ್ಯಕ್ಕೆ ಪರಿಚಯಿಸಿದ ವ್ಯಕ್ತಿಯಾರಾದರು ಇದ್ದರೆ ಅದು ದೇಶಮುಖ ಅವರು, ವಿಧಾನಸೌದದಲ್ಲಿ ಇನ್ನು ಕೂಡ ದೇಶಮುಖ ಅವರ ಭಾವಚಿತ್ರ ಇಟ್ಟು ಅವರಿಗೆ ಅಷ್ಟೊಂದು ಗೌರವ ಕೊಡುತ್ತಾರೆ. ಯುವ ರಾಜಕಾರಣಿಗಳು ಅವರ ಆದರ್ಶಗಳನ್ನು ಅಡವಡಿಸಿಕೊಂಡರೆ ರಾಜ್ಯದಲ್ಲಿ ಬಡವರಿಗೆ ಯಾವ ರೀತಿ ನ್ಯಾಯ ಕೊಡಿಸಬೇಕು ಎಂದು ಅರ್ಥವಾಗುತ್ತದೆ ಎಂದರು.

ಇಲ್ಲಿ ರಾಜಕೀಯ ಮೌಲ್ಯಕ್ಕೆ ಬೆಲೆಇಲ್ಲ, ಅಶಾಂತಿ ವಾತಾವರ್ಣ ಸೃಷ್ಟಿಯಾಗಿದೆ. ಮತ್ತೇ ಮುದ್ದೇಬಿಹಾಳ ಕ್ಷೇತ್ರದಲ್ಲಿ ಶಾಂತಿನೆಲಸಬೇಕಾದರೆ ದೇಶಮುಖ ಮತ್ತು ನಾಡಗೌಡ ಕುಟುಂಬಗಳು ಒಂದಾಗಬೇಕು ಎಂದು ಮನವಿ ಮಾಡಿದಾಗ ನಮ್ಮ ಅಭಿಮಾನಿಗಳನ್ನು ಕರೆಸಿ ವಿಚಾರ ಮಾಡೋಣ ಎಂದು ಮಾತು ಕೊಟ್ಟು ಅದಾದ ನಂತರ ಎಲ್ಲ ಅಭಿಮಾನಿಗಳು ಕರೆಸಿ ವಿಚಾರಿಸಿ. ಇಂದು ದೇಶಮುಖ ಮತ್ತು ನಾಡಗೌಡ ಕುಟುಂಬ ಒಂದಾಗುವ ವೇದಿಕೆ ಸಜ್ಜಾಗಿದೆ ಎಂದರು. ಈ ಬಾರಿ ಮುದ್ದೇಬಿಹಾಳ ಕ್ಷೇತ್ರದಲ್ಲಿ ಬದಲಾವಣೆ ಗಾಳಿ ಬೀಸಿದೆ ಎರಡು ಕಟುಂಬದ ಅಪಾರ ಅಭಿಮಾನಿಗಳು ಕೂಡಿಕೊಂಡು ಅಪ್ಪಾಜಿ ನಡಗೌಡ ಅವರ ಗೆಲವಿಗೆ ಶ್ರಮಿಸಬೇಕು, ಅಪ್ಪಾಜಿ ನಾಡಗೌಡ ಅವರನ್ನು ಅಭೂತ ಪೂರ್ವ ಗೆಲವು ತಂದಕೊಡಬೇಕು ಎಂದರು.

# ಕಾಂಗ್ರೆಸ್ ಪಕ್ಷದಿಂದ ಮಾತ್ರ ಸರ್ವರ ಪ್ರಗತಿ ಸಾಧ್ಯ:

## ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ

ಗೋಕಾಕ: 2023ರಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ತರಲು ಯುವಕರು ಪಣ–ತೊಡಬೇಕು. ಮಾಜಿ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಜಾರಿಗೆ ತಂದ ಕಾಂಗ್ರೆಸ್ ಸರ್ಕಾರದ ಯೋಜನೆಗಳನ್ನು ಜನರಿಗೆ ತಿಳಿಸಬೇಕೆಂದು ಕೆಪಿಸಿಸಿ ಕಾರ್ಯಾಧ್ಯಕ್ಷ, ಶಾಸಕ ಸತೀಶ್ ಜಾರಕಿಹೊಳಿ ಹೇಳಿದರು.



ಯಮಕನಮರಡಿ ಮತಕ್ಷೇತ್ರದ ಪಣಗುತ್ತಿ, ಪಾಶ್ಚಾಪೂರ, ಪರಕನಹಟ್ಟಿ ಹಾಗೂ ರಾಜಕಟ್ಟಿ ಗ್ರಾಮದ ಮುಖಂಡರು, ಕಾರ್ಯಕರ್ತರು, ಮಹಿಳೆಯರನ್ನು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಮಾಡಿಕೊಂಡು ಮಾತನಾಡಿದ ಅವರು, ವಿಧಾನಸಭೆ ಚುನಾವಣೆಗೆ ಕೇವಲ 30 ದಿನಗಳು ಬಾಕಿ ಇದ್ದು, ಯಮಕನಮರಡಿ ಮತಕ್ಷೇತ್ರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಕಾಂಗ್ರೆಸ್ ಸೇರ್ಪಡೆಯಾಗುತ್ತಿರುವುದು ಖುಷಿ ತಂದಿದೆ ಎಂದು ತಿಳಿಸಿದರು.

ಕಾಂಗ್ರೆಸ್ ಪಕ್ಷದಿಂದ ಮಾತ್ರ ಸರ್ವರ ಸರ್ವತೋಮುಖ ಪ್ರಗತಿ ಸಾಧ್ಯವಿದೆ. ಕಳೆದ 15 ವರ್ಷಗಳಿಂದ ಯಮಕನಮರಡಿ ಮತಕ್ಷೇತ್ರದ ಮನೆಮಗನಾಗಿ ಜನರ ಸೇವೆ ಮಾಡಿದ್ದೇನೆ. ನಿರಂತರ ಜನ ಸಂಪರ್ಕದಲ್ಲಿದ್ದೇನೆ.

2008ಕ್ಕೂ ಹಿಂದೆ ಅಭಿವೃದ್ಧಿಯಲ್ಲಿ ಅತಿ ಹಿಂದುಳಿದ ಕ್ಷೇತ್ರವಾಗಿದ್ದ ಯಮಕನಮರಡಿ ಇಂದು ರಾಜ್ಯದ ಟಾಪ್ ಐದು ಕ್ಷೇತ್ರಗಳ ಪೈಕಿ ಒಂದಾಗಿದೆ. ಇದನ್ನು ಮನಗಂಡ ಜನರು ಅಭೂತಪೂರ್ವ ಬೆಂಬಲ ನೀಡುತ್ತಿರುವುದು ಸಂತಸ ತಂದಿದೆ ಎಂದರು.

ಇದೇ ವೇಳೆ ಕಾಂಗ್ರೆಸ್ ಸೇರ್ಪಡೆಯಾದ ಪಣಗುತ್ತಿ, ಪಾಶ್ಚಾಪೂರ, ಪರಕನಹಟ್ಟಿ, ರಾಜಕಟ್ಟಿ ಗ್ರಾಮದ ಮುಖಂಡರು, ಕಾರ್ಯಕರ್ತರು, ಮಹಿಳೆಯರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಯಮಕನಮರಡಿ ಮತಕ್ಷೇತ್ರದ ಪಣಗುತ್ತಿ, ಪಾಶ್ಚಾಪೂರ, ಪರಕನಹಟ್ಟಿ, ರಾಜಕಟ್ಟಿ ಗ್ರಾಮದ ನೂರಾರು ಮುಖಂಡರು, ಕಾರ್ಯಕರ್ತರು ಇದ್ದರು.

# ಖಾನಾಪುರ ಜೆಡಿಎಸ್ ಅಭ್ಯರ್ಥಿ ನಾಸಿರ ಬಾಗವಾನ ನಾಮಪತ್ರ ಸಲ್ಲಿಕೆ

ಖಾನಾಪುರ(ಗ್ರಾ): ಕಳೆದ ಎರಡು ಅವಧಿಯ ಸಂದರ್ಭದಲ್ಲಿ ಕರ್ನಾಟಕ ರಾಜ್ಯದ ಮುಖ್ಯಮಂತ್ರಿಯಾಗಿ ರೈತಪರ ಹಾಗೂ ಬಡವರ ಪರ ಕಾರ್ಯನಿರ್ವಹಿಸಿದ ಈ ಮುಖ್ಯಮಂತ್ರಿಗಳಾದ ಕುಮಾರಸ್ವಾಮಿಯ ವರ ಕಾರ್ಯವೈಕರಿಗೆ ಮತದಾರರು ಇದಾಗಿದ್ದಾರೆ. ಹೀಗಾಗಿ ಈ ಬಾರಿಯ ಚುನಾವಣೆಯಲ್ಲಿ ಪಕ್ಷದ ಬಹುಮುಖ್ಯ ಪ್ರಣಾಳಿಕೆ ಹಾಗೂ ನಾನು ವೈಯಕ್ತಿಕವಾಗಿ ಕಳೆದ 15 ವರ್ಷದಿಂದ ಮಾಡಿರುವ ಜನ ಸೇವೆಯನ್ನು ಪರಿಗಣಿಸಿ ಖಾನಾಪುರದ ಮತದಾರರು ಈ ಬಾರಿ ಖಂಡಿತ ಬದಲಾವಣೆ ಬಯಸಿ ನನಗೆ ಆಶೀರ್ವದಿಸುತ್ತಾರೆ. ಎಂಬ ಬಲವಾದ ನಂಬಿಕೆ ಇದೆ ಎಂದು ಜೆಡಿಎಸ್ ಅಭ್ಯರ್ಥಿ ನಾಸಿರ ಬಾಗವಾನ ಹೇಳಿದರು.




ಪಟ್ಟಣದ ತಹಸೀಲ್ದಾರ ಕಾರ್ಯಾಲಯದಲ್ಲಿ ಚುನಾವಣಾ ಅಧಿಕಾರಿಯಾದ ಅನುರಾಧ ವಸ್ತ್ರದ್ ಅವ–ರಿಗೆ ಜೆಡಿಎಸ್ ಪಕ್ಷದ ಅಧಿಕೃತ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿ ಮಾತನಾಡಿದರು.

ಕಳೆದ 15 ವರ್ಷಗಳಿಂದ ಸತತವಾಗಿ ಖಾನಾಪುರ ತಾಲೂಕಿನ ಅತ್ಯಂತ ಪ್ರತಿ ಹಳ್ಳಿ ಹಳ್ಳಿಗೆ ಸಂಚರಿಸಿ ಪ್ರತಿ ಹಳ್ಳಿಯಲ್ಲಿ ನನ್ನದೇ ಆದಂತಹ ಸಮಾಜಮುಖಿ ಕೆಲಸಗಳನ್ನು ಮಾಡುತ್ತಾ ಮತದಾರರ ಮನಸಲ್ಲಿ ಅಚ್ಚಳಿಯಾಗಿ ಉಳಿದಿದ್ದೇನೆ.

ಹೀಗಾಗಿ ಕಳೆದೆರಡು ವಿಧಾನ ಸಭೆಯ ಚುನಾವಣೆಗಳನ್ನು ಗಮನಿಸಿದರೆ ತಮಗೆಲ್ಲರಿಗೂ ತಿಳಿಯುತ್ತೆ ನಾನು ಮತದಾನ ಗಳಿಸಿದ ಪ್ರಮಾಣ ಏರಿಕೆಯಾಗಿದೆ. ಹೀಗಾಗಿ ನಾನು ತಾಲೂಕಿನಲ್ಲಿ ದೇವಸ್ಥಾನಗಳ ಜೀರ್ಣೋದ್ಧಾರ, ಮಸೀದಿ ಹಾಗೂ ಚರ್ಚ್ ಗಳ ಜೀರ್ಣೋದ್ಧಾರ, ಯುವಕರ ಕ್ರೀಡೆಗಳಿಗೆ ಪ್ರೋತ್ಸಾಹ, ಕನ್ನಡ ಮತ್ತು ಮರಾಠಿ ಸಾಹಿತ್ಯ ಸಮ್ಮೇಳನಕ್ಕೆ ಪ್ರೋತ್ಸಾಹ ಹೀಗೆ ಹತ್ತಾರು ಕಾರ್ಯಕ್ರಮಗಳನ್ನು ಮಾಡಿ ನನ್ನದೇ ಆದಂತ ಅಭಿಮಾನಿ ಬಳಗವನ್ನು ಹಾಗೂ ಜೆಡಿಎಸ್ ಪಕ್ಷದ ಕಾರ್ಯಕರ್ತನು ಈ ತಾಲೂಕಿನಲ್ಲಿ ಹೊಂದಿದ್ದೇನೆ. ಹೀಗಾಗಿ ಈ ಬಾರಿ ಮತದಾರರು ಯಾವುದೇ ಪರಿಸ್ಥಿತಿಯಲ್ಲಿ ನನಗೆ ಆಶೀರ್ವದಿಸಿ ಶಾಸಕರನ್ನಾಗಿ ಆಯ್ಕೆ ಮಾಡುತ್ತಾರೆ. ಎಂಬ ದೃಢ ನಂಬಿಕೆ ನನಗೆ ತಾಲೂಕಿನ ಮತದಾರರ ಮೇಲೆ ಇದೆ ಎಂದರು.

ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ ಜೆಡಿಎಸ್ ಬ್ಲಾಕ್ ಅಧ್ಯಕ್ಷರಾದ ವಿಶಾಲ ಪಾಟಿಲ, ಜೆಡಿಎಸ್ ಮುಖಂಡರಾದ ಲಿಯಾಕತ್ ಬಿಚ್ಚುಣ್ಣವರ್, ಮೇಘಾ ಕುಂದರಗಿ, ಅಲಿಂ ಆಕ್ತರ್ ನಾಯಕ, ಪ್ರಭು ಹಿರೇಮಠ, ಮಕ್ತುಮಹುಸೇನ್ ಸಾಹುಕಾರ, ರೇವಣಸಿದ್ದಯ್ಯ ಹಿರೇಮಠ ಹಾಗೂ ನೂರಾರು ಸಂಖ್ಯೆಯ ಜೆಡಿಎಸ್ ಪಕ್ಷದ ಕಾರ್ಯಕರ್ತರು ಹಾಜರಿದ್ದರು.

# ಅಪಘಾತ: 3 ಜನ ಸಾವು




ಬಾಗಲಕೋಟೆ: ಬೊಲೆರೊ ವಾಹನವೊಂದು ಸೇತುವೆಗೆ ಡಿಕ್ಕಿ ಹೊಡೆದ ಪರಿಣಾಮ ಒಂದೇ ಕುಟುಂಬದ ಮೂವರು ಸಾವನ್ನಪ್ಪಿದ ಘಟನೆಇಳಕಲ್ ಸಮೀಪ ಎಂ.ಕೆ. ಡಾಬಾ ಹತ್ತಿರ ನಿನ್ನೆ ರಾತ್ರಿ ನಡೆದಿದೆ.

ಬೊಲೆರೊ ವಾಹನವು ವಿಜಯಪುರದಿಂದ ತಾವರಗೇ–ರಿಗೆ ಹೊರಟಿತ್ತು. ಅಲ್ಲಿನ ಪ್ರಾರ್ಥನಾ ಮಂದಿರಕ್ಕೆ ಹೋಗಿ ವಾಪಸ್ಸು ಆಗುತ್ತಿದ್ದ ಸಂದರ್ಭದಲ್ಲಿ ಸೇತುವೆಗೆ ಬೊಲೆರೊ ವಾಹನ ಡಿಕ್ಕಿ ಹೊಡೆದಿದೆ. ಅಪಘಾತದಿಂದಾಗಿ ಮೂವರು ಸಾವನ್ನಪ್ಪಿದರೆ, ನಾಲ್ವ–ರಿಗೆ ಗಂಭೀರ ಗಾಯವಾಗಿದೆ.

ತಾವರಗೇರಿಯ ಶಾಮಿದಸಾಬ್ ಕಿಡ್ದೂರ ನಾಯಕ್, ಮೌಲಾಸಾಬ್ ಕಿಡ್ದೂರ್ ನಾಯಕ್ ಹಾಗೂ ಹಿಮಾಂಬಿ ಮೌಲಾಸಾಬ್ ಕಿಡ್ದೂರ್ ನಾಯಕ್ ಸಾವನ್ನಪ್ಪಿದ್ದಾರೆ. ಅಪಘಾತದ ಸಂದರ್ಭದಲ್ಲಿ ಓರ್ವ ಸ್ಥಳದಲ್ಲಿ ಉಸಿರು ನಿಲ್ಲಿಸಿದರೆ, ಚಿಕಿತ್ಸೆಗೆ ಆಸ್ಪತ್ರೆಗೆ ಕರೆದೊಯ್ಯುವ ವೇಳೆ ಮತ್ತಿಬ್ಬರು ಸಾವನ್ನಪ್ಪಿದ್ದಾರೆ. ಇಳಕಲ್ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ವಿಶ್ವ ಕಲೆ ದಿನಾಚರಣೆ ಪ್ರಯುಕ್ತ ಒಂದು ದಿನದ ಚಿತ್ರಕಲಾ ಪ್ರದರ್ಶನ



ಬೆಳಗಾವಿ: ಬೆನನ್ ಸ್ಮಿತ ಕಾಲೇಜ್ ಆಫ್ ಫೈನ್ ಆರ್ಟ್ಸ್ ಬೆಳಗಾವಿಯಲ್ಲಿ ಚಿತ್ರಕಾರರಾದ ಲಿಯೋನಾರ್ಡೋ ಡಾ ವಿಂಚಿ ಅವರ ಜನ್ಮ ದಿನದ ಅಂಗವಾಗಿ ವಿಶ್ವ ಕಲೆ ದಿನಾಚರಣೆ ಆಚ–ರಿಸಲಾಯಿತು. ಆ ಪ್ರಯುಕ್ತ ಒಂದು ದಿನದ ಚಿತ್ರಕಲಾ ಪ್ರದರ್ಶನ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದ ಮುಖ್ಯ ಅಥಿತಿಗಳಾದ ಶ್ರೀ. ವಿ. ಬಿ. ಗುಗ್ಗರಿ ಅವರು ಚಿತ್ರಕಲಾ ಪ್ರದರ್ಶನವನ್ನು ಉದ್ಘಾಟಿಸಿ, ಏಪ್ರಿಲ್ 15, 2012 ರಿಂದ ಲಿಯೋನಾರ್ಡೋ ಡಾ ವಿಂಚಿ ಅವರ ಜನ್ಮದಿನದ ಪ್ರಯುಕ್ತ ಪ್ರತಿ ವರ್ಷ ವಿಶ್ವ ಕಲೆ ದಿನಾಚರಣೆಯನ್ನು ಆಚರಿಸಲಾಗುತ್ತಿದೆ.

ಮಾನವೀಯ ಹಾಗೂ ಜಾತ್ಯಾತೀತ ದೃಷ್ಟಿಕೋನ ಹೊಂದಿದ್ದ ಇವರು ಹೆಚ್ಚು ಕಲಾತ್ಮಕ ಹಾಗೂ ಜೀವಂತ ಚಿತ್ರಗಳನ್ನು ರಚಿಸಿದ್ದಾರೆ.

ಚಿತ್ರಕಲೆಗೆ ಇವರು ನೀಡಿದ ಕೊಡುಗೆ ಅನನ್ಯವಾಗಿದೆ. ಎಂದು ಉದ್ದೇಶಿ ಮಾತನಾಡಿದರು.

ಮಹಾ ವಿದ್ಯಾಲಯದ ಪ್ರಾಚಾರ್ಯರಾದ ಶ್ರೀಮತಿ ವೃಂದಾ ರುಕಡಿಕರವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಪ್ರೊ. ರೀಟಾ ಬಣಗಾರವರು ಕಾರ್ಯಕ್ರಮವನ್ನು ನಿರೂಪಿಸಿದರು. ಪ್ರೊ. ದೇವರಾಜ ಪೂಜಾರಿ, ಪ್ರೊ. ಅಡಿವೆಪ್ಪಾ ಮುಸರಿ, ಪ್ರೊ. ಅಭಿಜೀತ ದೇವ, ಶ್ರೀ ದೇವದತ್ತ ರುಕಡಿಕರ, ಶ್ರೀ ವಿಲ್ಫೋರ್ಡ್ ಚೆನ್. ಹಾಗೂ ಪಾಲಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮತದಾನ ಜಾಗೃತಿ ಅಭಿಯಾನ



ಬೆಳಗಾವಿ: ದುಡಿಯಲು ಬೇರೆ ಊರುಗಳಿಗೆ ಗುಳೆ ಹೋಗುವುದನ್ನು ತಪ್ಪಿಸಲು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಸ್ವ ಗ್ರಾಮದಲ್ಲಿಯೆ ದುಡಿಯುವ ಕೈಗಳಿಗೆ ಕೆಲಸ ನೀಡಲಾಗುತ್ತಿದೆ ಎಂದು ತಾಪಂ ಸಹಾಯಕ ನಿರ್ದೇಶಕ (ಗ್ರಾಉ) ರಾಮಪ್ಪ ರಕ್ಕಸಗಿ ತಿಳಿಸಿದರು.

ಸವದತ್ತಿ ತಾಲೂಕಿನ ಅರ್ಟಗಲ್ ಮತ್ತು ತೆಗ್ಗಿಹಾಳ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಮನರೇಗಾ ಯೋಜನೆಯಡಿ ಕಿರುಗಾಲುವೆ ನಿರ್ಮಾಣ ಹಾಗೂ ಹಳ್ಳ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ರೋಜಗಾರ ದಿವಸ ಹಾಗೂ ಮತದಾನ ಜಾಗೃತಿ ಅಭಿಯಾನ ಕಾರ್ಯಕ್ರಮವನ್ನು ಸೋಮವಾರ ಆಯೋಜಿಸಲಾಗಿ–ತ್ತು.

2023 ಏಪ್ರೀಲ್ 1 ರಿಂದ 309 ರೂ ನಿಂದ 316 ರೂ. ಗಳಿಗೆ ಕೂಲಿ ದರವನ್ನು ಹೆಚ್ಚಿಸಲಾಗಿದೆ. ಆದುದರಿಂದ ಪ್ರತಿಯೊಂದು ಕುಟುಂಬಕ್ಕೆ ಒಂದು ಆರ್ಥಿಕ ವರ್ಷಕ್ಕೆ 100 ದಿನಗಳ ಕೆಲಸವನ್ನು ನೀಡಲಾಗುತ್ತಿದೆ ಆದ್ದರಿಂದ ಪ್ರತಿಯೊಂದು ಕುಟುಂಬವು ಕೂಡಾ 100 ದಿನಗಳ ಕೆಲಸವನ್ನು ಪೂರೈಸಿ ತಮ್ಮ ಆರ್ಥಿಕ ಮಟ್ಟವನ್ನು ಹೆಚ್ಚಿಸಿಕೊಳ್ಳಿ ಎಂದು ತಿಳಿಸಿದರು.

ಕೂಲಿ ಕೆಲಸದ ಜೊತೆಗೆ ಕೃಷಿಹೊಂಡ, ದನದ ಶೆಡ್, ಕುರಿ. ಮೆಕ್ಕೆ ಸಾಕಾಣಿಕೆಗಾಗಿ ಶೆಡ್ ಗಳ ನಿರ್ಮಾಣ ಸೇರಿದಂತೆ ಹಲವು ವೈಯಕ್ತಿಕ ಕಾಮಗಾರಿಗಳನ್ನು ನರೇಗಾ ಯೋಜನೆಯಡಿ ಕೈಗೊಳ್ಳಲು ಅವಕಾಶವಿದೆ. ಹಾಗಾಗಿ ಎಲ್ಲ ಕೂಲಿಕಾರರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಿ ಎಂದು ಮನರೇಗಾ ಕೂಲಿಕಾರರಿಗೆ ಮಾಹಿತಿಯನ್ನು ನೀಡಿದರು. ಮತ್ತು **NMMS** ನಲ್ಲಿ ಕಡ್ಡಾಯವಾಗಿ ಹಾಜರಾತಿಯ ಕುರಿತು ಸೂಚನೆಯನ್ನು ನೀಡಿದರು.

ಕರ್ನಾಟಕ ವಿಧಾನ ಸಭಾ ಸಾರ್ವತ್ರಿಕ ಚುನಾವಣೆ–2023ರ ಅಂಗವಾಗಿ ಮತದಾರರಿಗೆ ಮತದಾನದ ಮಹತ್ವದ ಕುರಿತು ಮಾಹಿತಿಯನ್ನು ನೀಡಿದರು. ತಾಪಂ ಐಇಸಿ ಸಂಯೋಜ–ಕ ಮಲೀಕಜಾನ ಮೋಮಿನ ಮತದಾರರ ಪ್ರತಿಜ್ಞಾ ವಿಧಿಯನ್ನು ಭೋದಿಸಿದರು.

ಅಭಿವೃದ್ಧಿ ಅಧಿಕಾರಿ ಸುಧೀರ ಪತ್ತಾರ, ತಾಪಂ ತಾಂತ್ರಿಕ ಸಂಯೋಜಕ ಮಹಾದೇವ ಕಾಮನ್ನವರ, ತಾಪಂ ಐಇಸಿ ಸಂಯೋಜಕ ಮಲೀಕಜಾನ ಮೋಮಿನ, ತಾಂತ್ರಿಕ ಸಹಾಯಕ ಆನಂದ ನರಗುಂದ, ಬಿಎಫ್ ಟಿ ಸಿದ್ದಪ್ಪ ಪತ್ರಾವಳಿ ಗ್ರಾಪಂ ಸಿಬ್ಬಂದಿಗಳು ಮತ್ತಿತರರು ಉಪಸ್ಥಿತರಿದ್ದರು.

# ಹುಕ್ಕೇರಿಯಲ್ಲಿ ಏ.19 ರಿಂದ 23 ರವರೆಗೆ ಬಸವದರ್ಶನ ಪ್ರವಚನ: ಶಿವಬಸವ ಶ್ರೀ

ಹುಕ್ಕೇರಿ: ಬಸವ ಜಯಂತಿ ಉತ್ಸವ ನಿಮಿತ್ತ ಹುಕ್ಕೇರಿಯಲ್ಲಿ ಬಸವದರ್ಶನ ಪ್ರವಚನವನ್ನು ಇದೇ ತಿಂಗಳು ಏ.19 ರಿಂದ 23ರವರೆಗೆ ಏರ್ಪಡಿಸಲಾಗಿದೆ ಎಂದು ವಿರಕ್ತಮಠದ ಶಿವಬಸವ ಸ್ವಾಮೀಜಿ ಹೇಳಿದರು.



ಪಟ್ಟಣದಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರವಚನ ನಡೆಸಲು ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಸಹಸ್ರಾರು ಸದ್ಭಕ್ತರು ಪ್ರವಚನ ಆಲಿಸಲು ಆಗಮಿಸುವರು ಎಂದರು.

ಹುಕ್ಕೇರಿ ಪಟ್ಟಣದ ಶಿವಲಿಂಗೇಶ್ವರ ಪ್ರಾಥ–ಮಿಕ ಶಾಲೆ ಮೈದಾನದಲ್ಲಿ ಪ್ರತಿನಿತ್ಯ ಸಂಜೆ 6 ರಿಂದ ಪ್ರವಚನ ಆರಂಭವಾಗಲಿದ್ದು ತೇರದಾಳ ವಿರಕ್ತಮಠ ಶಿವಕುಮಾರ ಸ್ವಾಮೀಜಿ ಪ್ರವಚನ ನಡೆಸಿಕೊಡುವರು. ಏ.19 ರಂದು ಉದ್ಘಾಟನೆ ನಡೆಯಲಿದ್ದು ಹಿರೇಮಠ ಚಂದ್ರಶೇಖ ಶಿವಾಚಾರ್ಯ ಸ್ವಾಮೀಜಿ ಸಾನಿಧ್ಯ ವಹಿಸುವರು ಎಂದು ಅವರು ಹೇಳಿದರು.

ಏ.23 ರಂದು ಸಂಜೆ 6 ಕ್ಕೆ ಪ್ರವಚನದ ಸಮಾರೋಪ ಸಮಾರಂಭ ನಡೆಯಲಿದ್ದು ನಿಡಸೋಸಿ ಸಿದ್ಧಸಂಸ್ಥಾನ ಮಠದ ಪಂಚಮ ಶಿವಲಿಂಗೇಶ್ವರ ಸ್ವಾಮೀಜಿ ಸಾನಿಧ್ಯ ವಹಿಸುವರು. ಘಟಪ್ರಭಾ ಮಲ್ಲಿಕಾರ್ಜುನ ಸ್ವಾಮೀಜಿ ಅಧ್ಯಕ್ಷತೆ ವಹಿಸುವರು. ನಿಡಸೋಸಿ ನಿಜಲಿಂಗೇಶ್ವರ ಸ್ವಾಮೀಜಿ, ಯರನಾಳ ಬ್ರಹ್ಮಾನಂದ ಸ್ವಾಮೀಜಿ, ಘೋಡಗೇರಿ ಪ್ರಭುಲಿಂಗ ಸ್ವಾಮೀಜಿ, ಘಟಪ್ರಭಾ ವಿರುಪಾಕ್ಷ ಸ್ವಾಮೀಜಿ ಉಪಸ್ಥಿತರಿರುವರು ಎಂದು ಅವರು ತಿಳಿಸಿದರು.

ಹುಕ್ಕೇರಿ ವಿರಕ್ತಮಠಕ್ಕೆ ಭೂ ದಾನ ಮಾಡಿದ ಶಿರಹಟ್ಟಿ ಬಿ.ಕೆ. ಗ್ರಾಮದ ರತ್ನಾಬಾಯಿ ಷಣ್ಮುಖಪ್ಪ ಹುಂಬರವಾಡಿ, ಶ್ರೀಮಠದ ಭಕ್ತರಾದ ಬೆಂಗಳೂರಿನ ಮಹೇಶ ಬೆಲ್ಲದ, ಹಂಜಾನಟ್ಟಿಯ ಕೆಂಪಣ್ಣಾ ದೇಸಾಯಿ ಅವರನ್ನು ಇದೇ ವೇಳೆ ಸನ್ಮಾನಿಸಲಾಗುವುದು ಎಂದು ಅವರು ಹೇಳಿದರು.

ಪ್ರವಚನದಲ್ಲಿ ಬಸವತತ್ವ, ಪರಂಪರೆ, ಇತಿಹಾಸ, ಸ್ತ್ರೀಕುಲದ ರಕ್ಷಣೆ, ಶಿವಶರಣ–ರ ಜೀವನ ಚರಿತ್ರೆ, ನೆಮ್ಮದಿ ಬದುಕಿಗೆ ಬೇಕಾದ ಆಧ್ಯಾತ್ಮ ಕು–ರಿತಾದ ಚಿಂತನೆಗಳು ಸೇರಿದಂತೆ ನಿಜ ಜೀವನದ ಸಂಗತಿಗಳ ಬಗ್ಗೆ ವಿವರಿಸಲಾಗುವುದು. ಪ್ರವಚನಕ್ಕೆ ಆಗಮಿಸುವವರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು. ಮಠದ ಭಕ್ತರಾದ ಪ್ರೊ.ಸಿ.ಜಿ.ಪಾಟೀಲ, ರಮೇಶ ಹುಂಜಿ ಉಪಸ್ಥಿತರಿದ್ದರು.

# ಬೈಲಹೊಂಗಲದಲ್ಲಿ ಇಬ್ಬರ ನಾಮಪತ್ರ ಸಲ್ಲಿಕೆ

ಬೈಲಹೊಂಗಲ: ಬೈಲಹೊಂಗಲ ವಿಧಾನಸಭಾ ಮತಕ್ಷೇತ್ರಕ್ಕೆ ಆಮ್ ಆದ್ಮಿ ಪಕ್ಷದ ಅಭ್ಯರ್ಥಿಯಾಗಿ ಮತಕ್ಷೇತ್ರದ ಉಡಕೇರಿ ಗ್ರಾಮದ ಜಿಪಂ ಮಾಜಿ ಸದಸ್ಯ ಬಿ.ಎಂ. ಚಿಕ್ಕನಗೌಡರ (ದ್ವಿಪ್ರತಿ), ಕರ್ನಾಟಕ ರಾಜ್ಯ ಸಮಿತಿ (ಕೆಆರ್–ಎಸ್) ಪಕ್ಷದಿಂದ ಮತಕ್ಷೇತ್ರದ



ಮುರಗೋಡ ಗ್ರಾಮದ ಇರಪಾನ ಜೈಲಾನಿ ಬಾಗೇವಾಡಿ ನಾಮಪತ್ರ ಸಲ್ಲಿಸಿದ್ದು, ಏ.17 ರಂದು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಮಹಾಂತೇಶ ಕೌಜಲಗಿ ನಾಮ ಪತ್ರ ಸಲ್ಲಿಸಿ, ನಂತರ ದಿನಗಳಲ್ಲಿ ಅಪಾರ ಬೆಂಬಲಿಗರೊಂದಿಗೆ ಮತ್ತೊಮ್ಮೆ ನಾಮಪತ್ರ ಸಲ್ಲಿಸಲಿದ್ದಾರೆ.

ಬಿಜೆಪಿ ಪಕ್ಷದ ಅಭ್ಯರ್ಥಿ ಜಗದೀಶ ಮೆಟಗುಡ್ಡ ಅವರು ಅಪಾರ ಬೆಂಬಲಿಗರೊಂದಿಗೆ ಏ.18 ರಂದು ನಾಮಪತ್ರ ಸಲ್ಲಿಸಲಿದ್ದಾರೆ.

ಜೆಡಿಎಸ್ ಪಕ್ಷದ ಅಭ್ಯರ್ಥಿ ಶಂಕರ ಮಾಡಲಗಿ ಏ.19 ರಂದು ಅಪಾರ ಬೆಂಬಲಿಗರೊಂದಿಗೆ ನಾಮಪತ್ರ ಸಲ್ಲಿಸಲಿದ್ದಾರೆ.

# 18ರಂದು ನಿಖಿಲ್ ಕತ್ತಿ ನಾಮಪತ್ರ ಸಲ್ಲಿಕೆ

ಹುಕ್ಕೇರಿ: ಹುಕ್ಕೇರಿ ವಿಧಾನಸಭೆ ಕ್ಷೇತ್ರದಿಂದ ಆಯ್ಕೆ ಬಯಸಿ ಭಾರತೀಯ ಜನತಾ ಪಾರ್ಟಿ(ಬಿಜೆಪಿ)ಯ ಅಭ್ಯರ್ಥಿ ನಿಖಿಲ್ ಉಮೇಶ ಕತ್ತಿ ಅವರು ಏ.18 ರಂದು ನಾಮಪತ್ರ ಸಲ್ಲಿಸಲಿದ್ದಾರೆ. ಅಂದು ಬೆಳಗ್ಗೆ ವಿವಿಧ ದೇವಸ್ಥಾನಗಳಲ್ಲಿ ಪೂಜೆ ಸಲ್ಲಿಸುವ ನಿಖಿಲ್ ಕತ್ತಿ ಅವರು ಬೆಂಬಲಿಗರೊಂದಿಗೆ ಇಲ್ಲಿನ ಮಿನಿವಿಧಾನ ಸೌಧಕ್ಕೆ ತೆರಳಿ ಉಮೇದುವಾರಿಕೆ ಸಲ್ಲಿಸುವರು.

ನಾಮಪತ್ರ ಸಲ್ಲಿಕೆ ಮುನ್ನ ಸಹಸ್ರಾರು ಕಾರ್ಯಕರ್ತರು, ಬೆಂಬಲಿಗರು, ಅಭಿಮಾನಿಗಳು, ಪಕ್ಷದ ಹಿರಿಯರು ಮತ್ತು ಪದಾಧಿಕಾ–ರಿಗಳೊಂದಿಗೆ ಪಾದಯಾತ್ರೆ ಮೂಲಕ ತೆರಳಿ ನಾಮಪತ್ರ ಸಲ್ಲಿಸುವುದರೊಂದಿಗೆ ಶಕ್ತಿ ಪ್ರದರ್ಶನ ಮಾಡಲಿದ್ದಾರೆ.

ಹುಕ್ಕೇರಿ ಕ್ಷೇತ್ರದಲ್ಲಿ ಈಗಾಗಲೇ ನಿರಂತರ ಪ್ರಚಾರದಲ್ಲಿ ತೊಡಗಿಕೊಂಡಿರುವ ನಿಖಿಲ್ ಕತ್ತಿ, ತಮ್ಮ ತಂದೆ ದಿ.ಉಮೇಶ ಕತ್ತಿ ಮಾಡಿರುವ ಅಭಿವೃದ್ಧಿ ಕೆಲಸಗಳು, ಕೇಂದ್ರ ಮತ್ತು ರಾಜ್ಯ



ಬಿಜೆಪಿ ಸರ್ಕಾರದ ಸಾಧನೆಗಳಿಂದ ತಮ್ಮ ಗೆಲುವು ನಿಶ್ಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.



# ಶೆಟ್ಟರ್ ಬಿಜೆಪಿ ಬಿಟ್ಟಿದ್ದು ಯಾರಿಂದ? ಏತಕ್ಕಾಗಿ?

ಬೆಂಗಳೂರು: ಮಾಜಿ ಮುಖ್ಯಮಂತ್ರಿ, ಹಿರಿಯ ಬಿಜೆಪಿ ಮುಖಂಡ ಜಗದೀಶ್ ಶೆಟ್ಟರ್ ಇಂತಹುದೊಂದು ನಿರ್ಧಾರ ಕೈಗೊಳ್ಳುತ್ತಾರೆ ಎಂದು ಯಾರೂ ನಿರೀಕ್ಷೆ ಮಾಡಿರಲಿಲ್ಲ. ಅಷ್ಟೇ ಏಕೆ? ಸ್ವತಃ ಶೆಟ್ಟರ್ ಅವರೂ ಸಹ ಇಂತಹ ಸಂದರ್ಭ ಬರುತ್ತದೆ ಎಂದು ಕನಸಿನಲ್ಲಿಯೂ ಊಹಿಸಿರಲಿಕ್ಕಿಲ್ಲ.

ರಾಜಕೀಯವೇ ಹಾಗೆ? ಸಂದರ್ಭಗಳು ಅಂತಹ ಸನ್ನಿವೇಶವನ್ನು ಸೃಷ್ಟಿಸಿ ಬಿಡುತ್ತವೆ.

ರಾಜಕೀಯ ಜೀವನದುದ್ದಕ್ಕೂ ಬಿಜೆಪಿಯನ್ನೇ ಉಸಿರಾಡಿದ ಜಗದೀಶ್ ಶಿವಪ್ಪ ಶೆಟ್ಟರ್ ಅವರು ಬಿಜೆಪಿ ಜತೆಗಿನ ನಾಲ್ಕು ದಶಕಗಳ ಒಡನಾಟ ವನ್ನು ಅಂತ್ಯಗೊಳಿಸಿ ಕಾಂಗ್ರೆಸ್ ಕೈಹಿಡಿದಿದ್ದಾರೆ. ಇದು ಕೇವಲ ಶೆಟ್ಟರ್ ಒಬ್ಬರ ರಾಜಕೀಯ ಮಾತ್ರವಲ್ಲ, ರಾಜ್ಯ ರಾಜ–ಕಾರಣದ ದಿಕ್ಕನ್ನೇ ಬದಲಾಯಿಸುವ ಬೆಳವಣಿಗೆ ಎಂದರೆ ಅತಿಶಯೋಕ್ತಿ ಯಾಗಲಾರದು.

ಕಟ್ಟಾ ಬಿಜೆಪಿ ನಾಯಕರಾಗಿದ್ದ ಶೆಟ್ಟರ್ ಆರು ಬಾರಿ ಬಿಜೆಪಿಯಿಂದಲೇ ಶಾಸಕರಾಗಿದ್ದಾರೆ. ವಿಪಕ್ಷ ನಾಯಕ, ಸಚಿವ ಸ್ಥಾನ ಮತ್ತು ಮುಖ್ಯಮಂತ್ರಿ ಹುದ್ದೆಯನ್ನೂ ಅಲಂಕರಿಸಿದ್ದಾರೆ. ಇದೀಗ ಏಳನೇ ಬಾರಿಗೆ ಸ್ಪರ್ಧೆಗೆ ಅವಕಾಶ ಸಿಗದೆ ಕಾಂಗ್ರೆಸ್ ಕೈ ಹಿಡಿದಿದ್ದಾರೆ. ಇದು ಕೇವಲ ಒಂದು ಟಿಕೆಟ್ ವಿಷಯ ಮಾತ್ರ ಅಲ್ಲ, ಇನ್ನೂ ಏನೋ ಇದೆ ಎನ್ನುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ. ಒಳ ರಾಜಕೀಯದ ಮರ್ಮ ಅಷ್ಟು ಬೇಗ ಹೊರ ಬರುವುದಿಲ್ಲ.

ಇವರ ಮನೆಯವರೊಬ್ಬರಿಗೆ ಟಿಕೆಟ್ ಕೊಡುತ್ತೇವೆ ಎಂದರೂ ಒಪ್ಪಿಲ್ಲ. ತಮಗೆ ಬೇಕು ಎಂದು ಹಠ ಹಿಡಿದಿರಲು ಕಾರಣಗಳು ಇಲ್ಲದಿಲ್ಲ. ಅದೂ ಬಲವಾದ ಕಾರಣಗಳೇ ಇರುತ್ತವೆ. ಬಿಜೆಪಿಯಲ್ಲಿ ಬಹುತೇಕ ಹಳೆಯ ಮುಖಗಳು ನೇಪಥ್ಯಕ್ಕೆ ಸರಿಯುತ್ತಿವೆ. ಪಕ್ಷವನ್ನು ಕಟ್ಟಿ ಬೆಳೆಸಿದ ಹಿರಿಯ ಮುಖಂಡರನ್ನು ತೆರೆಮರೆಗೆ ಸರಿಸಲಾಗುತ್ತಿದೆ.

ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ ಆಟಕ್ಕುಂಟು ಲೆಕ್ಕಕ್ಕಿಲ್ಲ ಎನ್ನುವಂತಿದೆ ಅವರ ಸ್ಥಿತಿ. ತಮ್ಮ ಪುತ್ರನೇ ತಮ್ಮ ಉತ್ತರಾಧಿಕಾರಿ ಎಂದು ಘೋಷಿಸುವಷ್ಟು ಸ್ವಾತಂತ್ರ್ಯವೂ ಇಲ್ಲದಂತಹ ಸ್ಥಿತಿಗೆ ಅವರನ್ನು ದೂಡಲಾಗಿದೆ.

ಕೆ ಎಸ್ ಈಶ್ವರಪ್ಪ ಅವರು ಎಟುಕದ ದ್ರಾಕ್ಷಿ ಹುಳಿ ಎಂದು ರಂಪಾಟವೆ ಬೇಡವೆಂದು ರಾಜಕೀಯ ನಿವೃತ್ತಿ ಘೋಷಿಸಿದ್ದಾರೆ. ಬಲವಂತವಾಗಿ ಹಾಗೆ ಮಾಡಲಾಗಿದೆ ಎಂದೂ ಅವರ ಆಪ್ತರು ಹೇಳುತ್ತಾರೆ. ತಮ್ಮ ಪುತ್ರ ಕಾಂತೇಶ್ ಗೆ ಟಿಕೆಟ್ ಕೊಡಿ ಎಂದು ದುಂಬಾಲು ಬಿದ್ದಿದ್ದಾರೆ. ಲಕ್ಷ್ಮಣ ಸವದಿ ಮತ್ತು ಅನೇಕ ಮುಖಂಡರು ಕಾಂಗ್ರೆಸ್ ಇಲ್ಲವೇ ಬಿಜೆಪಿ ಕೈ ಹಿಡಿದಿದ್ದಾರೆ.

ದೇಶದ ಉದ್ದಗಲಕ್ಕೂ ಬಿಜೆಪಿ ಹೈಕಮಾಂಡ್ ಅನ್ನು, ಅದರಲ್ಲೂ ಪ್ರಧಾನಿ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಜೋಡಿಯನ್ನು ಎದುರು ಹಾಕಿಕೊಳ್ಳುವ ಧೈರ್ಯ ಬಿಜೆಪಿಯೊಳಗೂ ಯಾರಿಗೂ ಇಲ್ಲ. ಇತರೆ ಪಕ್ಷಗಳಿಗೂ ಇಲ್ಲ. ಸಿಬಿಐ, ಐಟಿ, ಜಾರಿ ನಿರ್ದೇಶನಾಲಯ ಇವುಗಳ ವಕ್ರದೃಷ್ಟಿ ಬಿದ್ದೀತು ಎಂಬ ಭಯದಿಂದ ಮೌನವೇ ಆಭರಣ ಎಂದು ಸುಮ್ಮನಿದ್ದರು. ಈ ಜೋಡಿಗೆ ಸೆಡ್ಡು ಹೊಡೆದು ಶೆಟ್ಟರ್, ಸವದಿ ಮುಂತಾದವರು ಬಂಡೆದ್ದಿದ್ದಾರೆ.

ಮುಖ್ಯಮಂತ್ರಿ ಸ್ಥಾನದಿಂದ ಬಿ.ಎಸ್. ಯಡಿಯೂರಪ್ಪ ಅವರನ್ನು ಬಲವಂತವಾಗಿ ಕೆಳಗಿಳಿಸಿದ ದಿನದಿಂದಲೇ ಹಿರಿಯ ನಾಯಕರನ್ನು ತೆರೆಮರೆಗೆ ಸೇರಿಸುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿತ್ತು. ಈಗ ಮುಂದುವರಿದಿದೆ.

ಒಟ್ಟಾರೆ ಜೋಶಿಯವರ ಆಯ್ಕೆಗೆ ಯಾವುದೇ ಅಡೆತಡೆ ಗಳಿಲ್ಲದ ಹಾಗೆ ಹಾದಿಯನ್ನು ಸುಗಮಗೊಳಿಸಲು ಪ್ರಯತ್ನ ನಡೆದಿದೆ ಎಂದು ಪಕ್ಷದ ಭಿನ್ನಮತೀಯರ ಅಭಿಪ್ರಾಯವಾಗಿದೆ.

ಈ ಬಾರಿಯ ಬಿಜೆಪಿ ಪಟ್ಟಿಯಲ್ಲಿ ತಮ್ಮ ಬೆಂಬಲಿಗರೇ ಹೆಚ್ಚಿನ ಸಂಖ್ಯೆಯಲ್ಲಿರುವಂತೆ ಪ್ರಹ್ಲಾದ್ ಜೋಶಿ ನೋಡಿಕೊಂಡಿದ್ದಾರೆ.

ಯಡಿಯೂರಪ್ಪ ಮತ್ತು ಶೆಟ್ಟರ್ ಅವರ ಮಕ್ಕಳಿಗೆ ಕೊಟ್ಟರೆ ಪಕ್ಷ ಮತ್ತು ವಿಧಾನಸಭೆಯಲ್ಲಿ ಕೊನೆಯ ಸಾಲಿನಲ್ಲಿ ಕುಳಿತು ಕೊಳ್ಳುತ್ತಾರೆ. ಹೊಸಬರಿಗೆ ಧ್ವನಿ ಎತ್ತಲು ಅವಕಾಶವೇ ಇರುವುದಿಲ್ಲ.

ಇದು ಕೇವಲ ಬಿಜೆಪಿಗೆ ಮಾತ್ರ ಸೀಮಿತ ಅಲ್ಲ. ದೇಶದ ಎಲ್ಲ ಪಕ್ಷಗಳಲ್ಲೂ ಇಂತಹುದೇ ಸಂಚು ನಡೆಯುತ್ತಾ ಬಂದಿದೆ. ಆಗಮನ ನಿರ್ಗಮನಕ್ಕೆ ಎಲ್ಲ ಪಕ್ಷಗಳ ಬಾಗಿಲು ಸದಾ ತೆರೆದೇ ಇರುತ್ತದೆ.

ಮುಂದೊಂದು ದಿನ ಶೆಟ್ಟರ್ ತವರು ಮನೆಗೆ ಮರಳಿದರೂ ಅಚ್ಚರಿ ಪಡಬೇಕಿಲ್ಲ.

ಮತ್ತಿಬ್ಬರು ಹಿರಿತನವನ್ನು ಮುಂದೊಡ್ಡಿ ಯಾವುದೇ ಪಟ್ಟಕ್ಕೆ ಸವಾಲು ಹಾಕುವವರು ಸಚಿವರಾದ ಒಕ್ಕಲಿಗ ಸಮುದಾಯಕ್ಕೆ ಸೇರಿದ ಆರ್. ಅಶೋಕ್ ಮತ್ತು ವೀರಶೈವ ಸಮುದಾಯದ ಮುಖಂಡ ವಿ.ಸೋಮಣ್ಣ. ಡಿ.ಕೆ.ಶಿವಕುಮಾರ್ ಮತ್ತು ಸಿದ್ದರಾಮಯ್ಯನವರ ವಿರುದ್ಧ ಸ್ಪರ್ಧೆಗಿಳಿಸಿ ವ್ಯವಸ್ಥಿತವಾಗಿ ರಾಜಕೀಯವಾಗಿ ಮುಗಿಸುವ ಹುನ್ನಾರ ನಡೆಸಲಾಗಿದೆ ಎಂದು ಹೇಳಲಾಗುತ್ತಿದೆ. ಸಿದ್ದರಾಮಯ್ಯ ವಿರುದ್ಧ ಗೆದ್ದು ನಾನು ಲಿಂಗಾಯತ ಮುಖಂಡ ಎಂದೂ ಶಿವಕುಮಾರ್ ವಿರುದ್ಧ ಗೆದ್ದು ನಾನು ಒಕ್ಕಲಿಗರ ಅದ್ವಿತೀಯ ನಾಯಕ ಎಂದು ಸಾಬೀತು ಪಡಿಸಬೇಕಿದೆ. ಇದು ಎಷ್ಟರ ಮಟ್ಟಿಗೆ ಸಾಧ್ಯ ಎನ್ನುವುದನ್ನು ನೀವೇ ಊಹಿಸಿಕೊಳ್ಳಿ.

**ಶೆಟ್ಟರ್ ನಡೆ ಸರಿಯೇ**

ಶಾಲಾ ದಿನಗಳಲ್ಲಿ ಸಂಘ ಪರಿವಾರದ ನಂಟು. ಕಾಲೇಜು ಜೀವನದಲ್ಲಿ ಎಬಿವಿಪಿ, ನಂತರ ಬಿಜೆಪಿ ಮೂಲಕ ರಾಜಕೀಯ ಪ್ರವೇಶ. ಹೀಗೆ 40 ವರ್ಷಗಳ ಕಾಲ ಬಿಜೆಪಿ ಸಖ್ಯದಲ್ಲೇ ಇದ್ದವರು ಶೆಟ್ಟರ್. ಇವರ ಕುಟುಂಬವೇ ಸಂಘ ಪರಿವಾರಕ್ಕೆ ಸಮರ್ಪಣೆ ಮಾಡಿಕೊಂಡಿತ್ತು.

ಇದೀಗ ಪರಿಸ್ಥಿತಿ ಮುರುವಾಗಿದೆ. ಜೀವನದ ಸಂಧ್ಯಾಕಾಲದಲ್ಲಿ ಕಾಂಗ್ರೆಸ್ ಸೇರಿದ್ದಾರೆ. ಮುಖ್ಯಮಂತ್ರಿಯೇ ಆಗಿದ್ದ ಅವರಿಗೆ ಮತ್ತೆ ಅದೇ ಹುದ್ದೆ ಒಲಿಯುವ ಭಾಗ್ಯ ಕ್ಷೀಣ.

ಆದರೂ ಸೇರ್ಪಡೆಯಾಗಿದ್ದಾರೆ.

ಬಿಜೆಪಿಯ ತಾಲೂಕು ಘಟಕದ ಅಧ್ಯಕ್ಷನಿಂದ ಹಿಡಿದು ರಾಜ್ಯದ ಮುಖ್ಯಮಂತ್ರಿ ಹುದ್ದೆಯವರೆಗೆ ಬಿಜೆಪಿ ಎಲ್ಲವನ್ನೂ ಕೊಟ್ಟಿತ್ತು. ಆದರೂ ಪಕ್ಷ ಬಿಡುವಂತಹ ಅನಿವಾರ್ಯತೆ ಸೃಷ್ಟಿಯಾಗಿತ್ತು ಎಂದು ಅವರ ಆಪ್ತ ವಲಯ ಹೇಳುತ್ತದೆ.

ಎಸ್. ಎಂ. ಕೃಷ್ಣ ಅವರಿಗೆ ಕಾಂಗ್ರೆಸ್ ಸಚಿವ, ಕೇಂದ್ರ ಸಚಿವ, ಮುಖ್ಯಮಂತ್ರಿ ರಾಜ್ಯಪಾಲ ...ಹೀಗೆ ಎಲ್ಲವನ್ನೂ ಕೊಟ್ಟಿತ್ತು. ಆದರೂ ಅವರು ಜೀವನದ ಸಂಧ್ಯಾಕಾಲದಲ್ಲಿ ಬಿಜೆಪಿ ಸೇರ್ಪಡೆಯಾದರು.

ಶೆಟ್ಟರ್ ಅವರು ತ್ಯಾಗ ಮನೋಭಾವವನ್ನು ಪ್ರದರ್ಶಿಸಬಹುದಿತ್ತು ಎಂದು ಕೆಲವರು ವಾದಿಸಬಹುದು. ವಯೋಮಾನದ ನೆಪವೊಡ್ಡಿ ರಾಜಕೀಯ ನಿವೃತ್ತಿ ಪಡೆಯುವಂತೆ ಶೆಟ್ಟರ್ ಅವರಿಗೆ ಸೂಚನೆ ಕೇಂದ್ರ ಸಚಿವ ಧರ್ಮೇಂದ್ರ ಪ್ರಧಾನ್ ತಿಳಿಸಿದ್ದಾರೆ. ಈ ಪ್ರಸ್ತಾಪಕ್ಕೆ ಶೆಟ್ಟರ್ ಒಪ್ಪಿಗೆ ನೀಡಿಲ್ಲ. ಕೊನೆಗೆ ವರಿಷ್ಠರು ನಿಮ್ಮನ್ನು ಬಿಟ್ಟು ನಿಮ್ಮ ಪತ್ನಿ ಅಥವಾ ಮಕ್ಕಳಿಗೆ ಟಿಕೆಟ್ ನೀಡುವ ಭರವಸೆ ಮುಂದಿಟ್ಟಿದ್ದಾರೆ. ನನಗೆ ಏಕೆ ಟಿಕೆಟ್ ನಿರಾಕರಿಸಲಾಗುತ್ತಿದೆ ಎಂಬ ಒಂದೇ ಒಂದು ಪ್ರಶ್ನೆಗೆ ಉತ್ತರ ಕೊಡಿ ಎಂದಾಗ ಪ್ರಹ್ಲಾದ ಜೋಶಿ, ಬಸವರಾಜ ಬೊಮ್ಮಾಯಿ ಧರ್ಮೇಂದ್ರ ಪ್ರಧಾನ್ ನಿರುತ್ತರರಾಗುತ್ತಾರೆ.

ಈ ಮಧ್ಯೆ ಮುಖ್ಯಮಂತ್ರಿ ಹುದ್ದೆಗೆ ಪ್ರಹ್ಲಾದ ಜೋಶಿ ಅವರನ್ನು ಪ್ರತಿಷ್ಠಾಪನೆ ಮಾಡಲು ಹೈ ಕಮಾಂಡ್ ಮತ್ತು ಸಂಘ ಪರಿವಾರ ಈಗಾಗಲೇ ನಿರ್ಧಾರ ಮಾಡಿದೆ. ಇವರಿಗೆ ಎದುರಾಗಬಹದಾದ ಹಿರಿಯರನ್ನು ಅಖಾಡಾದಲ್ಲಿಯೇ ಇಲ್ಲದಂತೆ ಮಾಡುವುದು ಇವರು ಹೆಣೆದಿರುವ ತಂತ್ರ ಎಂದೂ ಮೂಲಗಳು ಹೇಳುತ್ತವೆ. ನಂತರ ಪಕ್ಷದೊಳಗಿನ ವೀರಶೈವ ಲಿಂಗಾಯತ, ಒಕ್ಕಲಿಗ ಸೇರಿದಂತೆ ಎಲ್ಲ ಸಮುದಾಯಗಳ ಶಾಸಕರು ಮತ್ತು ಕಾರ್ಯಕರ್ತರು ಹೈ ಕಮಾಂಡ್ ಹೇಳಿದ್ದನ್ನು ಒಪ್ಪಿಕೊಳ್ಳಬೇಕಾಗುತ್ತದೆ. ಒಪ್ಪಿಕೊಳ್ಳಲೇಬೇಕಾದ ಅನಿವಾರ್ಯತೆ ಬೆಳೆದಿರುತ್ತದೆ. ಒಬ್ಬ ವ್ಯಕ್ತಿಗೆ ಗೆಲ್ಲಿಸುವ ಸಂಪೂರ್ಣ ಶಕ್ತಿ ಇಲ್ಲದೆ ಇರಬಹುದು. ಆದರೆ ಸೋಲಿಸುವಷ್ಟು ಸಾಮರ್ಥ್ಯ ಇದ್ದೇ ಇರುತ್ತದೆ. ಶೆಟ್ಟರ್ ಅವರ ನಿರ್ಗಮನ ನಿಶ್ಚಿತವಾಗಿ ಬಿಜೆಪಿ ಫಲಿತಾಂಶದ ಮೇಲೆ ಪರಿಣಾಮ ಬೀರದೆ ಇರದು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.

Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089